ಸಂಪುಟ: 05 ಸಂಚಿಕೆ: 228 ಪುಟಗಳು: 08 ಭಾನುವಾರ 02 ನವೆಂಬರ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಗುರು ಎಂದರೆ ವ್ಯಕ್ತಿಯಲ್ಲ, ಒಂದು ಶಕ್ತಿ. ಅಜ್ಞಾನದ ಕತ್ತಲೆಯ ಕಳೆದು ಸುಜ್ಞಾನದೆಡೆಗೆ ಕರೆದುಕೊಂಡು ಹೋಗುವ ಶಬ್ದವೇ ಗುರು.

ಉದಯ ವಾಹಿನಿ

ವರದಿಗಾರರು ಬೇಕಾಗಿದ್ದಾರೆ

ಎಂಎ., ಜರ್ನಲಿಸಂ ಮಾಡಿರುವಂತಹ ಉತ್ಸಾಹಿ ಯುವಕ ಯುವತಿಯರು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟಗಳಲ್ಲಿ ಕೆಲಸ ಮಾಡುವಂತಹ

ರಾಜ್ಯಾದ್ಯಂತ ವರದಿಗಾರರು ಬೇಕಾಗಿದ್ದಾರೆ

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:

9448225696
+91 8035841833

#: 1230 'JAYAMAHAL 13th cross, 2nd phase, Girinagar, Bangalore-560085. (Near to Bangalore one park, opposite mandya medical)
udayavahininews@gmail.com

## ಹಿಂದಿ ಹೇರಿಕೆಗೆ ಮುನ್ನುಡಿ ಸಿದ್ದರಾಮಯ್ಯ ಸಿಡಿಮಿಡಿ

ಕೇಂದ್ರದ ವಿರುದ್ಧ ವಾಗ್ದಾಳಿ






## ಕನ್ನಡ ರಾಜ್ಯೋತ್ಸವದಲ್ಲಿ ಹಿಂದಿ ಹೇರಿಕೆ ವಿರುದ್ಧ ಸಿಡಿದೆದ್ದ ಸಿಎಂ

### ಕನ್ನಡ ಏಕೀಕರಣಕ್ಕಾಗಿ ಹೋರಾಟ ನಡೆಸಿದ ಮಹನೀಯರನ್ನು ನೆನೆದ ಸಿಎಂ!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಕನ್ನಡ ರಾಜ್ಯೋತ್ಸವದ ಸಂಭ್ರಮ ಮನೆ ಮಾಡಿದೆ. ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಿಂದೆ ಹೇರಿಕೆ ವಿರುದ್ಧ ಸಿಡಿದೆದ್ದಿದ್ದಾರೆ. ಅಲ್ಲದೇ ಕೇಂದ್ರ ಸರ್ಕಾರದ ವಿರುದ್ಧವೂ ವಾಗ್ದಾಳಿ ನಡೆಸಿದ್ದಾರೆ. ಸಿಎಂ ಸಿದ್ದರಾಮಯ್ಯ ಮಾಡಿದ ಭಾಷಣವು ಕನ್ನಡ ನಾಡು-ನುಡಿಯ ಗೌರವ, ಏಕೀಕರಣ ಹೋರಾಟ ಮತ್ತು ಭಾಷಾ ಸಮಸ್ಯೆಗಳ ಬಗ್ಗೆ ಆಳವಾದ ಚಿಂತನೆಯನ್ನು ಒಳಗೊಂಡಿತ್ತು.

ಸಿಎಂ ಸಿದ್ದರಾಮಯ್ಯ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಮಾಡಿದ ಈ ಭಾಷಣವು ರಾಜ್ಯದ ಜನತೆಗೆ ಸ್ಫೂರ್ತಿ ನೀಡುವಂತಿದ್ದರೆ, ಕೇಂದ್ರ ಸರ್ಕಾರದ ನೀತಿಗಳ ವಿರುದ್ಧ ತೀಕ್ಷ್ಣ ಟೀಕೆಯನ್ನೂ ಒಳಗೊಂಡಿತ್ತು.

ಕನ್ನಡ ರಾಜ್ಯ 69 ವರ್ಷಗಳನ್ನು ಪೂರೈಸಿ, 70ನೇ ವರ್ಷಕ್ಕೆ ಕಾಲಿಡುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಈ ಸಂದರ್ಭದಲ್ಲಿ ಕನ್ನಡ ಏಕೀಕರಣಕ್ಕಾಗಿ ಹೋರಾಟ ನಡೆಸಿದ ಮಹನೀಯರನ್ನು ನೆನೆಯುವುದು ನಮ್ಮೆಲ್ಲರ ಕರ್ತವ್ಯ ಎಂದು ಒತ್ತಿ ಹೇಳಿದರು.

ಕನ್ನಡ ನಾಡು-ನುಡಿಗೆ ಕೊಡುಗೆ ನೀಡಿದವರನ್ನು ಸ್ಮರಿಸುವ ಮೂಲಕ ರಾಜ್ಯದ ಇತಿಹಾಸವನ್ನು ಗೌರವಿಸಬೇಕು ಎಂಬುದು ಅವರ ಸಂದೇಶವಾಗಿತ್ತು. ಸಾವಿರಾರು ವರ್ಷಗಳ ಇತಿಹಾಸವುಳ್ಳ ಕನ್ನಡ ಭಾಷೆಯನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಬೇಕು ಎಂದು ಆಗ್ರಹಿಸಿದರು.

**ಕೇಂದ್ರ ಸರ್ಕಾರದ ವಿರುದ್ಧ ಸಿಎಂ ಸಿದ್ದರಾಮಯ್ಯ ತೀವ್ರ ವಾಗ್ದಾಳಿ!:** ಕೇಂದ್ರ ಸರ್ಕಾರದ ವಿರುದ್ಧ ಸಿಎಂ ಸಿದ್ದರಾಮಯ್ಯ ತೀವ್ರ ವಾಗ್ದಾಳಿ ನಡೆಸಿದರು. ರಾಜ್ಯದ ಅಭಿವೃದ್ಧಿಗೆ ಬೇಕಾದ ಯೋಜನೆಗಳು ಕೇಂದ್ರದಿಂದ ಸಿಗುತ್ತಿಲ್ಲ ಎಂದು ದೂರಿದರು. ಆದರೆ ನಮ್ಮ ಸರ್ಕಾರ ಜನರಲ್ಲಿ ಕನ್ನಡ ಪ್ರೀತಿಯನ್ನು ಹೆಚ್ಚಿಸುವ ಕೆಲಸ ಮಾಡುತ್ತಿದೆ ಎಂದು ಹೇಳಿಕೊಂಡರು. ಉದಾಹರಣೆಗೆ, ವಿಧಾನಸೌಧದಲ್ಲಿ ಭುವನೇಶ್ವರಿ ದೇವಿಯ ಪ್ರತಿಮೆಯನ್ನು ಸ್ಥಾಪಿಸಲಾಗಿದೆ. ಕರ್ನಾಟಕದ ವಾಣಿಜ್ಯ ಮಳಿಗೆಗಳಲ್ಲಿ ನಾಮಫಲಕಗಳಲ್ಲಿ 60 ಪ್ರತಿಶತ ಕನ್ನಡವನ್ನು ಕಡ್ಡಾಯಗೊಳಿಸಲಾಗಿದೆ ಎಂದರು.

ಸಿಎಂ ಸಿದ್ದರಾಮಯ್ಯ ಭಾಷಣದಲ್ಲಿ ಬೂಕರ್ ಪ್ರಶಸ್ತಿ ವಿಜೇತೆ ಭಾನು ಮುಷ್ತಾಕ್ ಅವರನ್ನು ನೆನೆದು ಅವರಿಗೆ ಅಭಿನಂದನೆ ಸಲ್ಲಿಸಿದರು. ಕನ್ನಡ ಸಾಹಿತ್ಯದ ಹೆಮ್ಮೆಯಾಗಿರುವ ಭಾನು ಅವರ ಸಾಧನೆಯು ರಾಜ್ಯಕ್ಕೆ ಗರ್ವ ತಂದಿದೆ ಎಂದು ಹೇಳಿದರು.

ಒಟ್ಟಾರೆ, ಸಿಎಂ ಸಿದ್ದರಾಮಯ್ಯ ಅವರ ಭಾಷಣವು ಕನ್ನಡದ ಗೌರವವನ್ನು ಕಾಪಾಡುವ, ಭಾಷಾ ನೀತಿಯಲ್ಲಿ ಸಮಾನತೆ ಬೇಡುವ ಮತ್ತು ರಾಜ್ಯದ ಅಭಿವೃದ್ಧಿಗಾಗಿ ಹೋರಾಡುವ ಸಂದೇಶವನ್ನು ಒಳಗೊಂಡಿತ್ತು. ಈ ರಾಜ್ಯೋತ್ಸವವು ಕನ್ನಡಿಗರಲ್ಲಿ ಒಗ್ಗಟ್ಟನ್ನು ಬೆಳೆಸಲಿ ಎಂಬುದು ಅವರ ಆಶಯ.

### ಹಿಂದಿ ಹೇರಿಕೆ ಬಗ್ಗೆ ಸಿಎಂ ಸಿದ್ದರಾಮಯ್ಯ ಕಿಡಿ!

ಶಿಕ್ಷಣ ಕ್ಷೇತ್ರದಲ್ಲಿ ಕನ್ನಡ ಭಾಷಾ ಸಮಸ್ಯೆಗಳ ಬಗ್ಗೆ ಸಿಎಂ ಸಿದ್ದರಾಮಯ್ಯ ಆತಂಕ ವ್ಯಕ್ತಪಡಿಸಿದರು. ಇಂಗ್ಲಿಷ್ ಮತ್ತು ಹಿಂದಿ ಭಾಷೆಗಳು ನಮ್ಮ ಮಕ್ಕಳ ಪ್ರತಿಭೆಯನ್ನು ದುರ್ಬಲಗೊಳಿಸುತ್ತಿವೆ ಎಂದು ಆರೋಪಿಸಿದರು. ಹೀಗಾಗಿ ಮಾತೃಭಾಷೆಯಲ್ಲಿ ಶಿಕ್ಷಣವನ್ನು ಕಡ್ಡಾಯವಾಗಿ ಜಾರಿಗೆ ತರಬೇಕು ಎಂಬ ಬೇಡಿಕೆ ಇಟ್ಟರು. ಕೇಂದ್ರ ಸರ್ಕಾರಕ್ಕೆ ಈ ಬಗ್ಗೆ ಗಮನ ಹರಿಸಬೇಕು ಎಂದು ಒತ್ತಾಯಿಸಿದರು. ಹಿಂದಿ ಭಾಷೆಯನ್ನು ಹೇರಲು ನಿರಂತರ ಪ್ರಯತ್ನ ನಡೆಯುತ್ತಿದೆ ಎಂದು ಟೀಕಿಸಿ, ಹಿಂದಿ ಅಭಿವೃದ್ಧಿಗೆ ಮಾತ್ರ ಅನುದಾನ ನೀಡಲಾಗುತ್ತಿದೆ ಎಂಬುದನ್ನು ಎತ್ತಿ ತೋರಿಸಿದರು. ಇದು ಕರ್ನಾಟಕ ವಿರೋಧಿ ನೀತಿ ಎಂದು ಕರೆಯಬೇಕಾದ್ದು, ಎಲ್ಲರೂ ಇದನ್ನು ಖಂಡಿಸಬೇಕು ಎಂದು ಕರೆ ನೀಡಿದರು.

### ಎಂಇಎಸ್ ಪುಂಡರ ಜೊತೆ ಸೆಲ್ಫಿ

ಕನ್ನಡ ರಾಜ್ಯೋತ್ಸವದಂದು ಕಪ್ಪು ಬಟ್ಟೆ ಧರಿಸಿ ಕರಾಳ ದಿನಾಚರಣೆ ಆಚರಿಸಲು ಬಂದಿದ್ದ ಎಂಇಎಸ್ ಪುಂಡರ ಜೊತೆ ಮಾಳ ಮಾರುತಿ ಠಾಣೆಯ ಸಿಪಿಐ ಜಾಕೀರ್ ಪಾಷಾ ಕಾಲಿಮಿರ್ಚಿ ಸೆಲ್ಫಿ ಕ್ಲಿಕ್ಕಿಸಿಕೊಂಡು ಯಡವಟ್ಟು ಮಾಡಿಕೊಂಡಿದ್ದಾರೆ. ಬೆಳಗಾವಿಯ ಸಂಭಾಜಿ ಉದ್ಯಾನವನದಲ್ಲಿ ಕರ್ನಾಟಕ ಸರ್ಕಾರದ ವಿರುದ್ಧ ಕರಾಳ ದಿನ ಆಚರಣೆಗಾಗಿ ನಾಡದ್ರೋಹಿ ಎಂಇಎಸ್ ಮುಖಂಡ ಶುಭಂ ಶೆಳಕೆ ಹಾಗೂ ಸಹಚರರು ಬಂದಿದ್ದರು. ಈ ವೇಳೆ ಅವರ ಜೊತೆ ಸಿಪಿಐ ಸೆಲ್ಫಿ ತಗೆದುಕೊಂಡಿದ್ದಾರೆ. ಸಿಪಿಐ ನಡೆ ವಿರುದ್ಧ ಕನ್ನಡಿಗರು ಆಕ್ರೋಶ ಹೊರಹಾಕುತ್ತಿದ್ದಾರೆ. ಕನ್ನಡಿಗರ ಭಾವನೆಗಳಿಗೆ ಸಿಪಿಐ ಧಕ್ಕೆ ತಂದ್ರಾ ಎಂಬ ಚರ್ಚೆ ಸಾರ್ವಜನಿಕ ವಲಯದಲ್ಲಿ ಶುರುವಾಗಿದೆ. ಈ ಹಿಂದೆ ಶುಭಂ ಸೆಳಕೆ ವಿರುದ್ಧ ಭಾಷಾ ಸಾಮರಸ್ಯ ಕೆಡಿಸುವ ವಿವಾದಾತ್ಮಕ ಹೇಳಿಕೆ, ಶಾಂತಿ ಭಂಗ ಪಡಿಸಿದ ಹಿನ್ನೆಲೆ ಮಾಳ ಮಾರುತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಕರಾಳಾ ದಿನ ಆಚರಣೆಗೆ ಅನುಮತಿ ಇಲ್ಲ. ಆದರೂ ಮೈದಾನದಲ್ಲಿ ಕರಾಳ ದಿನ ಆಚರಿಸಲು ಎಂಇಎಸ್ ಪುಂಡರು ಮುಂದಾಗಿದ್ದಾರೆ.

### ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಆಗ್ರಹ!

ಕನ್ನಡ ರಾಜ್ಯೋತ್ಸವದಂದೇ ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಆಗ್ರಹಿಸಿದ್ದಾರೆ. ಜೊತೆಗೆ ಪ್ರತ್ಯೇಕ ಧ್ವಜಾರೋಹಣಕ್ಕೂ ಯತ್ನಿಸಿದ್ದು, ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿಯ ನಾಯಕರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಪೊಲೀಸ್ 20ಕ್ಕೂ ಹೆಚ್ಚು ಹೋರಾಟಗಾರರನ್ನು ಬಂಧಿಸಿದ್ದಾರೆ. ಇದು ರಾಜ್ಯೋತ್ಸವದ ಉತ್ಸವವನ್ನು ಮುಂದಿಟ್ಟು, ಕಲ್ಯಾಣ ಕರ್ನಾಟಕದ ಅಭಿವೃದ್ಧಿಯ ಕೊರತೆಯ ಬಗ್ಗೆ ಆಕ್ರೋಶವನ್ನು ವ್ಯಕ್ತಪಡಿಸುತ್ತದೆ. ಸಮಿತಿ ಅಧ್ಯಕ್ಷ ಎಂ.ಎಸ್. ಪಾಟೀಲ್ ನರಿಬೋಳ ಸೇರಿದಂತೆ ಪ್ರಮುಖ ನಾಯಕರು ಬಂಧನಕ್ಕೊಳಗಾಗಿದ್ದಾರೆ.

### ಸಮಗ್ರ ಅಭಿವೃದ್ಧಿಗಾಗಿ ಧ್ವನಿ!

ಹೋರಾಟಗಾರರು ಧರಣಿ ನಡೆಸಿ, ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗಾಗಿ ಧ್ವನಿ ಎತ್ತಿದ್ದರು. ನಂತರ ಸರ್ದಾರ್ ವಲ್ಲಭಭಾಯಿ ಪಟೇಲ್ ಸರ್ಕಲ್‌ನತ್ತ ಮೆರವಣಿಗೆಗೆ ತೆರಳಿದರು. ಇಲ್ಲಿ ಪ್ರತ್ಯೇಕ ರಾಜ್ಯಕ್ಕಾಗಿ ವಿಶೇಷ ಧ್ವಜಾರೋಹಣ ಮಾಡಲು ಯತ್ನಿಸಿದ್ದು, ಆದರೆ, ಬ್ರಹ್ಮಪುರ ಪೊಲೀಸ್ ಠಾಣೆಯ ಸಿಬ್ಬಂದಿ ಮೆರವಣಿಗೆಯನ್ನು ತಡೆಯಂತೆ ಮಾರ್ಗವನ್ನು ಬಂದೋಬಸ್ತ್ ಮಾಡಿದ್ದರು. ಹೋರಾಟಗಾರರು ಮುಂದುವರೆದಾಗ, ಅವರನ್ನು ತಕ್ಷಣ ಬಂಧಿಸಲಾಯಿತು. ಪ್ರತ್ಯೇಕ ರಾಜ್ಯವೇ ಏಕೈಕ ಮಾರ್ಗ ಎಂದು ಹೋರಾಟಗಾರರು ಕೂಗಾಡಿದರು.

## ವೆಂಕಟೇಶ್ವರ ದೇವಸ್ಥಾನದಲ್ಲಿ ಕಾಲ್ತುಳಿತ: 9 ಭಕ್ತರು ಸಾವು

• ಉದಯವಾಹಿನಿ, ಅಮರಾವತಿ

ಆಂಧ್ರಪ್ರದೇಶದ ಕಾಶಿಬುಗ್ಗ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಕಾಲ್ತುಳಿತ ಸಂಭವಿಸಿ 9 ಮಂದಿ ಭಕ್ತರು ಸಾವನ್ನಪ್ಪಿರುವ ಘಟನೆ ನಡೆದಿದೆ.

ದೇವಸ್ಥಾನದ ಆವರಣದಲ್ಲಿ ಭಕ್ತರ ಶವಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿರುವ ಭಯಾನಕ ದೃಶ್ಯಗಳು ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿವೆ. ಕಾಲ್ತುಳಿತ ದುರಂತಕ್ಕೆ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಆಘಾತ ವ್ಯಕ್ತಪಡಿಸಿದ್ದು, ಭಕ್ತರ ಸಾವು ಹೃದಯವಿದ್ರಾವಕ ಎಂದು ವಿಷಾದಿಸಿದ್ದಾರೆ. ಶ್ರೀಕಾಕುಳಂ ಜಿಲ್ಲೆಯ ಕಾಶಿಬುಗ್ಗದಲ್ಲಿರುವ ವೆಂಕಟೇಶ್ವರ ದೇವಸ್ಥಾನದಲ್ಲಿ ನಡೆದ ಕಾಲ್ತುಳಿತ ಘಟನೆ ಆಘಾತವನ್ನುಂಟು ಮಾಡಿದೆ. ಈ ದುರಂತ ಘಟನೆಯಲ್ಲಿ ಭಕ್ತರ ಸಾವು ಅತ್ಯಂತ ಹೃದಯವಿದ್ರಾವಕವಾಗಿದೆ. ಮೃತರ ಕುಟುಂಬಗಳಿಗೆ ನನ್ನ ಸಂತಾಪಗಳು. ಗಾಯಗೊಂಡವರಿಗೆ ತ್ವರಿತ ಮತ್ತು ಸೂಕ್ತ ಚಿಕಿತ್ಸೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ನಾಯ್ಡು ತಿಳಿಸಿದ್ದಾರೆ.

## ರೇವ್ ಪಾರ್ಟಿ ಆರೋಪ 130ಕ್ಕೂ ಹೆಚ್ಚು ಬಂಧನ

• ಉದಯವಾಹಿನಿ, ರಾಮನಗರ

ಕಗ್ಗಲೀಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಹೋಮ್ ಸ್ಟೇ ಒಂದರಲ್ಲಿ ರೇವ್ ಪಾರ್ಟಿ ನಡೆದ ಆರೋಪ ಕೇಳಿಬಂದಿದೆ. ಪಾರ್ಟಿ ನಡೆಯುತ್ತಿದ್ದಾಗಲೇ ಕಗ್ಗಲೀಪುರ ಪೊಲೀಸರು ದಾಳಿ ನಡೆಸಿದ್ದಾರೆ. ಈ ವೇಳೆ ಅಲ್ಲಿದ್ದ 130ಕ್ಕೂ ಹೆಚ್ಚು ಯುವಕ, ಯುವತಿಯರನ್ನು ಬಂಧಿಸಲಾಗಿದೆ.

ಬಂಧಿತರೆಲ್ಲರೂ ಬೆಂಗಳೂರು ಮೂಲದವರು ಎಂದು ತಿಳಿದು ಬಂದಿದೆ. ಸುಮಾರು ಮಧ್ಯರಾತ್ರಿ 3ಗಂಟೆಗೆ ಪೊಲೀಸರು ದಾಳಿ ನಡೆಸಿದ್ದಾರೆ ಎಂದು ತಿಳಿದು ಬಂದಿದೆ. ಪಾರ್ಟಿಯಲ್ಲಿ ಮಾದಕ ವಸ್ತುಗಳ ಬಳಕೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ.

ಬಂಧಿತ ಆರೋಪಿಗಳಿಗೆ ರಾಮನಗರ ಜಿಲ್ಲಾಸ್ಪತ್ರೆಯಲ್ಲಿ ಮೆಡಿಕಲ್ ಟೆಸ್ಟ್ ಮಾಡಲಾಗಿದೆ. ಹೋಮ್ ಸ್ಟೇ, ಸುಹಾಸ್ ಗೌಡ ಎಂಬುವವರಿಗೆ ಸೇರಿದ್ದು ಎಂದು ತಿಳಿದು ಬಂದಿದೆ.

## ಮಧ್ಯರಾತ್ರಿ ಜಿಟಿಜಿಟಿ ಮಳೆಯಲ್ಲೇ ಆಚರಣೆ

• ಉದಯವಾಹಿನಿ, ಬೆಳಗಾವಿ

ಗಡಿನಾಡು ಬೆಳಗಾವಿಯಲ್ಲಿ ಮಧ್ಯರಾತ್ರಿಯೇ ಕನ್ನಡ ರಾಜ್ಯೋತ್ಸವ ಸಂಭ್ರಮ ಮನೆ ಮಾಡಿತ್ತು. ನಗರದ ಚೆನ್ನಮ್ಮ ವೃತ್ತದಲ್ಲಿ ರಾಜ್ಯೋತ್ಸವದ ಸಂಭ್ರಮಾಚರಣೆ ಮಾಡಲಾಯಿತು. ಜಿಟಿಜಿಟಿ ಮಳೆಯಲ್ಲೇ ಸಾವಿರಾರು ಸಂಖ್ಯೆಯಲ್ಲಿ ಜಮಾಯಿಸಿದ ಕನ್ನಡಾಭಿಮಾನಿಗಳು ಕನ್ನಡ ಹಾಡುಗಳಿಗೆ ಹೆಜ್ಜೆ ಹಾಕಿದರು.

ಇದೇ ಮೊದಲ ಬಾರಿಗೆ ರಾಜ್ಯೋತ್ಸವದಲ್ಲಿ ಸಿಡಿಮದ್ದು ಸಿಡಿಸಲಾಯಿತು. ಬಾನಲ್ಲಿ ಕನ್ನಡಮ್ಮನ ಚಿತ್ತಾರ ಮೂಡಿತು. ಕರ್ನಾಟಕ ರಕ್ಷಣಾ ವೇದಿಕೆ ನಾರಾಯಣ ಗೌಡ ಬಣದ ಕಾರ್ಯಕರ್ತರ ನೇತೃತ್ವದಲ್ಲಿ ಸಿಡಿಮದ್ದಿನ ಪ್ರದರ್ಶನ ಮಾಡಲಾಯ್ತು.

ಮಧ್ಯರಾತ್ರಿಯಲ್ಲೇ ಬಣ್ಣಬಣ್ಣದ ಸಿಡಿಮದ್ದುಗಳ ಚಿತ್ತಾರಕ್ಕೆ ಕನ್ನಡಿಗರು ಫಿದಾ ಆದರು. ವರ್ಷದಿಂದ ವರ್ಷಕ್ಕೆ ಕರ್ನಾಟಕದ ಗಡಿ ಜಿಲ್ಲೆ ಬೆಳಗಾವಿಯಲ್ಲಿ ಕನ್ನಡದ ಘಮಲು ಹೆಚ್ಚಾಗುತ್ತಿದೆ. ಕನ್ನಡ ಧ್ವಜಗಳ ಹಾರಾಟ ನಡೆಸಿ, ಡಿಜೆ ಹಾಡುಗಳಿಗೆ ಕುಣಿದು ಕುಪ್ಪಳಿಸಿದರು.

## ಕಾಂಗ್ರೆಸ್‌ನಂತೆ ಬಿಜೆಪಿಯಲ್ಲೂ ನವೆಂಬರ್ ಕ್ರಾಂತಿ!

### ● ವಿಪಕ್ಷ ನಾಯಕರದ್ದೊಂದು ಬಣ ಆದ್ರೆ, ರಾಜ್ಯಾಧ್ಯಕ್ಷರದ್ದು ಒಂದು ಬಣ

• ಉದಯವಾಹಿನಿ, ಬೆಂಗಳೂರು


ರಾಜ್ಯ ಬಿಜೆಪಿ ಅನ್ನೋದು ಮನೆಯೊಂದು ಮೂರು ಬಾಗಿಲು ಅನ್ನೋದು ಎಲ್ಲರಿಗೂ ಗೊತ್ತಿರುವ ಸಂಗತಿ. ವಿಪಕ್ಷ ನಾಯಕರದ್ದೊಂದು ಬಣ ಆದ್ರೆ, ರಾಜ್ಯಾಧ್ಯಕ್ಷರದ್ದು ಒಂದು ಬಣ.. ರೆಬೆಲ್ ಬಣ ಒಂದು ಆದ್ರೆ, ಮತ್ತೊಂದು ಅಲ್ಲೂ ಸಲ್ಲುವವರು, ಇಲ್ಲೂ ಸಲ್ಲುವವರು ಅನ್ನುವವರದ್ದೊಂದು ಬಣ.. ಈ ಬಣಗಳ ಮಧ್ಯೆ ಅಯ್ಯೋ ಪಾಪ ಅನ್ನೋ ಪಾಡು ಮಾತ್ರ ಕಾರ್ಯಕರ್ತರದ್ದು.


ಹೌದು.. ರಾಜ್ಯ ಬಿಜೆಪಿಯಲ್ಲಿ ಎಲ್ಲವೂ ಸರಿಯಿಲ್ಲ ಅನ್ನೋದು ಗುಟ್ಟಾಗಿ ಇರುವ ಸುದ್ದಿಯಲ್ಲ.ಒಬ್ಬರೊಬ್ಬರದ್ದು ಒಬ್ಬೊಬ್ಬರು ಕಾಲೆಳೀತಾನೇ ಇರ್ತಾರೆ.

ಈತನ್ಮಧ್ಯೆ ರಾಜ್ಯ ಕಾಂಗ್ರೆಸ್‌ನಲ್ಲಿ ನವೆಂಬರ್ ಕ್ರಾಂತಿ ನಡೆಯಲಿದೆ ಅನ್ನೋದು ಸದ್ಯದ ಲೇಟೆಸ್ಟ್ ಸುದ್ದಿ. ರಾಜ್ಯದಲ್ಲಿ ಸಿಎಂ ಬದಲಾವಣೆ ಆಗದಿದ್ದರೂ ಸಹ ಸಂಪುಟ ಪುನಾರಚನೆ ಅಥವಾ ವಿಸ್ತರಣೆ ಆಗೋದು ಖಂಡಿತಾ ಅನ್ನೋದು 99% ನಂಬಲರ್ಹ ಮೂಲಗಳ ಸುದ್ದಿ. ಬಿಹಾರ ಚುನಾವಣೆ ನಡೆದ ಬೆನ್ನಲ್ಲೇ ರಾಜ್ಯದಲ್ಲಿ ಸರ್ಕಾರಕ್ಕೆ ಸರ್ಜರಿ ನಡೆಯಲಿದೆ.

### ವಿಜಯೇಂದ್ರ ಪಟ್ಟಕ್ಕೆ ಬರುತ್ತಾ ಕುತ್ತು?

ಈತನ್ಮಧ್ಯೆ ಕಾಂಗ್ರೆಸ್ ಜೊತೆಗೆ ಬಿಜೆಪಿಯಲ್ಲೂ ನವೆಂಬರ್ ಕ್ರಾಂತಿ ನಡೆಯಲಿದೆ ಅನ್ನೋ ಸುದ್ದಿ ಸದ್ಯ ರಾಜಕೀಯ ಪಡಸಾಲೆಯಲ್ಲಿ ಹರಿದಾಡ್ತಿದೆ. ಇದಕ್ಕೆ ಪೂರಕವೆಂಬಂತೆ ರೆಬೆಲ್ ಟೀಮ್ ಈಗಾಗಲೇ ಅಲರ್ಟ್ ಆಗಿದ್ದು ಒಂದೆಡೆ ಸೇರಿ ರಾಜ್ಯಾಧ್ಯಕ್ಷರ ಬದಲಾವಣೆಗೆ ಪಣ ತೊಟ್ಟಿದೆ. ಬಿಹಾರ ಚುನಾವಣೆ ಬಳಿಕ ಕರ್ನಾಟಕದಲ್ಲೂ ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ನಿರೀಕ್ಷೆ ಮಾಡಲಾಗಿದ್ದು, ಅದಕ್ಕಾಗಿ ಬಿಜೆಪಿ ರೆಬೆಲ್ ನಾಯಕರು ಸಭೆ ಸೇರಿದ್ದಾರೆ.





ರೆಬೆಲ್ ನಾಯಕರ ಸಭೆಯಲ್ಲಿ ಬಿಜೆಪಿ ಉಚ್ಚಾಟಿತ ಶಾಸಕ ಬಸನ ಗೌಡ ಪಾಟೀಲ್ ಯತ್ನಾಳ್ ಹಾಜರಾಗಿದ್ದು, ಜೊತೆಗೆ ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ ಸೇರಿ ಬಸನಗೌಡ ಪಾಟೀಲ್ ಯತ್ನಾಳ್ ಜೊತೆ ಚರ್ಚೆ ನಡೆಸಿದ್ದಾರೆ. ಮಾಜಿ ಶಾಸಕ ಕುಮಾರ್ ಬಂಗಾರಪ್ಪ ಅವರ ಸದಾಶಿವನಗರದ ನಿವಾಸದಲ್ಲಿ ನಡೆದ ಸಭೆಯಲ್ಲಿ ರೆಬೆಲ್ ತಂಡದ ಮುಂದಿನ ನಡೆ ಹಾಗೂ ವಿಜಯೇಂದ್ರ ಬದಲಾವಣೆಗೆ ವರಿಷ್ಠರಿಗೆ ಮತ್ತೊಮ್ಮೆ ಏನೆಲ್ಲ ಹೇಳಬೇಕೆಂದು ಚರ್ಚೆ ನಡೆಸಿದ್ದಾರೆ.

ಬಿಜೆಪಿಯಿಂದ ಉಚ್ಚಾಟನೆಗೊಂಡರೂ ಸಹ ರಮೇಶ್ ಜಾರಕಿಹೊಳಿ ಮತ್ತು ಕುಮಾರ್ ಬಂಗಾರಪ್ಪ ಅವರು ಬಸನಗೌಡ ಪಾಟೀಲ್ ಯತ್ನಾಳ್ ಸಖ್ಯವನ್ನು ಬಿಟ್ಟಿಲ್ಲ ಅನ್ನೋದು ಈ ರಹಸ್ಯ ಸಭೆಯ ಮೂಲಕ ಜಗಜ್ಜಾಹೀರಾಗಿದೆ.

ರಾಜ್ಯದಲ್ಲಿ ಸಿಎಂ ಬದಲಾವಣೆ ಆಗದಿದ್ದರೂ ಸಹ ಸಂಪುಟ ಪುನಾರಚನೆ ಅಥವಾ ವಿಸ್ತರಣೆ ಆಗೋದು ಖಂಡಿತಾ ಅಂತಾ ಹೇಳಲಾಗ್ತಿದೆ. ಅದರಂತೇ ಬಿಜೆಪಿಯಲ್ಲೂ ಸಹ ನವೆಂಬರ್ ಕ್ರಾಂತಿ ನಡೆಯುತ್ತಾ ಅನ್ನೋದನ್ನು ಕಾದು ನೋಡಬೇಕಿದೆ.

## ವಿಶ್ವಕರ್ಮ ಸಮುದಾಯದ ಚಿನ್ನ ಬೆಳ್ಳಿ ಕೆಲಸಗಾರರ ಸಹಾಯಕ್ಕೆ ಸರ್ಕಾರ ಮುಂದಾಗುವಂತೆ ಮನವಿ

• ಬಾಣಾವರ ಉಮೇಶ್,
ಉದಯವಾಹಿನಿ ಬೆಂಗಳೂರು

ಕರ್ನಾಟಕ ರಾಜ್ಯದಲ್ಲಿ ದಿನೇ ದಿನೇ ಚಿನ್ನ ಬೆಳ್ಳಿ ಬೆಲೆಯೂ ಕಳೆದ ಹಲವಾರು ತಿಂಗಳುಗಳಿಂದ ಬಾರಿ ಏರಿಳಿತ ಕಂಡಿದ್ದರ ಪರಿಣಾಮದಿಂದ ಚಿನ್ನ ಬೆಳ್ಳಿ ಕೆಲಸ ನಡೆಸಿ ಜೀವನ ನಡೆಸುತ್ತಿರುವ ಲಕ್ಷಾಂತರ ಕುಟುಂಬಗಳ ಆರ್ಥಿಕ ವ್ಯವಸ್ಥೆ ಬುಡ ಮೇಲಾಗಿದ್ದು ಜೀವನ ನಿರ್ವಹಣೆಯೂ ಸಹ ಕಷ್ಟಕರವಾಗಿದ್ದು ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ್ ಅವರನ್ನು ಶೀಘ್ರದಲ್ಲಿ ನಮ್ಮ ಸಮುದಾಯದ ಮುಖಂಡರನ್ನು ಕರೆದುಕೊಂಡು ಹೋಗಿ ಸರ್ಕಾರ ಕೂಡಲೇ ಚಿನ್ನ ಬೆಳ್ಳಿ ಕೆಲಸಗಾರರ ಸಂಕಷ್ಟಕ್ಕೆ ಧಾವಿಸಬೇಕೆಂದು ಮನವಿ ಮಾಡಲಾಗುವುದೆಂದು ಕರ್ನಾಟಕ ರಾಜ್ಯ ಸರ್ಕಾರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಿ ಸುಜ್ಞಾನಮೂರ್ತಿ ತಿಳಿಸಿದರು.

ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ವಿಶ್ವಕರ್ಮ ಸಮುದಾಯ ಭವನವನ್ನು ವೀಕ್ಷಿಸಿ ಮಾತನಾಡಿದ ಅವರು ಸಮುದಾಯದ ಹಲವಾರು ಮುಖಂಡರುಗಳನ್ನು ಉದ್ದೇಶಿಸಿ ಮಾತನಾಡಿ ಅರಸೀಕೆರೆ ತಾಲ್ಲೂಕಿನಲ್ಲಿ ವಿಶ್ವಕರ್ಮ ಸಮುದಾಯ ಭವನ ನಿರ್ಮಾಣವಾಗಲೂ ಅತಿ ಹೆಚ್ಚು ಸಹಕಾರ ನೀಡಿರುವ ಅರಸೀಕೆರೆ ಕ್ಷೇತ್ರದ ಶಾಸಕರಾದ ಶಿವಲಿಂಗೇಗೌಡರಿಗೆ ಮತ್ತು ನಗರಸಭೆ ಅಧ್ಯಕ್ಷರಾದ ಎಂ ಸಮೀವುಲ್ಲಾ ರವರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.



ಲಕ್ಷಾಂತರ ಕುಟುಂಬಗಳ ಆರ್ಥಿಕ ವ್ಯವಸ್ಥೆ ಬುಡಮೇಲು

ನಂತರ ಮಾತನಾಡಿದ ಅವರು ಶಾಸಕರಾದ ಶಿವಲಿಂಗೇಗೌಡರಿಗೆ ಸಣ್ಣಪುಟ್ಟವಿರುವ ಸಮುದಾಯಗಳ ಬಗ್ಗೆ ಇರುವ ಕಾಳಜಿಯ ಬಗ್ಗೆ ಮಾತನಾಡಿದ ಪಿ ಸುಜ್ಞಾನಮೂರ್ತಿ ಶಿವಲಿಂಗೇಗೌಡರನ್ನು ಭೇಟಿ ಮಾಡಿ ರಾಜ್ಯದಲ್ಲಿರುವ ವಿಶ್ವಕರ್ಮ ಸಮುದಾಯದ ಅಸಂಘಟಿತ ಕಾರ್ಮಿಕರಾಗಿರುವ ಬಡಗಿ ಕೆಲಸ ಮತ್ತು ಚಿನ್ನ ಬೆಳ್ಳಿ ಕೆಲಸದಲ್ಲಿ ತೊಡಗಿಕೊಂಡು ಜೀವನ ನಿರ್ವಹಣೆ ನಡೆಸುತ್ತಿರುವ ಸಮುದಾಯದವರಿಗೆ ಕರ್ನಾಟಕ ಸರ್ಕಾರದ ಗೃಹ ಮಂಡಳಿ ಅಧ್ಯಕ್ಷರು ಆಗಿರುವ ಶಿವಲಿಂಗೇಗೌಡರಿಗೆ ಮನೆ ನಿರ್ಮಾಣಕ್ಕೆ ಸರ್ಕಾರದಿಂದ ಸಹಾಯ ಮಾಡುವಂತೆ ಮನವಿ ಮಾಡಲಾಗುವುದು.

ನಂತರ ವಸತಿ ಸಚಿವರಾದ ಜಮೀರ್ ಅಹ್ಮದ್ ಖಾನ್ ರವರನ್ನು ಸಹ ಭೇಟಿ ಮಾಡಿ ಮನವಿ ಸಲ್ಲಿಸಲಾಗುವುದೆಂದು ಕರ್ನಾಟಕ ಸರ್ಕಾರದ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಿ ಸುಜ್ಞಾನಮೂರ್ತಿ ತಿಳಿಸಿದರು .

ಅರಸೀಕೆರೆ ತಾಲ್ಲೂಕು ವಿಶ್ವಕರ್ಮ ಸಮುದಾಯದ ಅಧ್ಯಕ್ಷರಾದ ಯೋಗೇಶ ಚಾರ್ ಉಪಾಧ್ಯಕ್ಷರಾದ ಅಶೋಕ್ ಖಜಾಂಚಿಗಳಾಗಿರುವ ಸುರೇಂದ್ರ ಚಾರ್. ಪ್ರಸನ್ನ ಆಚಾರ್, ಸುರೇಶ್ ನವೀನ್ ಅರಸೀಕೆರೆ ತಾಲ್ಲೂಕು ಡಿಕೆ ಶಿವಕುಮಾರ್ ಅಭಿಮಾನಿ ಸಂಘದ ಅಧ್ಯಕ್ಷರಾದ ಹುಲ್ಲೇಕೆರೆ ದೇವರಾಜ್ ಸೇರಿದಂತೆ ಇನ್ನಿತರ ಸಮುದಾಯದ ಮುಖಂಡರು ಉಪಸ್ಥಿತರಿದ್ದರು

### ಭರವಸೆ ನೀಡಿದ ಶಾಸಕ ಶಿವಲಿಂಗೇಗೌಡ

ಚಿನ್ನ ಬೆಳ್ಳಿ ಕೆಲಸಗಾರರು ಮತ್ತು ಬಡಗಿ ಕೆಲಸಗಾರರ ಹಲವಾರು ಸಮಸ್ಯೆಗಳು ಮತ್ತು ಸತತವಾಗಿ ರಾಜ್ಯದಲ್ಲಿ ಏರಿಳಿತವಾಗುತ್ತಿರುವ ಚಿನ್ನ ಬೆಳ್ಳಿಯ ಬೆಲೆಯಿಂದ ಹಲವಾರು ಕುಟುಂಬಗಳು ಸಂಕಷ್ಟ ಅನುಭವಿಸುತ್ತಿದ್ದು ಇದರಿಂದ ಸರ್ಕಾರದ ಗಮನ ಸೆಳೆಯಬೇಕೆಂದು ಕರ್ನಾಟಕ ಸರ್ಕಾರದ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿರುವ ಸುಜ್ಞಾನಮೂರ್ತಿ ಅರಸೀಕೆರೆ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ಸರ್ಕಾರದ ಗೃಹ ಮಂಡಳಿ ಅಧ್ಯಕ್ಷರಾದ ಕೆಎಂ ಶಿವಲಿಂಗೇಗೌಡ ರೊಂದಿಗೆ ಚರ್ಚಿಸಿದರು ಹಾಗೂ ರಾಜ್ಯದಲ್ಲಿರುವ ಅಸಂಘಟಿತ ಕಾರ್ಮಿಕರಾಗಿ ದುಡಿಯುತ್ತಿರುವ ಚಿನ್ನ ಬೆಳ್ಳಿ ಕೆಲಸಗಾರರಿಗೆ ಹಾಗೂ ಬಡಗಿ ಕೆಲಸಗಾರರಿಗೆ ಮನೆ ನಿರ್ಮಾಣಕ್ಕೆ ಸರ್ಕಾರದಿಂದ ಸಹಾಯ ಮಾಡುವಂತೆ ಸುಜ್ಞಾನಮೂರ್ತಿ ಮನವಿ ಮಾಡಿದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಶಾಸಕ ಶಿವಲಿಂಗೇಗೌಡರು ಬರುವ ವಿಧಾನಸಭಾ ಅಧಿವೇಶನದಲ್ಲಿ ಚಿನ್ನ ಬೆಳ್ಳಿ ಕೆಲಸಗಾರರಿಗೆ ಆಗಿರುವ ಸಂಕಷ್ಟಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಿ ಸರ್ಕಾರದ ಗಮನಸೆಳೆದು ಆಗಿರುವ ಸಂಕಷ್ಟಕ್ಕೆ ಸರ್ಕಾರದಿಂದ ಪರಿಹಾರ ಕಲ್ಪಿಸಲು ಸಾಧ್ಯವಾದಷ್ಟು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆಂದು ಶಾಸಕ ಹಾಗೂ ಗೃಹ ಮಂಡಳಿ ಅಧ್ಯಕ್ಷರಾದ ಕೆಎಂ ಶಿವಲಿಂಗೇಗೌಡ ಭರವಸೆ ನೀಡಿದರು.



**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹12,300/Gram24ct ₹11,275/Gram22ct | ಬೆಳ್ಳಿ: ₹152.00/Gram

# ಎಲ್ಲೆಂದರಲ್ಲಿ ಕಸ ಹಾಕುವವರ ತುರ್ತು ಗಮನಕ್ಕೆ: ಮಹತ್ವದ ಅಪ್ಡೇಟ್ಸ್ ಕೊಟ್ಟ ಡಿಸಿಎಂ

• ಉದಯವಾಹಿನಿ, ಬೆಂಗಳೂರು

ಹಲವು ಮನವಿಯ ನಡುವೆಯೂ ಎಲ್ಲೆಂದರಲ್ಲಿ ಕಸ ಹಾಕುವವರಿಗೆ ಬಿಸಿ ಮುಟ್ಟಿಸಲು ಜಿಬಿಎ ಕಸ ಹಾಕಿದವರ ಮನೆಯ ಮುಂದೆಯೇ, ವಾಪಸ್ ಕಸವನ್ನು ಸುರಿದು, ಎರಡು ಸಾವಿರ ರೂಪಾಯಿ ದಂಡವನ್ನು ವಿಧಿಸಲು ಆರಂಭಿಸಿದೆ. ಈಗಾಗಲೇ, ಬೆಂಗಳೂರಿನ ವಿವಿಧ ಭಾಗಗಳ, ಸುಮಾರು 220 ಮನೆಗಳ ಮುಂದೆ ಕಸವನ್ನು ವಾಪಸ್ ಸುರಿದು ಬಂದಿದೆ. ಜೊತೆಗೆ, ಇದುವರೆಗೆ ಸುಮಾರು ಮೂರು ಲಕ್ಷ ರೂಪಾಯಿ ದಂಡವನ್ನು ಸಂಗ್ರಹಿಸಿದೆ. ಈ ಸಂಬಂಧ, ಉಪ ಮುಖ್ಯಮಂತ್ರಿ ಮತ್ತು ಬೆಂಗಳೂರು ಉಸ್ತುವಾರಿಯೂ ಆಗಿರುವ ಡಿಕೆ ಶಿವಕುಮಾರ್, ಮಹತ್ವದ ಅಪ್ಡೇಟ್ಸ್ ಅನ್ನು ಕೊಟ್ಟಿದ್ದಾರೆ. ಬೆಂಗಳೂರಿನ ನಾಗರೀಕರಲ್ಲಿ ನನ್ನ ಮನವಿ ಏನೆಂದರೆ, ರಸ್ತೆಬದಿಯಲ್ಲಿ ಕಸವನ್ನು ಎಸೆಯುವುದನ್ನು ಮುಂದುವರಿಸಿದರೆ, ಅದು ವಾಪಸ್ ನಿಮ್ಮ ಮನೆಯ ಮುಂದೆ ಬಂದು ಬೀಳುತ್ತದೆ. ಈಗಿರುವ ಸಿಸಿಟಿವಿಯ ಜೊತೆಗೆ, ಇನ್ನೂ ಹೆಚ್ಚಿನ ಸಿಸಿಟಿವಿ ಕ್ಯಾಮರಾಗಳನ್ನು ಪೊಲೀಸ್ ಇಲಾಖೆ ಹಾಗೂ ಪಾಲಿಕೆ ನೆರವಿನಿಂದ ಅಳವಡಿಸಲು ನಿರ್ಧರಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.



ನಗರದ ಕೆಲವೊಂದು ಭಾಗದಲ್ಲಿ, ಬೆಳಗ್ಗೆ ಐದು ಗಂಟೆಗೆ ಜಿಬಿಎ ಮಾರ್ಷಲ್‌ಗಳು, ಕಸ ಹಾಕುವ ಜಾಗದಲ್ಲಿ ಕಾದು ಕುಳಿತಿರುತ್ತಾರೆ. ಗಂಗಾನಗರ ಭಾಗದಲ್ಲಿ, ಕಸ ಹಾಕಿದ ಮಹಿಳೆಯಿಂದಲೇ, ಕಸವನ್ನು ಎತ್ತಿಸಿದ್ದಾರೆ. ಕಸ ಎಸೆಯುವುದನ್ನು ವಿಡಿಯೋ ಮಾಡಲಾಗುತ್ತಿದೆ. ಜೊತೆಗೆ, ಕಸ ತೆಗೆಯಲು ತಕರಾರು ಎತ್ತಿದವರ ಮನೆಯ ಮುಂದೆ ಕಸವನ್ನು ವಾಪಸ್ ಸುರಿಯಲಾಗುತ್ತಿದೆ. ನಗರದಾದ್ಯಂತ ಎಲ್ಲೆಂದರಲ್ಲಿ ಕಸದ ರಾಶಿ ಇರುವ ಸಮಸ್ಯೆ ಕುರಿತು ವ್ಯಾಪಕ ಟೀಕೆ ವ್ಯಕ್ತವಾಗುತ್ತಿತ್ತು. ಅದರಲ್ಲೂ, ದಸರಾ,



ಉದಯವಾಹಿನಿ ಚಿತ್ರ

ದೀಪಾವಳಿಯ ಸಂದರ್ಭದಲ್ಲಂತೂ, ಈ ಸಮಸ್ಯೆ ವಿಪರೀತವಾಗುತ್ತಿತ್ತು. ಜೊತೆಗೆ, ಮಳೆಯೂ ಸುರಿಯುತ್ತಿದ್ದರಿಂದ, ರಸ್ತೆಗಳು ಇನ್ನಷ್ಟು ಗಬ್ಬೆದ್ದು ಹೋಗಿದ್ದವು. ಜಿಬಿಎ ಮಾರ್ಷಲ್ ಮತ್ತು ಅಧಿಕಾರಿಗಳು ಸಾಕಷ್ಟು ಬಾರಿ ನಾಗರೀಕರಲ್ಲಿ ಮನವಿಯನ್ನು ಮಾಡಿದ್ದಾರೆ. ಇಷ್ಟಾದ ಮೇಲೂ, ಸುಧಾರಿಸಿಕೊಳ್ಳದಿದ್ದರೆ ಏನು ಮಾಡಲು ಸಾಧ್ಯ? ಈಗಾಗಲೇ ಸಾಕಷ್ಟು ಜಾಗದಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ. ಇದರಿಂದ ಎಲ್ಲೆಂದರಲ್ಲಿ ಕಸ ಎಸೆಯುವವರನ್ನು ಗುರುತಿಸಿ ಅವರ ಮನೆ ಮುಂದೆಯೇ ಅದೇ ಕಸ ಸುರಿದು ಬುದ್ದಿವಾದ ಹೇಳುವ ಕೆಲಸ ಮಾಡಲಾಗುತ್ತಿದೆ. ಕಸ ಎಸೆಯುವವರಿಗೆ ದಂಡ ವಿಧಿಸುವ ಕೆಲಸವೂ ನಡೆಯುತ್ತಿದೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

**ದಂಡ ವಿಧಿಸುವ ಕೆಲಸ**

ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ ಅಡಿಯಲ್ಲಿ ಬರುವ ಮಾರ್ಷಲ್, ಅಧಿಕಾರಿಗಳು, ನಗರದ ವಿವಿಧ ಭಾಗದಲ್ಲಿ ಸಂಚರಿಸಿ, ಎಲ್ಲೆಲ್ಲಿ ಕಸದ ಬುಟ್ಟಿಗೆ ಹಾಕದೇ, ರಸ್ತೆಯಲ್ಲಿ ಕಸವನ್ನು ಎಸೆಯುತ್ತಿದ್ದಾರೋ, ಅಂತವರ ವಿಡಿಯೋವನ್ನು ಮಾಡುತ್ತಿದ್ದಾರೆ. ನಂತರ, ಮುಂದಿನ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ನಗರದ ತ್ಯಾಜ್ಯ ನಿರ್ವಹಣೆ ಸಂಬಂಧ, ಹಲವು ಅಭಿಯಾನಗಳನ್ನು ನಡೆಸಿದ್ದೆವು. ಇದರ ಜೊತೆಗೆ, ಎಚ್ಚರಿಕೆ ಮತ್ತು ದಂಡವನ್ನು ವಿಧಿಸಲೂ ಆರಂಭಿಸಿದ್ದೆವು. ಆದಾಗ್ಯೂ, ಪರಿಸ್ಥಿತಿಯಲ್ಲಿ ಹೆಚ್ಚಿನ ಸುಧಾರಣೆ ಆಗಿಲ್ಲ. ಈ ನಿಟ್ಟಿನಲ್ಲಿ, ಡಿಕೆ ಶಿವಕುಮಾರ್ ಅವರ ಕಟ್ಟುನಿಟ್ಟಿನ ಸೂಚನೆಯ ಮೇರೆಗೆ ಕಸ ಎಸೆಯುವವರ ಮನೆಯ ಮುಂದೆಯೇ ಕಸ ವಾಪಸ್ ಸುರಿಯುವ ನಿರ್ಧಾರಕ್ಕೆ ಬರಲಾಗಿದೆ ಎಂದು ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ ಅಧಿಕಾರಿಗಳು ಹೇಳಿದ್ದಾರೆ.

ಮುಂಬೈಗೆ ಖಾಸಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ತೆರಳಿದ್ದೆ. ಅಲ್ಲಿಯೂ ಸಹ ಮೂಲೆ, ಮೂಲೆಯಲ್ಲಿ ಕಸ ರಾಶಿ ಬಿದ್ದಿತ್ತು. ಬೇರೆ, ಬೇರೆ ಕಡೆಯಲ್ಲಿಯೂ ಬಿದ್ದಿರಬಹುದು. ಜನರು ತಮಗೆ ಇರುವ ಅವಕಾಶವನ್ನು ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಎಲ್ಲೆಂದರಲ್ಲಿ ಕಸ ಎಸೆಯುವುದನ್ನು ನಿಲ್ಲಿಸಬೇಕು. ಜನರು ಸ್ವಚ್ಛ ಬೆಂಗಳೂರಿಗೆ ಹೆಚ್ಚು ಸಹಕಾರ ನೀಡಬೇಕು ಎಂದು ಡಿಕೆ ಶಿವಕುಮಾರ್ ಮನವಿಯನ್ನು ಮಾಡಿದ್ದಾರೆ.



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

### ಧರ್ಮ

ಧರ್ಮ ಬಾಳು ನೀಡುವಂಥದ್ದು ಒಳ್ಳೆಯದು. ಅದು ಯಾವ ಹೆಸರಿನಲ್ಲಿದ್ದರೇನು ಯಾರು ಎಲ್ಲಿಯವರು ಎಷ್ಟು ಜನ ಯಾವ ಭಾಷೆಯಲ್ಲಿ ಹೇಳಿದರೇನು? ಅವರವರಿಗೆ ತಿಳಿದಂತೆ ಅವರವರು ಹೇಳುವರು. ನಿಮಗೆ ನಿಮ್ಮ ಸಂಸ್ಕಾರ ಬುದ್ಧಿ ತಿಳುವಳಿಕೆ ಅನುಕೂಲಕ್ಕೆ ತಕ್ಕಂತೆ ಧರ್ಮದ ಆಯ್ಕೆ ನಿಮ್ಮದು. ಆದರೆ ಬೇರೆ ಧರ್ಮವನ್ನು ಅವಮಾನಿಸುವ ಧರ್ಮದ ಹೆಸರಿನಲ್ಲಿ ಕಚ್ಚಾಡುವ ಕೊಲ್ಲುವ ಸಾಯುವ ಗೊಡವೆಯೇನು ಧರ್ಮವೇ? ಉದ್ದ ಬಿದ್ದರೇನು ಬಾಗಿ ನಮಿಸಿದರೇನು ಕುಂಕುಮ ಧರಿಸಿದರೇನು ವಿಭೂತಿ ಹಚ್ಚಿದರೇನು ನಮಾಜ್ ಮಾಡಿದರೇನು ಚರ್ಚ್‌ನಲ್ಲಿ ಪ್ರಾರ್ಥಿಸಿದರೇನು ಇಷ್ಟಲಿಂಗವಾದರೇನು ಸ್ಥಾವರಲಿಂಗವಾದರೇನು ಯಾವ ದೇವರಾದರೇನು ಹೇ ಪರಮಾತ್ಮ ಗುರುದೇವ! ನೀನು ದೊಡ್ಡವನು ನನ್ನ ನೀ ಕಾಪಾಡು ಎಂಬ ಭಕ್ತಿಯ ಅಥವಾ ನಾ ನಿನ್ನ ದಾಸ = ದಾಸೋಹಂ, ಆ ಪರಮಾತ್ಮನೇ ನಾನು = ಸೋಹಂ ಎಂಬ ಭಾವ ಮುಖ್ಯ.

## ಗಾನ ಸೇವಾ ಕೈಂಕರ್ಯ

• ಉದಯವಾಹಿನಿ, ಬೆಂಗಳೂರು



ಶ್ರೀ ಯೋಗಾನಂದ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಪ್ರದೋಷ ಅಭಿಷೇಕ ಗಾನ ಸೇವಾ ಕೈಂಕರ್ಯದಲ್ಲಿ ನವೆಂಬರ್ 3, ಸೋಮವಾರ ಸಂಜೆ 6-15ಕ್ಕೆ ವಿದ್ವಾನ್ ಶ್ರೀ ಸಿ. ರಮೇಶ್ ಇವರಿಂದ ಸಂಗೀತ ಸೇವೆಯನ್ನು ಏರ್ಪಡಿಸಿದೆ. ವಾದ್ಯ ಸಹಕಾರ : ವಿದ್ವಾನ್ ಶ್ರೀ ಎಸ್. ಶಶಿಧರ್ (ಪಿಟೀಲು), ವಿದ್ವಾನ್ ಶ್ರೀಅನಂತರಾಮಯ್ಯ (ಮೃದಂಗ). ಸ್ಥಳ : ಶ್ರೀ ಯೋಗಾನರಸಿಂಹ ಸನ್ನಿಧಿ, ಶ್ರೀವೇಣುಗೋಪಾಲಸ್ವಾಮಿ ದೇವಸ್ಥಾನ, 11ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003 ಸರ್ವರಿಗೂ ಆತ್ಮೀಯ ಸುಸ್ವಾಗತ

## ಶೀಘ್ರದಲ್ಲೇ ಆಹಾರ ನಿಗಮದ 386 ನೂತನ ಸಿಬ್ಬಂದಿ ನೇಮಕಾತಿ ಪತ್ರ ವಿತರಣೆ

• ಉದಯವಾಹಿನಿ, ಬೆಂಗಳೂರು

ಆಹಾರ ನಿಗಮದಲ್ಲಿ ನೇಮಕಾತಿ ಪ್ರಕ್ರಿಯೆ ನಡೆದಿದ್ದು, ಶೀಘ್ರದಲ್ಲೇ ಆಹಾರ ನಿಗಮದ 386 ನೂತನ ಸಿಬ್ಬಂದಿಯ ನೇಮಕಾತಿ ಪತ್ರ ವಿತರಣೆ ಮಾಡಲಾಗುವುದು ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು. ವಸಂತನಗರದ ಅಬ್ದುಲ್‌ಕಲಾಂ ಭವನದಲ್ಲಿ ನಡೆದ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ 52ನೇ ವರ್ಷದ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಮೊದಲು ನಿಮಗದಲ್ಲಿ 1500 ಸಾವಿರ ಸಿಬ್ಬಂದಿ ಇದ್ದರು. 200ರಿಂದ 250ಕ್ಕೆ ಇಳಿದಿದೆ. ನೇಮಕಾತಿ ಪ್ರಕ್ರಿಯೆ ನಡೆದಿದೆ. ಮುಖ್ಯಮಂತ್ರಿಗಳು ಈ ನೇಮಕಾತಿ ಆದೇಶಕ್ಕೆ ಅನುಮತಿ ನೀಡಿದ್ದು ಕೆಲವೇ ದಿನಗಳಲ್ಲಿ ಸಿಬ್ಬಂದಿಗೆ ನೇಮಕಾತಿಪತ್ರ ನೀಡಲಾಗುವುದು ಎಂದರು. ಆಹಾರ ನಿಗಮ ಕಳೆದ ವರ್ಷಕ್ಕಿಂತ ಈ ವರ್ಷ ಎಂ ಎಸ್ ಪಿ ಯೋಜನೆಯಡಿ ಆಹಾರ ದಾನ್ಯಗಳ ಖರೀದಿ ಹೆಚ್ಚಾಗಿದೆ. ಮನುಷ್ಯನಿಗೆ ಆರೋಗ್ಯಕರವಾದ ರಾಗಿ ಮತ್ತು ಜೋಳ ಹೆಚ್ಚಿನ ಪ್ರಮಾಣದಲ್ಲಿ ಖರೀದಿ ಕೇಂದ್ರಗಳ ಮೂಲಕ ಖರೀದಿಸಿ ಜನರಿಗೆ ವಿತರಣೆಗೆ ಸಹಕಾರಿಯಾಗಿದೆ ಹಾಗೇಯೇ ಅದರಿಂದ ಬರುವ ಕಮೀಷನ್ ನಿಂದ ನಿಗಮದ ನಿರ್ವಹಣೆಗೂ ಸಹಕಾರಿಯಾಗಿದೆ ಎಂದರು.

ನಿಗಮದ ಅಧ್ಯಕ್ಷ ಬಿ.ಜಿ ಗೋವಿಂದಪ್ಪ ಮಾತನಾಡಿ, ದೇವರಾಜ ಅರಸು ಅವರು ಎರಡು ಬಾರಿ ಮುಖ್ಯಮಂತ್ರಿಯಾಗಿ ಈ ನಿಗಮದ ಸ್ಥಾಪನೆಗೆ ಸಹಕಾರಿಯಾದರು. ಇಂದಿಗೆ ನಿಗಮ 52 ವಸಂತಗಳು ಪೂರೈಸಿದೆ. ಈ ನಿಗಮದಿಂದ ರಾಗಿ ಭತ್ತ ಜೋಳವನ್ನು ಖರೀದಿಸಿ ಅವನ್ನು ರಾಜ್ಯದ ಜನರಿಗೆ ನೀಡಲು ಸಹಕಾರಿಯಾಗಿದೆ ಆಹಾರ ಧನ್ಯವಾದಗಳ ಖರೀದಿಗೆ ರಾಜ್ಯದಾದ್ಯಂತ ಖರೀದಿ ಕೇಂದ್ರ ಗಳನ್ನು ಸ್ಥಾಪಿಸಿ ಅದರಿಂದ ರೈತರಿಗೆ ಬಲ ನೀಡಿದರು ಈ ನಿಗಮಕ್ಕ 386 ನೂತನ ಸಿಬ್ಬಂದಿ ವರ್ಗದವರನ್ನು ನೇಮಕಾತಿ ಮಾಡಲು ಸಹಕಾರಿಯಾಗಿದ್ದಾರೆ ಎಂದು ಹೇಳಿದರು.

## ಒಂಟಿ ಮಹಿಳೆಯರ ಸರ ಎಗರಿಸುತ್ತಿದ್ದ ಕುಖ್ಯಾತ ಐದು ಮಂದಿ ಸರಗಳ್ಳರ ಬಂಧನ



• ಉದಯವಾಹಿನಿ, ಬೆಂಗಳೂರು

ದಾರಿಹೋಕ ಒಂಟಿ ಮಹಿಳೆಯರ ಸರಗಳನ್ನು ಎಗರಿಸುತ್ತಿದ್ದ ಕುಖ್ಯಾತ ಐದು ಮಂದಿ ಸರಗಳ್ಳರನ್ನು ಕೆಂಗೇರಿ ಠಾಣೆ ಪೊಲೀಸರು ಬಂಧಿಸಿ 8 ಲಕ್ಷ ರೂ ಮೌಲ್ಯದ 75 ಗ್ರಾಂ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದ್ದಾರೆ. ಕೆಂಗೇರಿಯ ನವೀನ್ (32), ಮಹೇಶ್ (26), ಸುದೀಪ್ (24), ದರ್ಶನ್ (23) ಮತ್ತು ಮೂಲತಃ ಕೋಲಾರದ ಆರ್‌ಆರ್‌ನಗರದಲ್ಲಿ ವಾಸವಾಗಿದ್ದ ಹರ್ಷವರ್ಧನ್ (23)ಬಂಧಿತ ಸರಗಳ್ಳರು. ಕೆಂಗೇರಿಯ ಕೆಹೆಚ್‌ಬಿ ಪ್ಲಾಟಿನಂ ಅಪಾರ್ಟ್‌ಮೆಂಟ್ ಹಿಂಭಾಗದ ನಿವಾಸಿ ಹೇಮಾವತಿ ಎಂಬುವವರು ಅ.20 ರಂದು ಸಂಜೆ 6.30 ರ ಸುಮಾರಿನಲ್ಲಿ ಕೆಂಗೇರಿ ಉಪನಗರದ 80 ಅಡಿ ರಸ್ತೆಯ ಜೆಕೆ ಮೋಟಾರ್‌ರಸ ಕಾರ್ ಕೇರ್ ಸೆಂಟರ್ ಎದುರಿನ ಫುಟ್‌ಪಾತ್ ಬಳಿ ನಡೆದುಕೊಂಡು ಹೋಗುತ್ತಿದ್ದಾಗ ಬೈಕ್‌ನಲ್ಲಿ ಹಿಂಭಾಲಿಸಿಕೊಂಡು ಬಂದ ಸರಗಳ್ಳರು 75 ಗ್ರಾಂ ತೂಕದ ಎರಡು ಚಿನ್ನದ ಸರಗಳನ್ನು ಎಗರಿಸಿ ಪರಾರಿಯಾಗಿದ್ದರು. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಸರಗಳ್ಳರ ಪತ್ತೆಗಾಗಿ ವಿಶೇಷ ತಂಡವನ್ನು ರಚಿಸಲಾಗಿತ್ತು. ಈ ತಂಡ ಕಾರ್ಯಾಚರಣೆ ನಡೆಸಿ ವಿವಿಧ ಆಯಾಮಗಳಲ್ಲಿ ಮಾಹಿತಿಗಳನ್ನು ಕಲೆಹಾಕಿ ಐದು ಮಂದಿ ಆರೋಪಿಗಳನ್ನು ಪತ್ತೆಹಚ್ಚಿ ಬಂಧಿಸಿ ವಿಚಾರಣೆ ನಡೆಸಿ ಎರಡು ದ್ವಿಚಕ್ರ ವಾಹನಗಳು, ನಾಲ್ಕು ಮೊಬೈಲ್ ಫೋನ್‌ಗಳು 75 ಗ್ರಾಂ ತೂಕದ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದ್ದಾರೆ. ಇವುಗಳ ಒಟ್ಟು ಮೌಲ್ಯ 8 ಲಕ್ಷ ರೂ. ಎಂದು ಅಂದಾಜಿಸಲಾಗಿದೆ. ಈ ಕಾರ್ಯಾಚರಣೆಯನ್ನು ಇನ್ಸ್‌ಪೆಕ್ಟರ್ ಜಗದೀಶ್ ಅವರನ್ನೊಳಗೊಂಡ ಸಿಬ್ಬಂದಿ ತಂಡ ಕೈಗೊಂಡು ಐದು ಮಂದಿ ಸರಗಳ್ಳರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

**ಕನ್ನಡ ತಾಯಿಯ ಸೇವೆ ಮಾಡಲು ಅವಕಾಶ ಸಿಕ್ಕಿದೇ, ಬೆಂಗಳೂರುನಗರ ಜನರ ಸೇವೆ ಮಾಡಲು ಐದು ಪಾಲಿಕೆಗಳ ಸ್ಥಾಪನೆ**

# ಜಿಬಿಎ ನೌಕರರ ಕನ್ನಡ ಸಂಘದಲ್ಲಿ 70ನೇ ಕನ್ನಡ ರಾಜ್ಯೋತ್ಸವ

• ಉದಯವಾಹಿನಿ, ಬೆಂಗಳೂರು

ಜಿಬಿಎ ಕೇಂದ್ರ ಕಛೇರಿಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ನೌಕರರ ಕನ್ನಡ ಸಂಘ(ರಿ)ವತಿಯಿಂದ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಕನ್ನಡ ಧ್ವಜಾರೋಹಣ ಮತ್ತು ಮೇರುನಟ ಕರ್ನಾಟಕ ರತ್ನ ಡಾರಾಜ್ ಕುಮಾರ್, ಕರ್ನಾಟಕ ರತ್ನ ಡಾ.ಪುನೀತ್ ರಾಜ್ ಕುಮಾರ್ ರವರ ಪುತ್ಥಳಿಗೆ ಪುಷ್ಪನಮನವನ್ನು ಮಹೇಶ್ವರರಾವ್ ರವರು, ಮುಖ್ಯ ಆಯುಕ್ತರು ಜಿಬಿಎ, ಮಾಜಿ ಮಹಾಪೌರರಾದ ಜೆ.ಹುಚ್ಚಪ್ಪರವರು, ಆಯುಕ್ತರಾದ ರಾಜೇಂದ್ರ ಚೋಳನ್, ವಿಶೇಷ ಆಯುಕ್ತರಾದ ಹರೀಶ್ ರವರು, ಜಿಬಿಎ ಪಾಲಿಕೆಗಳ- ಅಧಿಕಾರಿ, ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮತ್ತು ಜಿಬಿಎ-ಪಾಲಿಕೆಗಳ ನೌಕರರ ಕನ್ನಡ ಸಂಘದ ಅಧ್ಯಕ್ಷರಾದ ಸಾಯಿಶಂಕರ್ ರವರು ನೇರವೇರಿಸಿದರು.

**ಐದು ಪಾಲಿಕೆಗಳು ಸದಾ ಜನರ ಸೇವೆಗೆ ಸಿದ್ದ**

ಮುಖ್ಯ ಆಯುಕ್ತರಾದ ಮಹೇಶ್ವರರಾವ್ ರವರು ಜನರಿಗೆ ಉತ್ತಮ ಸೇವೆ ನೀಡಲು ಐದು ಪಾಲಿಕೆಗಳು ಸದಾ ಜನರ ಸೇವೆಗೆ ಸಿದ್ದವಾಗಿದೆ. ಕನ್ನಡ ತಾಯಿಯ ಸೇವೆ ಮಾಡುವ ಅವಕಾಶ ಸಿಕ್ಕಿದೆ. ಕನ್ನಡ ರಾಜ್ಯೋತ್ಸವ ದಿನದಂದು ಹಬ್ಬದಂತೆ ಇಡಿ ಕುಟುಂಬ ಸಮೇತರಾಗಿ ಹಬ್ಬವನ್ನು ಆಚರಿಸಬೇಕು ಎಂದು ಹೇಳಿದರು. ಜಿಬಿಎ ಅಧಿಕಾರಿಗಳು, ನೌಕರರು ಮತ್ತು ಶಾಲೆಯ ಮಕ್ಕಳು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ನೌಕರರ ಸ್ವಂತ ವೆಚ್ಚದಲ್ಲಿ ಕಾರ್ಯಕ್ರಮ**

ಕನ್ನಡ ಸಂಘ ಆರಂಭವಾಗಿ 28ವರ್ಷಗಳು ಸಂದಿದೆ. ನಮ್ಮ ಸಂಘದಲ್ಲಿ ಸಾಹಿತಿ, ಹೋರಾಟಗಾರರು, ಕಲಾವಿದರಿಗೆ ಗೌರವಿಸಿ ಸನ್ಮಾನಿಸಲಾಗಿದೆ. ಕನ್ನಡ ಸಂಘದ ವತಿಯಿಂದ ದೇಶ ವಿದೇಶಗಳಲ್ಲಿ ಕನ್ನಡ ನಾಡಿನ ಕಂಪನ್ನು ಹರಿಸಲಾಗುತ್ತಿದೆ. ಜಿಬಿಎಯಿಂದ ಒಂದು ರೂಪಾಯಿ ಅನುದಾನವಿಲ್ಲದೇ ನೌಕರರ ಸ್ವಂತ ವೆಚ್ಚದಲ್ಲಿ ಕಾರ್ಯಕ್ರಮ ಮಾಡಲಾಗುತ್ತಿದೆ. ಪ್ರಾಮಾಣಿಕವಾಗಿ ಕನ್ನಡ ಸೇವೆ ಮಾಡುತ್ತಿದ್ದೇವೆ , ಕನ್ನಡ ಭಾಷೆಗೆ 2500ವರ್ಷಗಳ ಇತಿಹಾಸವಿದೆ, 8 ಜ್ಞಾನಪೀಠ ಪ್ರಶಸ್ತಿ ಲಭಿಸಿದೆ. ನಮ್ಮ ಕನ್ನಡ ಸಂಘವು ನಾಡು, ನುಡಿಗೆ ಸೇವೆ ಸಲ್ಲಿಸಿದ ಗಣ್ಯ ಮಹನೀಯರುಗಳನ್ನು ಗುರುತಿಸಿ ಸನ್ಮಾನಿಸಲಾಗುತ್ತಿದೆ.
- ಜೆ.ಹುಚ್ಚಪ್ಪ

ಕನ್ನಡ ಭಾಷೆ ಉಳಿಸಿ ಬೆಳೆಸಲು ನಮ್ಮ ಸಂಘವು ಸದಾ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದೆ. ಕನ್ನಡ ಭಾಷೆ ವಿಶ್ವ ಭಾಷೆಯಾಗಬೇಕು ಎಂಬ ಆಶಯದಿಂದ ರಾಷ್ಟ್ರ ಮತ್ತು ಅಂತರಾಷ್ಟ್ರ ಮಟ್ಟದಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಿಸಲಾಗುತ್ತಿದೆ. ನೇಪಾಳ, ಕಾಶಿ ಹರಿದ್ವಾರದಲ್ಲಿ ಯಶಸ್ವಿಯಾಗಿ ಕರ್ನಾಟಕ ರಾಜ್ಯೋತ್ಸವ ಆಚರಿಸಲಾಯಿತು. 2025ನವೆಂಬರ್ 22ರಂದು ಜಮ್ಮು, ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಅದ್ದೂರಿಯಾಗಿ ಕರ್ನಾಟಕ ರಾಜ್ಯೋತ್ಸವ ಆಚರಿಸಲಾಗುತ್ತಿದೆ.
-ಎ.ಅಮೃತ್ ರಾಜ್

## ಸ್ವಾಮೀಜಿ ವಿರುದ್ಧ 1 ಕೋಟಿ ರೂ. ಮಾನನಷ್ಟ ಮೊಕದ್ದಮೆ ದಾಖಲು

• ಉದಯವಾಹಿನಿ, ಬೆಂಗಳೂರು

ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ ಹಿನ್ನೆಲೆಯಲ್ಲಿ ಕನೇರಿ ಮಠದ ಪೀಠಾಧಿಪತಿ ಶ್ರೀ ಕಾಡಸಿದ್ಧೇಶ್ವರ ಸ್ವಾಮೀಜಿ ವಿರುದ್ಧ 1 ಕೋಟಿ ರೂ. ಮಾನನಷ್ಟ ಮೊಕದ್ದಮೆ ದಾಖಲಾಗಿದೆ. ರಾಜ್ಯಾದ್ಯಂತ ಬಸವ ಅಭಿಯಾನದ ನೇತೃತ್ವವಹಿಸಿದ್ದ 300ಕ್ಕೂ ಹೆಚ್ಚು ಲಿಂಗಾಯತ ಮಠಾಧಿಪತಿಗಳ ಒಕ್ಕೂಟವು, ಅಶ್ಲೀಲ, ಮಾನಹಾನಿಕರ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿ ಕನೇರಿ ಮಠಾಧಿಪತಿಗಳ ವಿರುದ್ಧ 1 ಕೋಟಿ ರೂ.ಗಳ ಮಾನಹಾನಿ ಮೊಕದ್ದಮೆ ಹೂಡಿದೆ.

ಏತನ್ಮಧ್ಯೆ, ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಬಗ್ಗೆ ಯಾವುದೇ ರೀತಿಯ ಅವಹೇಳನಕಾರಿ ಹೇಳಿಕೆ ನೀಡದಂತೆ ಕನೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿ ಅವರನ್ನು ನಿರ್ಬಂಧಿಸಿ, ಬೆಂಗಳೂರಿನ ಸಿಟಿ ಸಿವಿಲ್, ಸತ್ರ ನ್ಯಾಯಾಲಯವು ತಾತ್ಕಾಲಿಕ ಪ್ರತಿಬಂಧಕಾದೇಶ ಹೊರಡಿಸಿದೆ.



ಈ ಕುರಿತು ಸಲ್ಲಿಕೆಯಾಗಿದ್ದ ಅರ್ಜಿಯನ್ನು ಬೆಂಗಳೂರಿನ 30ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಧೀಶ ಎನ್‌ಆರ್ಮಧು ಅವರು ವಿಚಾರಣೆ ನಡೆಸಿದರು. ಅರ್ಜಿಯ ಮುಂದಿನ ವಿಚಾರಣೆವರೆಗೆ, ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ವಿರುದ್ಧ ಸಾರ್ವಜನಿಕವಾಗಿ ಹಾಗೂ ಮುದ್ರಣ ಮಾಧ್ಯಮ, ಡಿಜಿಟಲ್ ಮಾಧ್ಯಮ, ಸಾಮಾಜಿಕ ಮಾಧ್ಯಮಗಳಲ್ಲಿ ಯಾವುದೇ ರೀತಿಯ ಮಾನಹಾನಿಕರ, ಅವಹೇಳನಕಾರಿ ಹೇಳಿಕೆಗಳನ್ನು ನೀಡದಂತೆಕಾಡಸಿದ್ದೇಶ್ವರ ಸ್ವಾಮಿಗಳನ್ನು ನಿರ್ಬಂಧಿಸಿ ತಾತ್ಕಾಲಿಕ ಪ್ರತಿಬಂಧಕಾದೇಶ ಹೊರಡಿಸಿದರು.

ಇದೇ ವೇಳೆ ಅರ್ಜಿ ಸಂಬಂಧ ಕಾಡಸಿದ್ದೇಶ್ವರ ಸ್ವಾಮೀಜಿಗೆ ನೋಟಿಸ್ ಜಾರಿಗೊಳಿಸಿ, ಮುಂದಿನ ವಿಚಾರಣೆಯನ್ನು ಡಿಸೆಂಬರ್ 5ಕ್ಕೆ ಮುಂದೂಡಿದರು. ಇತ್ತೀಚೆಗೆ ಮಹಾರಾಷ್ಟ್ರದ ಬೀಳೂರು ಗ್ರಾಮದ ಸಮಾರಂಭದಲ್ಲಿ ಮಾತನಾಡಿದ್ದ ಕಾಡಸಿದ್ದೇಶ್ವರ ಸ್ವಾಮೀಜಿ, ಕೆಲ ಲಿಂಗಾಯತ ಸ್ವಾಮೀಜಿಗಳ ವಿರುದ್ಧ ವಾಗ್ದಾಳಿ ನಡೆಸಿದ್ದರು. ಕಳೆದ ಎರಡು ತಿಂಗಳುಗಳಿಂದ ದೇವಾಲಯಕ್ಕೆ ಹೋಗಬೇಡಿ ಎಂದು ಪ್ರಚಾರ ಮಾಡಲಾಗುತ್ತಿದೆ.

ಮುಖ್ಯಮಂತ್ರಿಗಳ ಕೃಪಾಪೋಷಿತ ಲಿಂಗಾಯತ ಮಠಾಧೀಪತಿಗಳ ಒಕ್ಕೂಟದ ಕಲಾವಿದರು ಸೇರಿ ಬಸವ ಸಂಸ್ಕೃತಿ ಅಭಿಯಾನ ಎನ್ನುವ ನಾಟಕವನ್ನು ರಾಜ್ಯಾದ್ಯಂತ ಮಾಡುತ್ತಿದ್ದಾರೆ. ಗುಡಿಯಲ್ಲಿ ದೇವರಿಲ್ಲ. ಮನೆಯಲ್ಲಿನ ದೇವರನ್ನು ಹೊರಗೆ ಹಾಕಿ ಎನ್ನುತ್ತಿದ್ದಾರೆ. ಇವರಿಗೆ ನಾನೇ ಬುದ್ಧಿ ಹೇಳಬೇಕು ಎಂದು ಕೆಲ ಅಸಂವಿಧಾನಿಕ ಪದ ಬಳಸಿ ಆಕ್ರೋಶ ವ್ಯಕ್ತಪಡಿಸಿದ್ದರು. ಈ ಭಾಷಣದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಲಿಂಗಾಯತ ಮಠಾಧೀಶರು ಶ್ರೀಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

## ಹೆಚ್ಚುತ್ತಲೇ ಇವೆ ರೋಡ್‌ರೇಜ್ ಪ್ರಕರಣಗಳು

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಪ್ರತಿ ದಿನ ಒಂದಲ್ಲಾ ಒಂದು ಕಡೆ ರೋಡ್ ರೇಜ್ ಪ್ರಕರಣಗಳು ನಡೆಯುತ್ತಿವೆ. ನಗರದ ಟಿನ್ ಫ್ಯಾಕ್ಟರಿ ಬಳಿ ಇಂತಹದೊಂದು ಘಟನೆ ನಡೆದಿದ್ದು, ದಾರಿಯಲ್ಲಿ ಸೈಡ್ ಕೊಡುವ ವಿಚಾರಕ್ಕೆ ಕ್ಯಾಬ್ ಚಾಲಕ ಹಾಗೂ ಬೈಕ್ ಸವಾರನ ನಡುವೆ ಗಲಾಟೆಯಾಗಿದೆ. ಬೈಕ್ ಸವಾರ ಸ್ವಲ್ಪ ಮುಂದೆ ಹೋಗಿ ಕ್ಯಾಬ್ ಚಾಲಕನಿಗೆ ಪ್ರಶ್ನೆ ಮಾಡಿದಾಗ ಕೋಪಗೊಂಡ ಕ್ಯಾಬ್‌ಚಾಲಕ ಕಾರಿನಿಂದ ಬೈಕ್‌ಗೆ ಗುದ್ದಿಸಿ ಸವಾರನನ್ನು ಬೀಳಿಸಿ ಹೋಗಿರುವುದು ಅದೇ ಮಾರ್ಗದಲ್ಲಿ ಹೋಗುತ್ತಿದ್ದ ಕಾರೊಂದರ ಡ್ಯಾಶ್ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಈ ವಿಡಿಯೋ ಸಾಮಾಜಿಕ ಜಾಲ ತಾಣದಲ್ಲಿ ಹರಿದಾಡುತ್ತಿದ್ದು, ಕ್ಯಾಬ್ ಚಾಲಕನ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿ ಆತನ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಈ ಹಿಂದೆ ಬೆಂಗಳೂರು ದಕ್ಷಿಣ ವಿಭಾಗದ



ಪುಟ್ಟೇನಹಳ್ಳಿ ಸೇರಿದಂತೆ ನಗರದ ಮತ್ತಿತರ ಪ್ರದೇಶಗಳಲ್ಲೂ ರೋಡ್‌ರೇಜ್ ಪ್ರಕರಣಗಳು ನಡೆದಿದ್ದವು. ಅ.27ರಂದು ರಾತ್ರಿ ವೇಳೆ ಕಾರಿನ ಸೈಡ್ ಮಿರರ್‌ಗೆ ಬೈಕ್ ಡಿಕ್ಕಿ ಹೊಡೆದ ಘಟನೆ ನಂತರ ಕಾರಿನಲ್ಲಿದ್ದವರು ಬೈಕ್ ಸವಾರರನ್ನು ಬೆನ್ನತ್ತಿ ಹೋಗಿ ಡಿಕ್ಕಿ ಹೊಡೆದಿದ್ದ ಪರಿಣಾಮ ಯುವಕನೊಬ್ಬ ಪ್ರಾಣ ಕಳೆದುಕೊಂಡಿದ್ದ ಘಟನೆ ಪುಟ್ಟೇನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿತ್ತು. ಅದೇ ರೀತಿ ಇದೇ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬೈಕ್ ತಾಗಿದ ವಿಚಾರದಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಒಬ್ಬರ ಮೇಲೆ ಇಬ್ಬರು ವ್ಯಕ್ತಿಗಳು ಹಲ್ಲೆ ನಡೆಸಿದ್ದರಿಂದ ಅವರು ಗಾಯಗೊಂಡಿದ್ದರು.


## ಜನರ ಜೀವ ರಕ್ಷಣೆ, ಅಪರಾಧ ಚಟುವಟಿಕೆ ತಡೆಗಟ್ಟಲು ಸಿ.ಸಿ.ಕ್ಯಾಮೆರಾ ಆಳವಡಿಸಲಾಗಿದೆ: ಶಾಸಕ

• ಉದಯವಾಹಿನಿ, ಬೆಂಗಳೂರು

ದಯಾನಂದನಗರ ವಾರ್ಡ್ ನಲ್ಲಿರುವ ಶ್ರೀರಾಮಪುರ ಪೊಲೀಸ್ ಠಾಣೆಯಲ್ಲಿ ವಾರ್ಡ್ ಪ್ರಮುಖ ರಸ್ತೆಗಳಿಗೆ 70 ಸಿ.ಸಿ.ಕ್ಯಾಮೆರಾ ಆಳವಡಿಸಿರುವ ಯೋಜನೆಗೆ ಮಾಜಿ ಶಿಕ್ಷಣ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರು ಚಾಲನೆ ನೀಡಿದರು, ಮಾಜಿ ಬಿಬಿಎಂಪಿ ಸದಸ್ಯ ಎಂ.ಮುನಿರಾಜರವರು, ಪೊಲೀಸ್ ಇನ್ಸ್ ಪೆಕ್ಟರ್ ಎನ್. ಎಮ್.ಪೂಣಚ್ಚ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಎಸ್.ಸುರೇಶ್ ಕುಮಾರ್ ರವರು ಮಾತನಾಡಿ ಜನರ ಜೀವ ರಕ್ಷಣೆ ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಮತ್ತು ವಾಹನ ಕಳ್ಳತನ ಪತ್ತೆ ಹಚ್ಚಲು, ಸರಗಳ್ಳತನ, ರೌಡಿಗಳ ಮತ್ತು ಅಪರಿಚಿತರ ಚಲನವಲನ ನಿಗಾ ಇಡಲು ದಯಾನಂದನಗರ ವಾರ್ಡ್ ನಲ್ಲಿ 70 ಸಿ.ಸಿ.ಕ್ಯಾಮೆರಾ ಆಳವಡಿಸಲಾಗುತ್ತಿದೆ.

ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಎಲ್ಲ ವಾರ್ಡ್ ಗಳಲ್ಲಿ ಸಿ.ಸಿ.ಕ್ಯಾಮೆರಾ ಆಳವಡಿಸಲಾಗಿದೆ. ದಯಾನಂದನಗರ ವಾರ್ಡ್‌ನಲ್ಲಿ ಬರುವ ಎಲ್.ಎನ್.ಪುರಂ, ಶ್ರೀರಾಮಪುರ, ಬ್ರಹ್ಮಪುರ, ದಯಾನಂದನಗರದ ಎಲ್ಲ ಪ್ರಮುಖ ರಸ್ತೆಗಳಿಗೆ



ಉದಯವಾಹಿನಿ ಚಿತ್ರ

ಸಿ.ಸಿ.ಕ್ಯಾಮೆರಾ ಹಾಕಲಾಗಿದೆ ಸಿ.ಸಿ.ಕ್ಯಾಮೆರಾ ವೀಕ್ಷಣೆಗೆ ಪೊಲೀಸ್ ಠಾಣೆಯಲ್ಲಿ ಕಂಟ್ರೋಲ್ ರೂಂ ರಚಿಸಲಾಗಿದೆ. ಕೆಲವು ರಸ್ತೆಗಳಿಗೆ ಮುಂದಿನ ದಿನಗಳಲ್ಲಿ ಸಿ.ಸಿ.ಕ್ಯಾಮೆರಾ ಆಳವಡಿಸಲಾಗುವುದು. ಭಯ ಮುಕ್ತರಾಗಿ ಜನರು ಒಡಾಡಬೇಕು, ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಬೀಳಬೇಕು ಎಂಬುದು ಉದ್ದೇಶ ಎಂದು ಹೇಳಿದರು. ಮಂಡಲ ಅಧ್ಯಕ್ಷರಾದ ಸುದರ್ಶನ್, ಪ್ರಧಾನ ಕಾರ್ಯದರ್ಶಿ ಗಿರೀಶ್ ಗೌಡ, ಬಿಜೆಪಿ ಯುವ ಮುಖಂಡ ಯಶಸ್ ನಾಯಕ್ ಮತ್ತು ದಯಾನಂದನಗರ ವಾರ್ಡ್ ಸ್ಥಳೀಯ ಬಿಜೆಪಿ ಮುಖಂಡರು, ಕಾರ್ಯಕರ್ತರು, ಪೊಲೀಸ್ ಠಾಣೆಯ ಸಿಬ್ಬಂದಿಗಳು ಭಾಗವಹಿಸಿದ್ದರು.

## ರೇವ್ ಪಾರ್ಟಿ ಮೇಲೆ ಪೊಲೀಸರ ದಾಳಿ 115 ಮಂದಿ ವಶಕ್ಕೆ

• ಉದಯವಾಹಿನಿ, ಬೆಂಗಳೂರು

ನಗರದ ಹೊರವಲಯದ ರೆಸಾರ್ಟ್‌ಗಳಲ್ಲಿ ಆಗಾಗ್ಗೆ ರೇವ್ ಪಾರ್ಟಿಗಳು ನಡೆಯುತ್ತಿದ್ದು, ಶನಿವಾರ ಬೆಳಗಿನ ಜಾವ ಕನಕಪುರ ರಸ್ತೆಯ ಖಾಸಗಿ ರೆಸಾರ್ಟ್‌ನಲ್ಲಿ ನಡೆಯುತ್ತಿದ್ದ ರೇವ್ ಪಾರ್ಟಿ ಅಡ್ಡೆ ಮೇಲೆ ದಾಳಿ ಮಾಡಿದ ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸರು 115 ಮಂದಿಯನ್ನು ವಶಕ್ಕೆ ಪಡೆದಿದ್ದಾರೆ.

ಸುಹಾಸ್ ಗೌಡ ಎಂಬುವವರಿಗೆ ಸೇರಿದ ಅಯಾನಾ ರೆಸಾರ್ಟ್‌ನಲ್ಲಿ ಅವಧಿಗೂ ಮೀರಿ ಪಾರ್ಟಿ ನಡೆಯುತ್ತಿದೆ ಎಂಬ ಮಾಹಿತಿ ಮೇರೆಗೆ ಬೆಂಗಳೂರು ದಕ್ಷಿಣ ಜಿಲ್ಲಾ ಎಸ್‌ಪಿ ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಪೊಲೀಸರು ಶನಿವಾರ ಬೆಳಗಿನ ಜಾವ 3 ಗಂಟೆ ಸುಮಾರಿನಲ್ಲಿ ರೆಸಾರ್ಟ್ ಮೇಲೆ ದಾಳಿ ಮಾಡಿ 35 ಯುವತಿಯರು ಸೇರಿ ಒಟ್ಟು 115 ಮಂದಿಯನ್ನು ವಶಕ್ಕೆ ಪಡೆದು ಅವರೆಲ್ಲರನ್ನೂ ಬೆಂಗಳೂರು ದಕ್ಷಿಣ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗಿದೆ. ಪೊಲೀಸರ ವಶದಲ್ಲಿರುವವರೆಲ್ಲರೂ ಬೆಂಗಳೂರು ಮೂಲದವರೆಂದು ತಿಳಿದು ಬಂದಿದೆ. ಈ ಪಾರ್ಟಿಯಲ್ಲಿ ಮಾದಕ ವಸ್ತುಗಳ ಬಳಕೆ ಮಾಡಲಾಗಿದೆಯೇ ಎಂಬ ಬಗ್ಗೆ ಪೊಲೀಸರು ರೆಸಾರ್ಟ್‌ನ್ನು ಪರಿಶೀಲಿಸುತ್ತಿದ್ದಾರೆ.

ವೈದ್ಯಕೀಯ ಪರೀಕ್ಷೆ ವರದಿ ಬಂದ ನಂತರವಷ್ಟೇ ಈ ಪಾರ್ಟಿಯಲ್ಲಿ ಭಾಗವಹಿಸಿದ್ದವರು ಮಾದಕ ವಸ್ತು ಸೇವಿಸಿದ್ದಾರೆಯೇ ಎಂಬ ಬಗ್ಗೆ ಮಾಹಿತಿ ಲಭ್ಯವಾಗಲಿದೆ.



ಉದಯವಾಹಿನಿ ಚಿತ್ರ

**ರೆಸಾರ್ಟ್ ಮೇಲೆ ದಾಳಿ ಮಾಡಿದ ಸಂದರ್ಭದಲ್ಲಿ ಮಾಧ್ಯಮದವರು ಚಿತ್ರೀಕರಣ ಮಾಡಲು ಯತ್ನಿಸಿದಾಗ ಪೊಲೀಸರು ಚಿತ್ರೀಕರಣ ಮಾಡದಂತೆ ತಡೆ ಹಿಡಿದಿದ್ದಾರೆ. ಈ ಬಗ್ಗೆ ಕಗ್ಗಲೀಪುರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ. ಇತ್ತೀಚೆಗೆ ಆನೇಕಲ್ ಬಳಿಯ ಖಾಸಗಿ ರೆಸಾರ್ಟ್, ದೇವನಹಳ್ಳಿ ಬಳಿಯ ಫಾರ್ಮ್ ಹೌಸ್‌ನಲ್ಲಿ ರೇವ್ ಪಾರ್ಟಿ ನಡೆಯುತ್ತಿದ್ದ ವೇಳೆ ಪೊಲೀಸರು ದಾಳಿ ಮಾಡಿ ಹಲವರನ್ನು ವಶಕ್ಕೆ ಪಡೆದಿದ್ದರು. ಈ ಘಟನೆ ಮಾಸುವ ಮುನ್ನವೇ ಶನಿವಾರ ಬೆಳಗಿನ ಜಾವ ಈ ದಾಳಿ ನಡೆದಿದೆ.**

# ಗುಂಡಿಗಳ ಬಗ್ಗೆ ಡಿಸಿಎಂ ಅವರನ್ನು ಕೇಳಿ ಎಂದ ಸಿಎಂಗೆ ಹೆಚ್‌ಡಿಕೆ ತರಾಟೆ

**ಸಿಎಂ ಮಾತಿಗೂ ಕಿಮ್ಮತ್ತು ಕೊಡದ ಅಧಿಕಾರಿಗಳು, ನವೆಂಬರ್ ಕ್ರಾಂತಿ ಕಾಂಗ್ರೇಸ್ ಪಕ್ಷದ ಆಂತರಿಕ ವಿಚಾರ**

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಗುಂಡಿ ಮುಚ್ಚಲು ವಿಧಿಸಿರುವ ಡೆಡ್ ಲೈನ್ ಮುಗಿದಿದ್ದರೂ ಇನ್ನು ಗುಂಡಿಗಳು ಹಾಗೆಯೇ ಇವೆ. ಆ ಬಗ್ಗೆ ಮಾಧ್ಯಮಗಳು ಕೇಳಿದ್ದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಕೇಳಿ ಎಂದಿರುವುದು ಬೇಜವಾಬ್ದಾರಿಯ ಪರಮಾವಧಿ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕಟುವಾಗಿ ಟೀಕಿಸಿದರು. ಶುಕ್ರವಾರದ ದಿನ ಮುಖ್ಯಮಂತ್ರಿಗಳ ಹೇಳಿಕೆ ಗಮನಿಸಿದ್ದೇನೆ. ಅವರ ಹೇಳಿಕೆ ಬೇಜವಾಬ್ದಾರಿತನದ್ದು ಎಂಬುದು ನನ್ನ ಅಭಿಪ್ರಾಯ. ಮುಖ್ಯಮಂತ್ರಿ ಸಿದ್ದರಾಮಯ್ಯ ರವರಾ? ಅಥವಾ ಡಿ.ಕೆ. ಶಿವಕುಮಾರ್ ರವರಾ? ಎನ್ನುವ ಪ್ರಶ್ನೆ ಬರುತ್ತೆ ಎಂದು ಕೇಂದ್ರ ಸಚಿವರು ಅನುಮಾನ ವ್ಯಕ್ತ ಪಡಿಸಿದ್ದಾರೆ.

ಮುಖ್ಯಮಂತ್ರಿಗಳೇ ಸಭೆ ಮಾಡಿ ಗುಂಡಿ ಮುಚ್ಚಲು ಡೆಡ್ ಲೈನ್ ಕೊಟ್ಟಿದ್ದರು. ಆದರೆ ರಸ್ತೆಗಳಲ್ಲಿ ಗುಂಡಿಗಳು ಹಾಗೆಯೇ ಇವೆ. ಮುಖ್ಯಮಂತ್ರಿಗಳ ಮಾತಿಗೂ ಸಹ ಎಷ್ಟು ಬೆಲೆ ಅಧಿಕಾರಿಗಳು ಕೊಡುತ್ತಿದ್ದಾರೆ ಎನ್ನುವುದು ಇದರಿಂದ ಗೊತ್ತಾಗುತ್ತದೆ ಎಂದು ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದರು.

ಮುಖ್ಯಮಂತ್ರಿಗಳ ಹೇಳಿಕೆ ನೋಡಿದಾಗ ಅವರು ಈ ರಾಜ್ಯದ ಸಿಎಂ ಆಗಿ ಕಾರ್ಯ ನಿರ್ವಹಣೆ ಮಾಡುವುದಕ್ಕೆ ಅಸಮರ್ಥ ಆಗಿದ್ದೇನೆ ಎಂದು ಹೇಳಿದ ರೀತಿ ಇದೆ. ಅವರು ಇಂಥ ಹೇಳಿಕೆ ನೀಡಬಾರದು ಎಂದು ಕುಮಾರಸ್ವಾಮಿ ಹೇಳಿದರು.

**ಮನೆಗಳ ಮುಂದೆ ಕಸ ಹಾಕುವುದನ್ನು ನಾನು ಮಾಧ್ಯಮಗಳಲ್ಲಿ ಗಮನಿಸಿದೆ. ಜನರು ಕಸ ಬೀದಿಯಲ್ಲಿ ಹಾಕಿದರು ಎಂದು ಬೀದಿಯಲ್ಲಿರೋ ಕಸ ತಂದು ಜನರ ಮನೆ ಮುಂದೆ ಹಾಕಿದರೆ ಅರ್ಥ ಇದೀಯಾ? ಬೆಂಗಳೂರು ರಸ್ತೆಗುಂಡಿ ಮುಚ್ಚುವ ವಿಚಾರದಲ್ಲಿ, ಸಿಎಂ ಮತ್ತು ಡಿಸಿಎಂ ನಡುವೆ ಏನೋ ಮನಸ್ತಾಪ ಇದ್ದಂತೆ ಕಾಣುತ್ತಿದೆ.**
**-ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ**

**ನವೆಂಬರ್ ಕ್ರಾಂತಿ ಕಾಂಗ್ರೆಸ್ ಪಕ್ಷಕ್ಕೆ ಬಿಟ್ಟಿದ್ದು:** ನವೆಂಬರ್ 21ಕ್ಕೆ ಡಿಕೆ ಶಿವಕುಮಾರ್ ಸಿಎಂ ಆಗಿ ಪದಗ್ರಹಣ ಮಾಡುತ್ತಾರೆ ಎಂಬ ಚರ್ಚೆ, ಅವರ ಪಾರ್ಟಿಗೆ ಬಿಟ್ಟ ವಿಚಾರ. ಅದು ಅವರ ಪಕ್ಷದಲ್ಲಿನ ತೀರ್ಮಾನಗಳು. ಅವರಿಗೆ ಬಿಟ್ಟಿರೋದು, ನಾನು ಈ ವಿಷಯದಲ್ಲಿ ಮಾತನಾಡುವುದು ಸಣ್ಣತನ ಆಗುತ್ತದೆ. ಅವರ ಪಕ್ಷದಲ್ಲಿ ಏನು ತೀರ್ಮಾನ ಮಾಡುತ್ತಾರೋ ಮಾಡಿಕೊಳ್ಳಲಿ ಎಂದರು ಕುಮಾರಸ್ವಾಮಿ.



ಸರ್ಕಾರದ ಅವಧಿ ಇನ್ನು ಎರಡೂವರೆ ವರ್ಷ ಇದೆ. ಆದರೆ ಎರಡೂವರೆ ವರ್ಷ ಸರ್ಕಾರ ನಡೆಸುವಲ್ಲಿ ಕಾಂಗ್ರೇಸ್‌ನವರೇ ಪ್ರತಿನಿತ್ಯ ನಗೇಪಾಟಲಿಗೆ ಒಳಗಾಗುತ್ತಿದ್ದಾರೆ.

ವಿರೋಧ ಪಕ್ಷಗಳು ಮಾತಾಡುವ ಅವಶ್ಯಕತೆ ಇಲ್ಲ. ಮಂತ್ರಿಗಳು, ಜವಾಬ್ದಾರಿ ಸ್ಥಾನದಲ್ಲಿ ಇರುವವರು ಅವರವರೇ ಮಾತನಾಡುತ್ತಿರುವಾಗ ನಾವು ಯಾವ ದೃಷ್ಟಿಯಿಂದ ನೋಡೋದು ಎಂದು ಕುಮಾರಸ್ವಾಮಿ ಪ್ರಶ್ನಿಸಿದರು. ಕಾಂಗ್ರೇಸ್ ಪಾರ್ಟಿಯಲ್ಲಿನ ಭಿನ್ನಮತ ನೋಡುವ ಅಗತ್ಯ ಎನ್‌ಡಿಎ ಮೈತ್ರಿಕೂಟಕ್ಕೆ ಇಲ್ಲ. ಅವರ ಪಕ್ಷದಲ್ಲಿರುವ ಶಾಸಕರು, ಮಂತ್ರಿಗಳೇ ದೊಡ್ಡ ಮಟ್ಟದಲ್ಲಿ ನೋಡುತ್ತಾ ಇದ್ದಾರೆ. ಒಟ್ಟಿನಲ್ಲಿ ಎಲ್ಲವೂ ಸರಿಯಿಲ್ಲ ಎನ್ನುವುದು ಜಗಜ್ಜಾಹೀರಾಗುತ್ತಿದೆ ಎಂದು ಕೇಂದ್ರ ಸಚಿವರು ವ್ಯಂಗ್ಯವಾಡಿದರು.

**ಬೆಂಗಳೂರು ಸುರಂಗ ಮಾರ್ಗ ಯೋಜನೆ**

ಇವರು ಟನಲ್ ರಸ್ತೆ ಕೆಲಸ ಯಾವಾಗ ಪ್ರಾರಂಭ ಮಾಡುತ್ತಾರೆ ಎನ್ನುವುದನ್ನು ನೋಡೋಣ. ನುರಿತ ತಜ್ಞರು ಅಭಿಪ್ರಾಯ ಪಡೆದು ಕೆಲಸ ಆರಂಭ ಮಾಡುತ್ತಾರೋ ಅಥವಾ ಹಾಗೆಯೇ ಕಾಮಗಾರಿ ಆರಂಭ ಮಾಡುತ್ತಾರೋ ನೋಡೋಣ. ನಾನು ಹೇಳೋದು ಬೆಂಗಳೂರು ಜನರ ಪ್ರತಿನಿತ್ಯ ಜನರ ಸಮಸ್ಯೆ ಬಗ್ಗೆ. ಅದು ಬಗೆಹರಿಯಬೇಕು ಎಂದು ಅಭಿಪ್ರಾಯ ಪಟ್ಟರು. ಇಲ್ಲಿ ಟನಲ್ ರೋಡ್ ಮಾಡ್ತಾರೋ, ಎಲಿವೆಟೆಡ್ ರಸ್ತೆ ಮಾಡುತ್ತಾರೋ ಅದು ಸರ್ಕಾರಕ್ಕೆ ಬಿಟ್ಟಿದ್ದು. ಜನರು ಪ್ರತಿನಿತ್ಯ ಜನಪ್ರತಿನಿಧಿಗಳು ಮತ್ತು ಸರ್ಕಾರದ ವೈಫಲ್ಯಗಳ ಬಗ್ಗೆ ಆಕ್ರೋಶ ಹೊರ ಹಾಕುತ್ತಿದ್ದಾರೆ. ಜನರ ಬದುಕಿನಲ್ಲಿ ಚಲ್ಲಾಟ ಆಡಬೇಡಿ ಎಂದರು.

ಎಲ್ಲಾ ಭಾಷೆಗಳು ಬಳಸಿಕೊಂಡು ಕನ್ನಡ ಭಾಷೆಗೆ ಮೊದಲ ಆದ್ಯತೆ ನೀಡಿ: ಶಾಸಕ ಡಾ.ಅವಿನಾಶ ಜಾಧವ

# 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಎಲ್ಲಾ ಭಾಷೆಗಳು ಬಳಸಿಕೊಂಡು ಕನ್ನಡ ಭಾಷೆಗೆ ಮೊದಲ ಆದ್ಯತೆ ನೀಡಬೇಕು,1973ರ ನವೆಂಬರ್ 1ರಂದು ಕರ್ನಾಟಕ ಏಕೀಕರಣವಾಗಿತ್ತು ಎಂದು ಶಾಸಕ ಡಾ.ಅವಿನಾಶ ಜಾಧವ ಹೇಳಿದರು. ಪಟ್ಟಣದ ಚಂದಾಪೂರದ ಪ್ರಜಾಸೌಧ ಆವರಣದಲ್ಲಿ ತಾಲ್ಲೂಕಾಡಳಿತ ವತಿಯಿಂದ ಹಮ್ಮಿಕೊಂಡಿದ್ದ 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,1950ರಲ್ಲಿ ಕರ್ನಾಟಕ ಏಕೀಕರಣ ಮಾಡುವ ಕನಸನ್ನು ಆಲೂರ ವೆಂಕಟರಾಯರು ಅವರು ಕಂಡಿದ್ದರು, ಕನ್ನಡ ಮಾತೃಭಾಷೆಗೆ ಎಲ್ಲರೂ ಹೆಚ್ಚಿನ ಒತ್ತು ನೀಡಬೇಕು,ಅಭಿಮಾನ ಇರಬೇಕು,ನಮ್ಮ ರಾಜ್ಯದ ಇತಿಹಾಸ ಬಹಳಷ್ಟು ದೊಡ್ಡದಿದೆ, ಸರ್ಕಾರವು ಆದೇಶ ಹೊರಡಿಸಿದ್ದು ಸರ್ಕಾರಿ ಕಛೇರಿಗಳಲ್ಲಿ ಎಲ್ಲಾ ಕನ್ನಡದಲ್ಲೇ ಆದೇಶಗಳು ಲೆಕ್ಕಪತ್ರಗಳು ಮಾಡಬೇಕು ಎಂದು ಆದೇಶ ಹೊರಡಿಸಲಾಗಿದೆ ಎಂದರು.

**ಕನ್ನಡದಲ್ಲೇ ಆದೇಶಗಳು ಲೆಕ್ಕಪತ್ರಗಳು ಮಾಡಬೇಕು**

70ನೇ ಕನ್ನಡ ರಾಜ್ಯೋತ್ಸವ ಅಂಗವಾಗಿ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು,ಮಕ್ಕಳಿಗೆ ಒಳ್ಳೆಯ ಕನ್ನಡದಲ್ಲಿ ಶಿಕ್ಷಣ ನೀಡಬೇಕು, ಜರ್ಮನಿ,ಅಮೇರಿಕಾ,ಲಂಡನ್ ಅಂಥಹ ಅಂತರಾಷ್ಟ್ರೀಯ ದೇಶಗಳಲ್ಲಿಯು ಸಹ ಕನ್ನಡಿಗರು ಕನ್ನಡ ರಾಜ್ಯೋತ್ಸವ ಆಚರಣೆ ಮಾಡುತ್ತಾರೆ,ಕನ್ನಡ ಶ್ರೀಮಂತ ಭಾಷೆಯಾಗಿದ್ದು, ಮೊದಲ ಆಧ್ಯತೆ ಕನ್ನಡ ಭಾಷೆಗೆ ನೀಡಬೇಕು ಎಂದರು.

ವಿಶೇಷ ಉಪನ್ಯಾಸ ನೀಡಿದ ಪ್ರಾಚಾರ್ಯ ಮಲ್ಲಿಕಾರ್ಜುನ ಪಾಲಾಮೋರ್ ಅವರು, ನಾಡುನುಡಿ ಬೆಳೆಸಿದರೆ ರಾಜ್ಯ ಉಳಿಸಿದಂತೆ ಆಗುತ್ತೆ.ಕನ್ನಡ ನಾಡಿನ ಉತ್ತಮ ಪ್ರಜೆಯಾಗಿ ಚಾಚುತಪ್ಪದೆ ಕನ್ನಡ ಭಾಷೆಗೆ ಮಹತ್ವ ನೀಡಬೇಕು,1973ರ ಮುಂಚೆ ಮೈಸೂರು ಕರ್ನಾಟಕವಿತ್ತು. ಅದರ ಮೊದಲು ಕನ್ನಡದ ಸುಮಾರು 20 ಪ್ರಾಂತ್ಯಗಳು ಹಂಚಿ ಹೋಗಿದ್ದವು, ನಂತರ 1973ರಲ್ಲಿ ಅಖಂಡ ಕರ್ನಾಟಕ ಏಕೀಕರಣವಾಯಿತು.

ಕನ್ನಡಕ್ಕೆ 2,500 ವರ್ಷಗಳ ಹಿಂದಿನ ಕನ್ನಡ ಭಾಷೆ ಕ್ರಿ.ಶ.405ರಲ್ಲಿ ಕಲ್ಯಾಣ ಕರ್ನಾಟಕ ಸಂಸ್ಕೃತಿ ದೇಶದಲ್ಲಿಯೇ ಹೆಸರುವಾಸಿಯಾಗಿತ್ತು. ಮುಂಬೈ ಪ್ರಾಂತ್ಯದ ಡೆಪ್ಯುಟಿ ಚನ್ನಬಸಪ್ಪರವರು 600 ಕನ್ನಡ ಶಾಲೆಗಳು ಪ್ರಾರಂಭಿಸಿದರು, 1956ರ ಹಿಂದೆ ಉರ್ದು ಶಾಲೆಯ ಪರವಾನಿಗೆ ಪಡೆದು ಕನ್ನಡ ಶಾಲೆಗಳು ನಡೆಸುತ್ತಿದ್ದರು. ಈಗಿನ ಕಾಲದಲ್ಲಿ ಕನ್ನಡ ಶಾಲೆ ನಡೆಸಲು ಪರವಾನಿಗೆ ಪಡೆದು ಇಂಗ್ಲಿಷ್ ಶಾಲೆ ನಡೆಸುತ್ತಿದ್ದಾರೆ ಕನ್ನಡ ಸಾಹಿತ್ಯ ಶ್ರೀಮಂತವಾಗಿದೆ,ಕನ್ನಡ ತಲೆಬಾಗಿಲಾಗಿ ಬೆಳೆಸಬೇಕು.

ಹಿಂದಿ ಮತ್ತು ಕನ್ನಡ ಭಾಷೆಗೆ ಸುಮಾರು 500 ವರ್ಷಗಳ ವ್ಯತ್ಯಾಸವಿದೆ, 22 ಭಾಷೆಗಳು ರಾಷ್ಟ್ರೀಯ ಭಾಷೆಗಳಾಗಿವೆ, ಕನ್ನಡಕ್ಕೆ 08 ಜ್ಞಾನಪೀಠ ಪ್ರಶಸ್ತಿ ದೊರಕಿವೆ, ಪ್ರತಿ 20ಕಿಮೀಗೆ ಕನ್ನಡ ವೈವಿಧ್ಯಮಯ ಭಾಷೆ ಬದಲಾಗುತ್ತದೆ,ಕನ್ನಡ ಒಂದು ಶಬ್ದಕ್ಕೆ ನೂರಾರು ಶಬ್ದಗಳಿವೆ, ಪ್ರತಿಬಾರಿ ಕಸಾಪ ಅಧ್ಯಕ್ಷರ ಹೆಸರು ಹಾಕಲಾಗುತ್ತಿತ್ತು ಆದರೆ ಈ ಬಾರಿ ಹಾಕದೆಯಿರುವುದು ನೋವಿನ ಸಂಗತಿ,ನಿರೂಪಣೆ ಮಾಡುವವರ ಹೆಸರು ಕೂಡ ಬಿಡಲಾಗುತ್ತಿದೆ ಎಂದರು.

ಅಕ್ಷರ ದಾಸೋಹ ಅಧಿಕಾರಿ ಜಯಪ್ಪ ಚಾಪಲ್ ಸ್ವಾಗತಿಸಿದರು,ಶಿಕ್ಷಣ ಸಂಯೋಜಕ ಅಶೋಕ ಹೂವಿನಭಾವಿ ನಿರೂಪಿಸಿದರು,ಕ್ಷೇತ್ರ ಸಂಪನ್ಮೂಲ ಅಧಿಕಾರಿ ನಾಗಶೇಟ್ಟಿ ಭದ್ರಶೇಟ್ಟಿ ವಂದಿಸಿದರು.

ಈ ಸಂದರ್ಭದಲ್ಲಿ ಪಂಚ ಗ್ಯಾರಂಟಿ ಯೋಜನೆ ಅಧ್ಯಕ್ಷ ಬಸವರಾಜ ಮಾಲಿ,ಪುರಸಭೆ ಅಧ್ಯಕ್ಷ ಆನಂದ ಟೈಗರ್,ಡಿವೈಎಸ್ಪಿ ಸಂಗಮನಾಥ ಹಿರೇಮಠ,ಗ್ರೇಡ್-2 ತಹಶೀಲ್ದಾರ್ ವೆಂಕಟೇಶ ದುಗ್ಗನ್,ಪುರಸಭೆ ಮುಖ್ಯಾಧಿಕಾರಿ ನಿಂಗಮ್ಮ ಬಿರಾದಾರ, ಸಿಡಿಪಿಓ ಸವಿತಾ ಮಡಿವಾಳ,ಕೃಷಿ ವೀರಶೆಟ್ಟಿ ರಾಠೋಡ,ಸಮಾಜ ಕಲ್ಯಾಣ ಎಡಿ ಪ್ರಭುಲಿಂಗ ಬುಳ್ಳಾ,ಟಿಹೆಚ್ಓ ಡಾ.ಮಹ್ಮದ್ ಗಫಾರ್,ಬಿಇಓ ಲಕ್ಷ್ಮಯ್ಯ,ಶ್ರೀಕಾಂತ ಜಾನಕಿ,ಉಲ್ಲಾಸಕುಮಾರ ಕೆರೋಳ್ಳಿ,ಭೀಮಶೇಟ್ಟಿ ಮುರುಡಾ,ಬಸವರಾಜ ವಾಡಿ,ವಿಠಲ ಕುಸಾಳೆ,ಶ್ರೀಮಂತ ಕಟ್ಟಿಮನಿ,ಗೋಪಾಲರಾವ ಕಟ್ಟಿಮನಿ, ಶ್ರೀಹರಿ ಕಾಟಾಪೂರ,ಶಿವಯೋಗಿ ರುಸ್ತಾಂಪೂರ,ಕೆಎಂ.ಬಾರಿ,ಆರ್. ಗಣಪತರಾವ,ಅಬ್ದುಲ್ ಬಾಷೀದ್,ಸಂತೋಷ ಗಡಂತಿ,ಮಾರುತಿ ಗಂಜಗಿರಿ,ಗೋಪಾಲ ಇಡಗೋಟ್ಟಿ,ಪ್ರೇಮಸಿಂಗ್ ಜಾಧವ,ರಾಜು ಪವ್ಹಾರ,ರಾಮಶೇಟ್ಟಿ ಪವ್ಹಾರ,ಅನೀಲ ಬಿರಾದಾರ,ಮಖ್ದೂಮ ಖಾನ,ಚೇತನ,ಎಂಡಿ ಆರೀಫ್,ಹಣಮಂತ ಪೂಜಾರಿ,ಕೇಶವ ಕುಲಕರ್ಣಿ,ಹೀರಾ ಪವ್ಹಾರ,ಅನೇಕರಿದ್ದರು.



ಉದಯವಾಹಿನಿ ಚಿತ್ರ

## ವಿವಿಧ ಸಾಧಕರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ


**ತಾಲ್ಲೂಕಾಡಳಿತ ವತಿಯಿಂದ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಗುರುತಿಸಿ ತಾಲ್ಲೂಕಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಯಿತು,ಮಾಧ್ಯಮ ಕ್ಷೇತ್ರದಲ್ಲಿ ಸಂಯುಕ್ತ ಕರ್ನಾಟಕ ಸುಲೇಪೇಟ ವಲಯ ಪತ್ರಕರ್ತ ವಾಸೀಮಪಟೇಲ ಹೊಡೆಬೀರನಳ್ಳಿ,ಹಾಗೂ ಪ್ರಜಾ ವಾಹಿನಿ ಪತ್ರಕರ್ತ ಶಿವಕುಮಾರ ತಳವಾರ ಮತ್ತು ನ್ಯೂಸ್ 18 ವರದಿಗಾರ ನಾಗಪ್ಪ ಅವರಿಗೆ ಮಾಧ್ಯಮ ಸೇವೆ ಪರಿಗಣಿಸಿ,ವೈದ್ಯಕೀಯ ಕ್ಷೇತ್ರ ಅಜಯ ಕಾಟಾಪೂರ,ಸಾಹಿತ್ಯ ಕ್ಷೇತ್ರ ರೇವಣಸಿದ್ದಪ್ಪ ದುಕಾನ್,ಯಲ್ಲಾಲಿಂಗ ದಂಡೀನ್,ಸಂಗೀತ ಕ್ಷೇತ್ರ ಮಹಾದೇಶ,ಶಿವರಾಜ,ಶಿಕ್ಷಣ ಕ್ಷೇತ್ರ ಯಶ್ವಂತ ಪೂಜಾರಿ, ಕೃಷಿ ಕ್ಷೇತ್ರ ಭಂಡಪ್ಪ ಸಂಗೇದ ಅವರಿಗೆ ತಾಲ್ಲೂಕಾ ಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಯನ್ನು ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ,ಶಾಸಕ ಅವಿನಾಶ ಜಾಧವ ನೀಡಿ ಸನ್ಮಾನಿಸಿ ಗೌರವಿಸಲಾಯಿತು.**

## ಭೂಕಂಪ ಧನ್ ಧನ್ ಶಬ್ಧ ಹೇಳಿ ಜನರು ಭಯಭೀತ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಐನಾಪೂರ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿಯೂ ಭೂಕಂಪದ ಧನ್ ಧನ್ ಶಬ್ದಗಳು ಕೇಳಿ ಬಂದ ಭೂಮಿ ಕಂಪಿಸಿದ್ದು ಕಂಡು ಜನರು ಭಯಭೀತರಾಗಿದ್ದಾರೆ ಉನ್ನತಮಟ್ಟದ ತಜ್ಞರು ಗ್ರಾಮಕ್ಕೆ ಆಗಮಿಸಿ ಪರಿಶೀಲಿಸಿ ಜನರಿಗೆ ಧೈರ್ಯ ತುಂಬಬೇಕು ಎಂದು ಐನಾಪೂರ ಗ್ರಾಪಂ. ಅಧ್ಯಕ್ಷ ನವೀನಕುಮಾರ ಮಾಲು ಹೇಳಿದರು.

ಶುಕ್ರವಾರ ಬೆಳಿಗ್ಗೆ 5.48ನಿಮಿಷಕ್ಕೆ ಹಾಗೂ ರಾತ್ರಿ 7.18ನಿಮಿಷಕ್ಕೆ ಭಾರಿ ಶಬ್ದ ಕೇಳಿ ಭೂಮಿ ಕಂಪಿಸಿದ್ದು ಇದರಿಂದ ಸಾರ್ವಜನಿಕರು ಭಯಭೀತರಾಗಿದ್ದಾರೆ,ಭೂಕಂಪ ಕುರಿತು ಈಗಾಗಲೇ ತಹಶೀಲ್ದಾರ್ ಅವರಿಗೂ ಜಿಲ್ಲಾಧಿಕಾರಿಗಳಿಗೂ ಪತ್ರ ಬರೆಯಲಾಗಿದ್ದು ಉನ್ನತಮಟ್ಟದ ತಜ್ಞರು ಗ್ರಾಮಕ್ಕೆ ಆಗಮಿಸಿ ಪರಿಶೀಲಿಸಿಬೇಕು,ಜನರಿಗೆ ಧೈರ್ಯ ಹೇಳಬೇಕು ಎಂದರು. ಮೇಲಾಧಿಕಾರಿಗಳು ಮತ್ತು ಭೂ ಇಲಾಖೆ ತಜ್ಞರು ಐನಾಪೂರ ಸೇರಿದಂತೆ ಸುತ್ತಮುತ್ತ ಗ್ರಾಮ ತಾಂಡಾಗಳಿಗೆ ಭೇಟಿನೀಡಿ ಪರಿಶೀಲಿಸಿಬೇಕು ಇಲ್ಲಾದಿದ್ದರೆ ಪಕ್ಕಾ ಮನೆಗಳು,ಕಚ್ಚಾ ಇರುವ ಮನೆಗಳ ಸರ್ವೇ ನಡೆಸಿ ಅಂಥವರಿಗೆ ಪರ್ಯಾಯ ವ್ಯವಸ್ಥೆ ಮಾಡಬೇಕು ಭೂಕಂಪದಿಂದ ಜನರು ಧನ್ ಧನ್ ಶಬ್ದಗಳು ಕೇಳಿ ಜನರು ಮನೆ ಹೊರಗೆ ಓಡಿ ಬರುತ್ತಿದ್ದಾರೆ ಎಂದು ಪತ್ರಕರ್ತರೊಂದಿಗೆ ಮಾತನಾಡಿ ತಾಪಂ ಮಾಜಿ ಸದಸ್ಯರು ಹಾಗೂ ಬಂಜಾರ ಸಮಾಜದ ಅಧ್ಯಕ್ಷ ಪ್ರೇಮಸಿಂಗ್ ಜಾಧವ ಹೇಳಿದರು. ಈ ಸಂದರ್ಭದಲ್ಲಿ ಶ್ರೀಮಂತ ಕಟ್ಟಿಮನಿ, ಗುಂಡಪ್ಪ ಪಡಶೇಟ್ಟಿ,ಅಶೋಕ ಮಾಲು,ರಾಮರೆಡ್ಡಿ ಪಾಟೀಲ್ ಚಿಮ್ಮಾನಚೋಡ್,ಅನೀಲಕುಮಾರ ಘಾಟಗೆ,ಗೇಮು ರಾಠೋಡ,ಘಾಳಪ್ಪ,ದೀಲೀಪ ಪಾಟೀಲ,ರವಿಸ್ವಾಮಿ, ಜನ್ನು,ಶಿವಕುಮಾರ ರಾಠೋಡ,ಅನೇಕರಿದ್ದರು.



ಉದಯವಾಹಿನಿ ಚಿತ್ರ

## ಕಾಮಗಾರಿಗಳ ಬೇಡಿಕೆ ಪ್ರಸ್ತಾವ ಸಲ್ಲಿಸಿ: ತಾ. ಯೋಜನಾಧಿಕಾರಿ ಸೂಚನೆ

• ಉದಯವಾಹಿನಿ, ಯಲ್ಲಾಪುರ

ವಿವಿಧ ಇಲಾಖೆಗಳ ಮುಖ್ಯಸ್ಥರು ತಮ್ಮ ಇಲಾಖೆಯಲ್ಲಿ ಆಗಬೇಕಾದ ಕಾಮಗಾರಿಗಳ ಕುರಿತು ಸ್ಥಳೀಯ ಆಡಳಿತಕ್ಕೆ ಬೇಡಿಕೆಯ ಪ್ರಸ್ತಾವ ಸಲ್ಲಿಸುವಂತೆ ತಾಲ್ಲೂಕು ಯೋಜನಾಧಿಕಾರಿ ರಾಘವ ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಭವನದಲ್ಲಿ ಶುಕ್ರವಾರ ನಡೆದ ಸಾಮಾನ್ಯ ಸಭೆ ಮತ್ತು ಮಾಸಿಕ ಕೆಡಿಪಿ ಸಭೆಯಲ್ಲಿ ಮಾತನಾಡಿದರು.

ತಾಲ್ಲೂಕು ಪಂಚಾಯಿತಿ ಇಒ ರಾಜೇಶ ಧನವಾಡಕರ ಮಾತನಾಡಿ, ಪಧವೀಧರರ ಚುನಾವಣೆಯ ಹಿನ್ನೆಲೆಯಲ್ಲಿ ಮತದಾರರ ನೋಂದಣಿ ನಡೆದಿದ್ದು ಎಲ್ಲಾ ಅರ್ಹ ಮತದಾರರು ನೋಂದಣಿ ಮಾಡಿಕೊಳ್ಳಬೇಕು' ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ನರೇಂದ್ರ ಪವಾರ ಮಾತನಾಡಿ, 'ತಾಲ್ಲೂಕಿನಲ್ಲಿ ಎರಡು ಇಲಿ ಜ್ವರ ಪ್ರಕರಣಗಳು ವರದಿಯಾಗಿದ್ದು ಈ ಕುರಿತು ಜಾಗೃತಿ ನೀಡಲಾಗುತ್ತಿದೆ' ಎಂದು ತಿಳಿಸಿದರು. ತೋಟಗಾರಿಕಾ ಅಧಿಕಾರಿ ಸತೀಶ ಹೆಗಡೆ ಮಾತನಾಡಿ, ಅಡಿಕೆ ಬೆಳೆಗೆ ಎಲೆಚುಕ್ಕಿ ರೋಗ ಕಂಡುಬರುತ್ತಿದೆ. ಹೊಸದಾಗಿ ಗದ್ದೆಯನ್ನು ತೋಟವನ್ನಾಗಿ ಪರಿವರ್ತಿಸುವವರು ತಾಳೆ ಬೆಳೆ ಬೆಳೆದಲ್ಲಿ ಸಹಾಯಧನ ದೊರೆಯುತ್ತದೆ' ಎಂದು ತಿಳಿಸಿದರು.

ಸಿಡಿಪಿಒ ಶ್ರೀದೇವಿ ಪಾಟೀಲ ಮಾತನಾಡಿ, ತಾಲ್ಲೂಕಿನಲ್ಲಿ ಒಟ್ಟು 3 ಅಂಗನವಾಡಿಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ' ಎಂದರು. ಸಹಾಯಕ ಕೃಷಿ ನಿರ್ದೇಶಕ ನಾಗರಾಜ ನಾಯ್ಕ ಮಾತನಾಡಿ, 'ಅಸಮರ್ಪಕ ಮಳೆಯಿಂದಾಗಿ ಈ ಸಲ ಮುಸುಕಿನ ಜೋಳಕ್ಕೆ ಹಾನಿಯಾಗಿದೆ. ಇಳುವರಿ ಕಡಿಮೆ ಆಗಲಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

> **ಶಾಲಾ ಮಕ್ಕಳಿಗೆ ಎರಡು ಜೊತೆ ಸಮವಸ್ತ್ರ ಈಗಾಗಲೇ ಪೂರೈಸಲಾಗಿದೆ. ಆದರೆ ಎಂಟನೇ ತರಗತಿ ವಿದ್ಯಾರ್ಥಿಗಳಿಗೆ ಅಗತ್ಯ ಶೂ ಪೂರೈಕೆ ಆಗಿಲ್ಲ. ಅನೇಕ ಕಡೆ ಅತಿಥಿ ಶಿಕ್ಷಕರ ಬೇಡಿಕೆ ಇದೆ.**
> -ಬಿಇಒ ರೇಖಾ ನಾಯಕ

## ಕುಮಟಾ ವೈಭವ ಸ್ಥಗಿತಗೊಳಿಸಿದ ಅಧಿಕಾರಿಗಳು: ಆರೋಪ

• ಉದಯವಾಹಿನಿ ಕುಮಟಾ

ಕುಮಟಾದಲ್ಲಿ ಪ್ರತೀ ವರ್ಷನಡೆಯುತ್ತಿದ್ದ ಕುಮಟಾ ವೈಭವ ಕಾರ್ಯಕ್ರಮಕ್ಕೆ ಸ್ಥಳೀಯ ಪುರಸಭೆ ಮುಖ್ಯಧಿಕಾರಿ ಎಂ.ಆರ್. ಸ್ವಾಮಿ ಪುರಸಭೆ ಅನುಮತಿ ರದ್ದುಪಡಿಸಿದರೆ, ಸಿ.ಪಿ.ಐ ಯೋಗೇಶ್ ಅವರು ಧ್ವನಿವರ್ಧಕ ಬಳಕೆಗೆ ಅನುಮತಿ ನಿರಾಕರಿಸಿ ಉದ್ಘಾಟನೆಯಾಗಬೇಕಿದ್ದ ಕಾರ್ಯಕ್ರಮ ಸ್ಥಗಿತಗೊಳ್ಳುವಂತೆ ಮಾಡಿದ್ದಾರೆ' ಎಂದು ಕುಮಟಾ ವೈಭವ ಕಾರ್ಯಕ್ರಮ ಸಂಘಟಕ ತಾಂಡವ ಕಲಾನಿಕೇತನ ಸಂಘಟನೆ ಅಧ್ಯಕ್ಷ ಮಂಜುನಾಥ ನಾಯ್ಕ ಮಿರ್ಜಾನ ಆರೋಪಿಸಿದರು.

ಪಟ್ಟಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕುಮಟಾ ವೈಭವ ಕಾರ್ಯಕ್ರಮ ನಡೆಸಲು ಮಾರ್ಚ್ ತಿಂಗಳಲ್ಲೇ ಮಹಾತ್ಮಾಗಾಂಧಿ ಮೈದಾನ ಬುಕ್ ಮಾಡಲಾಗಿತ್ತು. ಸ್ಥಳೀಯ ಪುರಸಭೆ ಅನುಮತಿ ನೀಡಿ ಮತ್ತೆ ಅದನ್ನು ರದ್ದುಪಡಿಸಿತ್ತು. ಆದರೆ ಜಿಲ್ಲಾಧಿಕಾರಿ ಅನುಮತಿ ನೀಡುವಂತೆ ಸೂಚಿಸಿದ್ದರು. ಎರಡನೇ ಬಾರಿ ಅನುಮತಿ ನೀಡಿದ ಪುರಸಭೆ ಮುಖ್ಯಾಧಿಕಾರಿ ಎಂ.ಆರ್. ಸ್ವಾಮಿ ಸಾಂಸ್ಕೃತಿಕ ಉದ್ದೇಶ ಹೊರತು ವಾಣಿಜ್ಯ ಉದ್ದೇಶಕ್ಕೆ ಮೈದಾನದಲ್ಲಿ ಅನುಮತಿ ನೀಡುವುದಿಲ್ಲಎಂದು ಎರಡನೇ ಬಾರಿ ಅನುಮತಿ ನಿರಾಕರಿಸಿದರು' ಎಂದು ದೂರಿದರು.

ಪುನಃ ಜಿಲ್ಲಾಧಿಕಾರಿಗಳ ಮೊರೆ ಹೋದಾಗ ಅನುಮತಿ ನೀಡವುದಾಗಿ ಭರವಸೆ ನೀಡಿದ ಮುಖ್ಯಾಧಿಕಾರಿ ಕಾರ್ಯಕ್ರಮ ನಡೆಯುವ ಹೊತ್ತಿಗೆ ಸಂಪರ್ಕಕ್ಕೆ ಸಿಗದಂತೆ ದೂರ ಉಳಿದರು' ಎಂದರು.

ಮೈದಾನದಲ್ಲಿ ಕುಮಟಾ ಹಬ್ಬ, ಕುಮಟಾ ಉತ್ಸವ, ಯುಗಾದಿ ಉತ್ಸವ, ರಾಜ್ಯೋತ್ಸವ ಕಾರ್ಯಕ್ರಮ, ಕಳೆದ ವರ್ಷದವರೆಗೆ ಕುಮಟಾ ವೈಭವದಂಥ ಸಂಸ್ಕೃತಿ ಬಿಂಬಿಸುವ ಕಾರ್ಯಕ್ರಮಗಳು ನಡೆದಿವೆ. ಕುಮಟಾದ ಸಾಂಸ್ಕೃತಿಕ ವಾತಾವರಣದ ಪರಿಚಯ ಇಲ್ಲದ ಈ ಇಬ್ಬರು ಅಧಿಕಾರಿಗಳು ತಮ್ಮ ಏಕಪಕ್ಷೀಯ ನಿರ್ಧಾರದಿಂದ ಸ್ಥಳೀಯರ ಮನಸ್ಸಿಗೆ ಘಾಸಿ ಮಾಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮ ಹಣಕಾಸು ವಿಭಾಗ ಮುಖ್ಯಸ್ಥ ಹರೀಶ ನಾಯ್ಕ, 'ಕಾರ್ಯಕ್ರಮಕ್ಕೆ ಅಡ್ಡಿ ಪಡಿಸದಂತೆ ಸ್ಥಳೀಯ ಶಾಸಕರಾದ ದಿನಕರ ಶೆಟ್ಟಿ, ಆರ್.ವಿ. ದೇಶಪಾಂಡೆ ಅವರು ಮನವಿ ಮಾಡಿದರೂ ಅವರ ಮಾತಿಗೆ ಇಬ್ಬರು ಅಧಿಕಾರಿಗಳು ಬೆಲೆ ಕೊಡಲಿಲ್ಲ. ಅನುಮತಿ ನಿರಾಕರಣೆಯ ಹಿಂದೆ ಯಾರ ಕೈವಾಡ ಇದೆ ಎನ್ನುವುದನ್ನು ಜಿಲ್ಲಾಧಿಕಾರಿ ಅವರು ತನಿಖೆಗೊಳಪಡಿಸಿ ಇಬ್ಬರ ವಿರುದ್ಧ ಸೂಕ್ತ ಕ್ರಮ ಕೈಕೊಳ್ಳಬೇಕು' ಎಂದರು.

**ಕಾರ್ಯಕ್ರಮಕ್ಕೆ ಬಂದಿದ್ದ ಗುರುಕಿರಣ್:** ಅನುಮತಿ ನಿರಾಕರಿಸಿದ ಅಧಿಕಾರಿಗಳ ವಿರುದ್ಧ ದೂರು ಇದೇ ಮೈದಾದನಲ್ಲಿ ಕೆಲ ದಿನಗಳ ಹಿಂದೆ ಅಹಾರ ಮೇಳ ನಡದಿದೆ. ಈಗಲೂ ಪಟಾಕಿ ವ್ಯಾಪಾರ ಮಳಿಗೆಯಂಥ ವಾಣಿಜ್ಯ ಚಟುವಟಿಕೆಗಳು ನಡೆಯುತ್ತಿವೆ. ಸಾಂಸ್ಕೃತಿಕ ಕಾರ್ಯಕ್ರಮವಾದ ಕುಮಟಾ ವೈಭವಕ್ಕೆ ವಾಣಿಜ್ಯ ಕಾರ್ಯಕ್ರಮದ ಹಣೆಪಟ್ಟಿ ಹಚ್ಚಲಾಗಿದೆ. ಎಂದರು.



ಉದಯವಾಹಿನಿ ಚಿತ್ರ

> **ಮಹಾತ್ಮಾಗಾಂಧಿ ಮೈದಾನ ವಿಚಾರ ನ್ಯಾಯಾಲಯದಲ್ಲಿರುವುದರಿಂದ ಕಾರ್ಯಕ್ರಮ ನಡೆಸಲು ಅನುಮತಿ ನೀಡುವುದಿಲ್ಲ ಎಂದು ಸಿ.ಪಿ.ಐ ಯೋಗೇಶ ಅವರು ನಿರಾಕರಿಸಿದರು. ಕಾರ್ಯಕ್ರಮಕ್ಕೆ ಸಂಗೀತ ನಿರ್ದೇಶಕ ಗುರುಕಿರಣ್ ಅವರನ್ನು ಕರೆಸಿದ್ದೆವು**
> -ಮಂಜುನಾಥ ನಾಯ್ಕ

## 7 ಗ್ರಾ.ಪಂ.ಗಳಿಗಿಲ್ಲ ಪಿಡಿಒ

• ಉದಯವಾಹಿನಿ, ಸೊರಬ

ಗ್ರಾಮಗಳು ಅಭಿವೃದ್ಧಿಯಾದರೆ ದೇಶ ಅಭಿವೃದ್ಧಿಯಾಗಲು ಸಾಧ್ಯ' ಎಂಬ ಮಾತಿದೆ. ಆದರೆ ತಾಲ್ಲೂಕಿನ ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ಕೊರತೆಯಿಂದ ಅಭಿವೃದ್ಧಿಗೆ ಹಿನ್ನಡೆಯಾಗಿದೆ. ತಾಲ್ಲೂಕಿನ 35 ಗ್ರಾ.ಪಂ.ಗಳ ಪೈಕಿ 7 ಪಂಚಾಯಿತಿಗಲ್ಲಿ ಪಿಡಿಒ ಇಲ್ಲ. ಹೊಸಬಾಳೆ, ಕಾತುವಳ್ಳಿ, ಇಂಡುವಳ್ಳಿ, ನ್ಯಾರ್ಸಿ, ಹರೀಶಿ, ಅಗಸನಹಳ್ಳಿ ಹಾಗೂ ಎಣ್ಣೆಕೊಪ್ಪ ಗ್ರಾಮಗಳಲ್ಲಿ ಪಿಡಿಒ ಇಲ್ಲದ ಕಾರಣ ಬೇರೆ ಪಿಡಿಒಗಳನ್ನು ಈ ಪಂಚಾಯಿತಿಗಳಿಗೆ ಹೆಚ್ಚುವರಿಯಾಗಿ ನಿಯೋಜಿಸಲಾಗಿದೆ. ಒಬ್ಬ ಅಧಿಕಾರಿ ಎರಡೆರಡು ಪಂಚಾಯಿತಿ ನಿರ್ವಹಿಸಬೇಕಿರುವ ಕಾರಣ, ಆಡಳಿತ ಯಂತ್ರದ ವೇಗ ಕುಂಠಿತವಾಗಿದೆ.

ಕಾಯಂ ಅಧಿಕಾರಿ ನೇಮಕವಾದರೆ, ಸ್ವಚ್ಛತೆ, ಅಭಿವೃದ್ಧಿ ಕಾಮಗಾರಿ, ಸರ್ಕಾರಿ ಯೋಜನೆಗಳ ಅನುಷ್ಠಾನ ಹಾಗೂ ಜನಸಾಮಾನ್ಯರ ಕೆಲಸ- ಕಾರ್ಯಗಳು ಸಕಾಲಕ್ಕೆ ನಡೆಯುತ್ತದೆ. ಆದರೆ, ತಾಲ್ಲೂಕಿನ ಏಳು ಪ್ರಮುಖ ಪಂಚಾಯಿತಿಗಳಿಗೆ ಪೂರ್ಣಾವಧಿ ಅಧಿಕಾರಿ ಇಲ್ಲ. ಏಳು ಜನ ಪಿಡಿಒಗಳು ಈ ಗ್ರಾಮಗಳೂ ಒಳಗೊಂಡಂತೆ 14 ಗ್ರಾ.ಪಂ.ಗಳ ಕಾರ್ಯಭಾರ ನಿರ್ವಹಿಸುತ್ತಿದ್ದಾರೆ. ಸಕಾಲಕ್ಕೆ ಸಾರ್ವಜನಿಕರ ಕೆಲಸಗಳು ಆಗುತ್ತಿಲ್ಲ ಎಂದು ಎಂದು ಸಾರ್ವಜನಿಕರು ಆರೋಪಿಸಿದರು.

## ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಗರ್ಭಿಣಿಯರು ಹೆಚ್ಚಳ: ವಿಷಾದ

• ಉದಯವಾಹಿನಿ, ಹಾವೇರಿ

ಜಿಲ್ಲೆಯಲ್ಲಿ ಬಾಲ್ಯವಿವಾಹ ಮತ್ತು ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚುತ್ತಿರುವುದು ವಿಷಾಧಕರ ಸಂಗತಿ. ಮಹಿಳೆ ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಯಲು ಪ್ರತಿಯೊಬ್ಬರೂ ಕೈಜೋಡಿಸಬೇಕು. ಸಾರ್ವಜನಿಕರಿಗೆ ಹೆಚ್ಚಿನ ಅರಿವು ಮೂಡಿಸುವ ಕೆಲಸವಾಗಬೇಕು' ಎಂದು 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಎನ್.ಎಂ. ರಮೇಶ ಹೇಳಿದರು.

ನಗರದ ಹೊರವಲಯದಲ್ಲಿರುವ ಜಿ.ಪಂ. ಸಭಾಂಗಣದಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ ಹಾಗೂ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದಲ್ಲಿ ಗ್ರಾ.ಪಂ. ಅಧಿಕಾರಿಗಳಿಗಾಗಿ ಹಮ್ಮಿಕೊಂಡಿದ್ದ 'ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಪೋಕ್ಸೊ ಕಾಯ್ದೆಗಳ ಪರಿಣಾಮಕಾರಿ ಮತ್ತು ಪ್ರಯೋಜನಕಾರಿ ಅನುಷ್ಠಾನಕ್ಕೆ ಎಲ್ಲರೂ ಶ್ರಮಿಸಬೇಕು. ಮಹಿಳೆ ಮತ್ತು ಮಕ್ಕಳ ಸಂರಕ್ಷಣೆ ನಮ್ಮ-ನಿಮ್ಮೆಲ್ಲರ ಕರ್ತವ್ಯವಾಗಿದೆ ಎಂದರು. ಹೆಚ್ಚುವರಿ ಜಿಲ್ಲಾಧಿಕಾರಿ ನಾಗರಾಜ್ ಎಲ್. ಮಾತನಾಡಿ, ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಪೋಕೊ ಹಾಗೂ ಬಾಲಗರ್ಭಿಣಿ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿರುವುದು ಕಳವಳಕಾರಿ ಸಂಗತಿ ಎಂದರು.

# ಸಂಕಷ್ಟದಲ್ಲಿರುವ ಮಕ್ಕಳು, ಮಹಿಳೆಯರ ನೆರವಿಗೆ ಅಕ್ಕಪಡೆ

• ನವೆಂಬರ್ 19 ರಂದು ಬೆಂಗಳೂರಿನಲ್ಲಿ ಅಕ್ಕಪಡೆಗೆ ಚಾಲನೆ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾಹಿತಿ

• ಉದಯವಾಹಿನಿ ಉಡುಪಿ

ಸಂಕಷ್ಟದಲ್ಲಿರುವ ಮಕ್ಕಳು ಮತ್ತು ಮಹಿಳೆಯರಿಗೆ ನೆರವಾಗಲು ಅಕ್ಕಪಡೆಗಳನ್ನು ಸ್ಥಾಪಿಸಲಾಗುತ್ತಿದ್ದು, ನ. 19ರಂದು ಬೆಂಗಳೂರಿನಲ್ಲಿ ಚಾಲನೆ ನೀಡಲಾಗುವುದು. ಆ ಬಳಿಕ ಉಡುಪಿ, ಮೈಸೂರು, ಮಂಗಳೂರು ಮತ್ತು ಬೆಳಗಾವಿಯಲ್ಲೂ ಅಕ್ಕಪಡೆಗಳು ಜಾರಿಗೆ ತರುತ್ತೇವೆ ಎಂದು ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಆರ್. ಹೆಬ್ಬಾಳಕರ್ ತಿಳಿಸಿದರು.

ಅವರು ಉಡುಪಿ ಜಿಲ್ಲಾಡಳಿತದ ವತಿಯಿಂದ ಅಜ್ಜರಕಾಡು ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಕರ್ನಾಟಕ ರಾಜ್ಯೋತ್ಸವವನ್ನು ಉದ್ಘಾಟಿಸಿ ಗೌರವ ಸ್ವೀಕರಿಸಿ ಮಾತನಾಡಿದರು. ಕರ್ನಾಟಕ ಏಕೀಕರಣ ಹೋರಾಟದಲ್ಲಿ ಭಾಗವಹಿಸಿದ ಹಿರಿಯ ರಾಜಕೀಯ ಮುತ್ಸದ್ದಿಗಳು, ಸಾಹಿತಿಗಳು, ಹಿರಿಯ ನಾಗರಿಕರ ತ್ಯಾಗ, ಬಲಿದಾನ ಅವಿಸ್ಮರಣೀಯ. ನಮ್ಮ ರಾಜ್ಯ ಸಾಂಸ್ಕೃತಿಕ ವೈಭವಕ್ಕೆ ಹೆಸರುವಾಸಿಯಾಗಿದೆ. ಕಾಫಿ, ಚಿನ್ನ, ರೇಷ್ಮೆ ಸೀರೆಗಳು ರಾಜ್ಯವನ್ನು ವಿಶ್ವವಿಖ್ಯಾತಿಗೊಳಿಸಿವೆ. ಬಸವಣ್ಣ, ರಾಣಿ ಚೆನ್ನಮ್ಮ, ಸರ್.ಎಂ. ವಿಶ್ವೇಶ್ವರಯ್ಯ ಅವರಂತಹ ಮಹಾನ್ ಚೇತನರು ರಾಜ್ಯದ ಹಿರಿಮೆಯನ್ನು ಹೆಚ್ಚಿಸಿದ್ದಾರೆ.

ಜಿಲ್ಲೆಯಲ್ಲಿ ಪುರುಷರಿಗಿಂತ ಮಹಿಳೆಯರ ಸಂಖ್ಯೆಯೇ ಅಧಿಕವಾಗಿದ್ದು, ಪ್ರಸಕ್ತ ಲಿಂಗಾನುಪಾತದಲ್ಲಿ 1000 ಪುರುಷರಿಗೆ 1004 ಮಹಿಳೆಯರಿದ್ದಾರೆ. ಇದು ನಾವೆಲ್ಲ ಹೆಮ್ಮೆ ಪಡುವ ವಿಚಾರವಾಗಿದೆ. ಇಂದಿಗೂ ಮಾತೃ ಪ್ರಧಾನ ಕುಟುಂಬ ವ್ಯವಸ್ಥೆಯಿರುವುದು ಜಿಲ್ಲೆಯ ಹೆಗ್ಗಳಿಕೆ. ಇದು ಜಗತ್ತಿನಲ್ಲೇ ಅತೀ ಅಪರೂಪದ ಸಂಗತಿಯಾಗಿದೆ ಎಂದರು.

ಜಿಲ್ಲೆಯ ಪ್ರಮುಖ ಕಲೆಯಾದ ಯಕ್ಷಗಾನ ಬಯಲಾಟ, ತಾಳಮದ್ದಳೆಗಳು ಜಿಲ್ಲೆಯ ಜನರ ಸಾಂಸ್ಕೃತಿಕ ಬದುಕಿನ ಭಾಗವಾಗುವುದರ ಜತೆಗೆ ಅಂತಾರಾಷ್ಟ್ರೀಯ ಕಲೆಯಾಗಿ ಆಕರ್ಷಣೆ ಪಡೆದಿದೆ. ಪಾಡ್ದನ, ಭೂತಕೋಲ, ಆಟಿ ಕಳಂಜ, ನಾಗಮಂಡಲ ಮುಂತಾದ ಜಾನಪದ ಸಂಸ್ಕೃತಿ ಈ ಮಣ್ಣಿನಲ್ಲಿ ರೂಪತಳೆದ ಆರಾಧನಾ ಕಲೆಗಳಾಗಿವೆ ಎಂದರು.

ಶೇ. 83ರಷ್ಟು ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಲು ಗ್ಯಾರಂಟಿಗಳು ಸಹಕಾರಿಯಾಗಿರುವ ಅಂಶ ಅಧ್ಯಯನದಿಂದ ಬಹಿರಂಗವಾಗಿದೆ. ಯುವ ಜನಾಂಗಕ್ಕೆ ಯುವನಿಧಿ ಯೋಜನೆ ಆರ್ಥಿಕ ಬಲ ನೀಡಿದೆ. ನಮ್ಮ ಸರಕಾರ ಇದುವರೆಗೂ ಸುಮಾರು 1 ಲಕ್ಷ ಕೋಟಿ ರೂ. ಗ್ಯಾರಂಟಿ ಯೋಜನೆಗಳಿಗೆ ವಿನಿಯೋಗಿಸಿದೆ ಎಂದು ತಿಳಿಸಿದರು. ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಮತ್ತಷ್ಟು ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ನಗದು ಪುರಸ್ಕಾರವನ್ನು ಹೆಚ್ಚಿಸಲಾಗಿದ್ದು, ಚಿನ್ನದ ಪದಕ ವಿಜೇತರಿಗೆ 7 ಲಕ್ಷ ರೂ., ಬೆಳ್ಳಿ ಪದಕ ವಿಜೇತರಿಗೆ 5 ಲಕ್ಷ ರೂ., ಹಾಗೂ ಕಂಚಿನ ಪದಕ ವಿಜೇತರಿಗೆ 3 ಲಕ್ಷ ರೂ. ನೀಡಲು ಸರಕಾರ ನಿರ್ಧರಿಸಿದೆ. ಬಜೆಟ್‌ನಲ್ಲೂ ಕ್ರೀಡಾ ಕ್ಷೇತ್ರಕ್ಕೆ ವಿಶೇಷ ಅನುದಾನ, ಬೆಂಬಲವನ್ನು ನೀಡಲಾಗುವುದೆಂದು ತಿಳಿಸಿದರು.

ನಮ್ಮ ರಾಜ್ಯವು ಪ್ರಗತಿಪರ ರಾಜ್ಯವಾಗಿದ್ದು, ಬಂಡವಾಳ ಹೂಡಿಕೆಗೆ ಪೂರಕವಾದ ವಾತಾವರಣವನ್ನು ಉತ್ತಮ ಪಡಿಸಲಾಗುತ್ತಿದೆ. ಅಂತರ್ಜಲ ಮಿತಬಳಕೆ ಮತ್ತು ಅಭಿವೃದ್ಧಿಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ 'ನೀರಿದ್ದರೆ ನಾಳೆ' ಎಂಬ ವಿನೂತನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ ಎಂದು ತಿಳಿಸಿದರು.

ಮಳೆ ಮತ್ತು ಪ್ರವಾಹದಿಂದಾಗುತ್ತಿದ್ದ ಬೆಳೆಹಾನಿಯ ಪರಿಹಾರದ ಮೊತ್ತವನ್ನು ಹೆಚ್ಚಿಸಲಾಗಿದೆ. ಎನ್.ಡಿ.ಆರ್.ಎಫ್ ನಿಯಮಾವಳಿಯ ಅನ್ವಯ ನೀಡುತ್ತಿದ್ದ ಪರಿಹಾರ ಮೊತ್ತಕ್ಕೆ ರಾಜ್ಯ ಸರಕಾರ ಹೆಚ್ಚುವರಿಯಾಗಿ ಹೆಕ್ಟೇರಿಗೆ 8,500 ರೂ. ನೀಡುತ್ತಿದೆ.

- **ಉಡುಪಿ ಜಿಲ್ಲೆಯಲ್ಲಿ ಸಂಕಷ್ಟದಲ್ಲಿರುವ ಮಕ್ಕಳ ಮತ್ತು ಮಹಿಳೆಯರಿಗೆ ಸಲುವಾಗಿ ಅಕ್ಕಪಡೆಗಳ ಸ್ಥಾಪನೆ**
- **ನವೆಂಬರ್ 19 ರಂದು ಬೆಂಗಳೂರಿನಲ್ಲಿ ಅಕ್ಕಪಡೆಗೆ ಚಾಲನೆ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾಹಿತಿ**
- **ಬೆಂಗಳೂರಿನ ಬಳಿಕ ಉಡುಪಿ, ಮೈಸೂರು, ಮಂಗಳೂರು ಮತ್ತು ಬೆಳಗಾವಿಯಲ್ಲೂ ಅಕ್ಕಪಡೆಗಳು ಜಾರಿ**



### ಕರ್ನಾಟಕ ಪೊಲೀಸ್ ನಂ. 1

**ನಮ್ಮ ರಾಜ್ಯ ಸಿಲಿಕಾನ್ ರಾಜಧಾನಿಯಾಗಿದೆ. ಮುಂದಿನ ದಿನಗಳಲ್ಲಿ ನಾವು ವಿಶ್ವದ ನಾವೀನ್ಯತಾ ರಾಜಧಾನಿಯಾಗುವತ್ತ ಸಾಗುತ್ತಿದ್ದೇವೆ. ಇಂಡಿಯಾ ಫಾರ್ ಜಸ್ಟೀಸ್ ವರದಿಯಲ್ಲಿ ಕರ್ನಾಟಕ ಪೊಲೀಸ್ ನಂ. 1 ಸ್ಥಾನದಲ್ಲಿದೆ ಎಂಬ ವರದಿ ರಾಜ್ಯದ ಘನತೆಯನ್ನು ಹೆಚ್ಚಿಸಿದೆ. ರೈತ ಬಾಂಧವರ ಭೂಮಿಯ ಮಾಲೀಕತ್ವದ ದಾಖಲೆಗಳ ನಿರ್ವಹಣೆಗೆ ನನ್ನ ಭೂಮಿ, ಪೋಡಿ ಆಂದೋಲನ, ಇ-ಪೌತಿ ಯೋಜನೆ, ಇ-ಚಾವಡಿ ಸೇರಿದಂತೆ ಅನೇಕ ಜನಪರ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.**

> **ನಮ್ಮ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳು ಗ್ರಾಮೀಣ ಮಟ್ಟದಲ್ಲಿ ಮಹಿಳಾ ಸಬಲೀಕರಣಕ್ಕೆ ಹೊಸ ಆಯಾಮ ನೀಡಿವೆ. ಇದರಿಂದ ರಾಜ್ಯಾದ್ಯಂತ ಶೇ. 70 ರಿಂದ 95ರಷ್ಟು ಬಡ ಹಿಂದುಳಿದ ಮಹಿಳೆಯರ ಜೀವನ ಮಟ್ಟ ಸುಧಾರಣೆಯಾಗಿದೆ. ಶಕ್ತಿ, ಗೃಹಜ್ಯೋತಿ ಉಳಿತಾಯದ ಹಣ ಮತ್ತು ಗೃಹಲಕ್ಷ್ಮೀ ಹಣವನ್ನು ಪ್ರಮುಖವಾಗಿ ಆಹಾರ ಪದಾರ್ಥಗಳ ಖರೀದಿಗೆ ಬಳಸುತ್ತಿದ್ದು, ಇದರಿಂದ ಶೇ. 88ರಷ್ಟು ಕುಟುಂಬಗಳು ಉತ್ತಮ ಮತ್ತು ಪೌಷ್ಟಿಕಾಂಶಯುಕ್ತ ಆಹಾರವನ್ನು ಸೇವಿಸುತ್ತಿದ್ದಾರೆ.**
> -ಸಚಿವೆ ಲಕ್ಷ್ಮೀ ಹೆಬ್ಬಾಳಕರ್

## ಮಿನಿ ನ್ಯೂಸ್

### ಸಮುದಾಯ ಆಸ್ಪತ್ರೆಯಲ್ಲಿ ರಕ್ತದಾನ ಶಿಬಿರ

• ಉದಯವಾಹಿನಿ ಕಾರಟಗಿ

ಕರ್ನಾಟಕ ಸರ್ಕಾರ ಜಿಲ್ಲಾ ಪಂಚಾಯತ್ ಕೊಪ್ಪಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕೊಪ್ಪಳ ಸಮುದಾಯ ಆರೋಗ್ಯ ಕೇಂದ್ರ, ಕಾರಟಗಿ ಹಾಗೂ ಡಾ. ನೌಷದ್ ಕುಟುಂಬ ವರ್ಗ ಇವರುಗಳ ಸಂಯುಕ್ತಾಶ್ರಯದಲ್ಲಿ ದಿ. ಡಾ. ನೌಷದ್ ಅವರ ಜನ್ಮದಿನದ ಪ್ರಯುಕ್ತ ರಕ್ತದಾನ ಶಿಬಿರ ಅಕ್ಟೋಬರ್ : 04 ಮಂಗಳವಾರ ಸಮುದಾಯ ಆರೋಗ್ಯ ಕೇಂದ್ರ,ಆವರಣದಲ್ಲಿ ಬೆಳಗ್ಗೆ : 10.00ರಿಂದ ಸಂಜೆ : 04.00ರವರೆಗೆ ನಡೆಯಲಿದೆ. ಕಾರಣ ಸಾರ್ವಜನಿಕರು ರಕ್ತದಾನ ಮಾಡುವುದು ಸುರಕ್ಷಿತ ಮತ್ತು ಒಂದು ಜೀವ ಉಳಿಸುವ ಪ್ರಕ್ರಿಯೆ. ರಕ್ತದಾನದಿಂದ ಹೃದಯದ ಆರೋಗ್ಯ ಸುಧಾರಣೆ, ಕಬ್ಬಿಣದ ಮಟ್ಟ ನಿಯಂತ್ರಣ ಮತ್ತು ಕ್ಯಾಲೋರಿಗಳು ಬರ್ನ್ ಆಗುತ್ತವೆ. ರಕ್ತದಾನ ಮಾಡಿ, ನೀವು ನಿರ್ದಿಷ್ಟ ವೈದ್ಯಕೀಯ ಪರಿಸ್ಥಿತಿಗಳು, ಶಸ್ತ್ರಚಿಕಿತ್ಸೆ ಅಥವಾ ಅಪಘಾತಕ್ಕೊಳಗಾದವರಿಗೆ ಸಹಾಯ ಮಾಡಬಹುದು. ನಿಮ್ಮ ರಕ್ತದಾನವು ಮೂರು ಜೀವಗಳನ್ನು ಉಳಿಸಬಹುದು.

### ಎಂಇಎಸ್ ನಿಷೇಧಕ್ಕೆ ಗಂಭೀರ ಚರ್ಚೆ: ಸಚಿವ ಸತೀಶ ಜಾರಕಿಹೊಳಿ ಭರವಸೆ

• ಉದಯವಾಹಿನಿ ಬೆಳಗಾವಿ

ಬೆಳಗಾವಿಯಲ್ಲಿ ಮಹಾರಾಷ್ಟ್ರ ಏಕೀಕರಣ ಸಮಿತಿ (ಎಂಇಎಸ್) ನಾಯಕರು ನಾಡವಿರೋಧಿ ಘೋಷಣೆ ಹಾಕಿದ್ದಾರೆ ಎಂಬ ದೂರು ಆಧರಿಸಿ, ಆ ಸಂಘಟನೆ ನಿಷೇಧ ಮಾಡುವ ಬಗ್ಗೆ ಗಂಭೀರ ಚರ್ಚೆ ಮಾಡಲಾಗುವುದು' ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಶನಿವಾರ ರಾಜ್ಯೋತ್ಸವ ಧ್ವಜಾರೋಹಣ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಎಂಇಎಸ್ ನಾಯಕರಿಗೆ ಕರಾಳ ದಿನಾಚರಣೆಗೆ ಅವಕಾಶ ನೀಡಲಾಗಿಲ್ಲ. ಅವರು ಪ್ರತಿ ವರ್ಷ ಸಮಾವೇಶದ ಹೆಸರಿನಲ್ಲಿ ಅನುಮತಿ ಪಡೆಯುತ್ತಿದ್ದಾರೆ. ಕನ್ನಡ ವಿರೋಧಿ ಚಟುವಟಿಕೆ ನಡೆಸದಂತೆ ನಿಗಾ ವಹಿಸಲಾಗುವುದು. ಅಂಥ ಕೆಲಸ ಮಾಡಿದ್ದರೆ ಸಂಘಟನೆ ನಿಷೇಧಿಸಲು ಗಂಭೀರ ಚರ್ಚೆ ಮಾಡಲಾಗುವುದು.

ಈ ಬಗ್ಗೆ ಪೊಲೀಸ್ ಹಾಗೂ ಪಾಲಿಕೆ ಅಧಿಕಾರಿಗಳೊಂದಿಗೆ ಮಾತನಾಡುತ್ತೇನೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಮರಾಠ ಶಿಕ್ಷಣ ಸಮೂಹ ಸಂಸ್ಥೆಯ ಅಧ್ಯಕ್ಷೆ ರಾಜ ಶ್ರೀ ಯಾದವ ಅವರು ಕನ್ನಡ ವಿರೋಧಿ ಧೋರಣೆ ಹೊಂದಿದ್ದರೂ ಲಾಬಿ ಮಾಡಿ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗಿದೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು ಆ ಸಂಸ್ಥೆಯಲ್ಲಿ ಕನ್ನಡ ಬಳಸುವ ಬಗ್ಗೆ ಗಮನ ಹರಿಸಲಾಗುವುದು ಎಂದರು.

### ಸಾರ್ವಜನಿಕ ಸ್ಥಳಗಳಲ್ಲಿ ಕಸ ಹಾಕಿದವರ ವಿರುದ್ಧ ಪ್ರಕರಣ: ಎಸ್.ಡಿ. ಆದರ್ಶ

• ಉದಯವಾಹಿನಿ ಸಕಲೇಶಪುರ

ಪುರಸಭಾ ವ್ಯಾಪ್ತಿಯಲ್ಲಿ ರಸ್ತೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಸ ಹಾಕುವವರ ವಿರುದ್ಧ ಪ್ರಕರಣ ದಾಖಲಿಸಬೇಕು ಎಂದು ಪುರಸಭಾ ಸದಸ್ಯ ಎಸ್.ಡಿ. ಆದರ್ಶ ಆಗ್ರಹಿಸಿದರು. ಪುರಸಭಾ ಕಚೇರಿಯಲ್ಲಿ ನಡೆದ ಪುರಸಭೆ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, 'ಹಳೆ ಸಂತವೇರಿ ಬಡಾವಣೆಯಲ್ಲಿ ಕೆಲವು ನಿವಾಸಿಗಳು, ಹೋಟೆಲ್‌ನವರು ವಾಹನಗಳಲ್ಲಿ ತ್ಯಾಜ್ಯವನ್ನು ರಸ್ತೆಯ ಮೇಲೆ ಎಸೆದು ಹೋಗುತ್ತಿದ್ದಾರೆ. ಇವುಗಳನ್ನು ನಾಯಿಗಳು ಎಳೆದಾಡಿ, ರಸ್ತೆ ತುಂಬೆಲ್ಲಾ ದುರ್ವಾಸನೆ ಬೀರುತ್ತಿರುತ್ತದೆ. ಕಸ ಸುರಿಯುವ ಇಂತಹ ಅನಾಗರೀಕರಿಗೆ ದಂಡ ವಿಧಿಸಿದರೆ ಸಾಲದು, ಅವರ ಮೇಲೆ ಪ್ರಕರಣ ದಾಖಲು ಮಾಡಬೇಕು' ಎಂದು ಆಗ್ರಹಿಸಿದರು.

'ಮಲ್ಲಿಕಾರ್ಜುನ ನಗರ ಬಡಾವಣೆ, ನ್ಯಾಯಾಲಯ ಅಕ್ಕಪಕ್ಕ, ರೋಟರಿ ಆಂಗ್ಲ ಶಾಲೆ ಹತ್ತಿರ, ಆಚಂಗಿ, ಒಕ್ಕಲಿಗರ ಕಲ್ಯಾಣ ಮಂಟಪ ಸೇರಿದಂತೆ ಪ್ರತಿಯೊಂದು ವಾರ್ಡ್‌ಗಳಲ್ಲಿಯೂ ಕಸ ಎಸೆಯುವುದನ್ನು ರೂಢಿ ಮಾಡಿಕೊಂಡಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ, ಕಸ ಸಂಗ್ರಹ ಮಾಡುವ ಆಟೋಗಳಲ್ಲಿಯೂ ಜಾಗೃತಿ ಮೂಡಿಸುತ್ತಿದ್ದರೂ ಇದು ಕಡಿಮೆಯಾಗಿಲ್ಲ ಕಠಿಣ ಕ್ರಮ ಅಗತ್ಯ ಎಂದರು.

ರಸ್ತೆ ಬದಿಯಲ್ಲಿ ಹೆಚ್ಚು ಕಸ ಹಾಕುವ ಸ್ಥಳಗಳಲ್ಲಿ ಪುರಸಭೆಯಿಂದಲೇ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು. ಅಲ್ಲದೇ ಆಸುಪಾಸಿನಲ್ಲಿ ಇರುವ ಸಿಸಿಟಿವಿ ಕ್ಯಾಮೆರಾಗಳ ವಿಡಿಯೋಗಳನ್ನು ಸಂಗ್ರಹಿಸಿ ಕಸ ಹಾಕಿದವರ ಮನೆ ಬಾಗಿಲಿಗೆ ಕಸ ಹಾಕಬೇಕು. ಅಲ್ಲದೆ ಸಾಮಾಜಿಕ ಜಾಲ ತಾಣಗಳಲ್ಲಿ ಪುರಸಭೆಯಿಂದಲೇ ಅಂತವರ ವಿಡಿಯೋಗಳನ್ನು ಪ್ರಸಾರ ಮಾಡಿ ಅವರ ಮರ್ಯಾದೆ ತೆಗೆಯಬೇಕು ಎಂದು ಸಿಟ್ಟಾದರು.

### ಸರ್ಕಾರಿ ಜಾಗ ಕಬಳಿಕೆಗೆ ಹುನ್ನಾರ

• ಉದಯವಾಹಿನಿ ಕುಷ್ಟಗಿ

ಪಟ್ಟಣದ ಗಜೇಂದ್ರಗಡ ರಸ್ತೆಯ ದೇಸಾಯಿ ಬಡಾವಣೆಯಲ್ಲಿರುವ ಮಾಜಿ ಸೈನಿಕರ ಸಂಘದ ನಿವೇಶನದ ಮುಂದಿನ ಸರ್ಕಾರಿ ಜಾಗವನ್ನು ಕೆಲ ವ್ಯಕ್ತಿಗಳು ಕಬಳಿಸಲು ಮುಂದಾಗಿದ್ದು, ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಸೈನಿಕರು ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಕೊಪ್ಪಳದಲ್ಲಿ ಉಪ ಲೋಕಾಯುಕ್ತರು ಮತ್ತು ಇಲ್ಲಿಯ ಪುರಸಭೆ, ಪೊಲೀಸರಿಗೂ ದೂರು ಸಲ್ಲಿಸಿದ್ದಾರೆ. ಈ ಕಾರಣಕ್ಕೆ ಪರಿಶೀಲನೆಗೆ ಸ್ಥಳಕ್ಕೆ ಭೇಟಿ ನೀಡಿದ್ದ ಪುರಸಭೆ ಸಿಬ್ಬಂದಿಯೊಂದಿಗೆ ಕೆಲವರು ವಾಗ್ವಾದಕ್ಕಿಳಿದಿದ್ದರು ಎಂದು ಮೂಲಗಳು ತಿಳಿಸಿವೆ.

**ಆಗಿದ್ದೇನು?:** ನಿವೃತ್ತ ಸೈನಿಕರ ಸಂಘಕ್ಕೆ ತನ್ನದೇ ಆದ ಚಟುವಟಿಕೆ, ಕಾರ್ಯಕ್ರಮ ನಡೆಸುವುದಕ್ಕೆ ಸ್ವಂತ ಜಾಗ ಇಲ್ಲ. ಈ ಕಾರಣಕ್ಕೆ ನಿವೇಶನ ಒದಗಿಸುವಂತೆ ದಶಕದ ಹಿಂದೆಯೇ ಪುರಸಭೆಗೆ ಮನವಿ ಮಾಡುತ್ತಲೇ ಬಂದಿದ್ದಾರೆ. ಅಲ್ಲದೆ, ದೇಸಾಯಿ ಬಡಾವಣೆಯಲ್ಲಿ ಮುಖ್ಯರಸ್ತೆಗೆ ಹೊಂದಿಕೊಂಡಂತೆ ನಿವೇಶನ ಕೊಡುವುದಾಗಿ ಪುರಸಭೆಯ ಆಗಿನ ಅಧ್ಯಕ್ಷ ಮೌಖಿಕ ಸಮ್ಮತಿ ನೀಡಿದ್ದರಿಂದ ಕೆಲ ವರ್ಷಗಳ ಹಿಂದೆಯೇ ಸದರಿ ಸ್ಥಳದಲ್ಲಿ ಮಾಜಿ ಸೈನಿಕರ ಸಂಘದ ನಿವೇಶನ ಎಂಬ ಫಲಕ ಅಳಡಿಸಲಾಗಿದೆ. ಆದರೆ, ಇಲ್ಲಿಯವರೆಗೂ ಅಲೆದಾಡುತ್ತ ಬಂದರೂ ಪುರಸಭೆ ಲಿಖಿತ ಗೊತ್ತುವಳಿ ಅಂಗೀಕರಿಸಿ ಸದರಿ ಜಾಗವನ್ನು ಸಂಘಕ್ಕೆ ಅಧಿಕೃತವಾಗಿ ವಹಿಸಿಕೊಟ್ಟಿಲ್ಲ ಎಂದು ದೂರಲಾಗಿದೆ.

ಈ ಮಧ್ಯೆ, ನಿವೇಶನದ ಮುಂದಿನ ಜಾಗ ರಸ್ತೆಗೆ ಮೀಸಲಾಗಿದ್ದು, ಲೋಕೋಪಯೋಗಿ ಇಲಾಖೆಗೆ ಸೇರಿದೆ. ಮಾಜಿ ಸೈನಿಕರ ಸಂಘವು ನಿವೇಶನದ ದಾಖಲೆಗಳು ಲಭ್ಯವಾದ ಬಳಿಕ ಕಟ್ಟಡ ನಿರ್ಮಾಣದ ಉದ್ದೇಶ ಹೊಂದಿದೆ. ಆದರೆ, ನಿವೇಶನದ ಮುಂದಿನ ಜಾಗವನ್ನು ಅಕ್ರಮವಾಗಿ ವಶದಲ್ಲಿಟ್ಟುಕೊಳ್ಳಲು ಮುಂದಾಗಿರುವ ಕೆಲ ಪಟ್ಟಭದ್ರ ವ್ಯಕ್ತಿಗಳು ಅದರಲ್ಲಿ ಗರಸು ಮಣ್ಣು ಹಾಕಿದ್ದು, ಸಮತಟ್ಟು ಮಾಡಿ ಶೆಡ್‌ಗಳನ್ನು ನಿರ್ಮಿಸಿ ಸರ್ಕಾರಿ ಜಾಗವನ್ನೇ ಬೇರೆಯವರಿಗೆ ವಾಣಿಜ್ಯ ಉದ್ದೇಶಕ್ಕೆ ಅನಧಿಕೃತವಾಗಿ ಬಾಡಿಗೆ ನೀಡುವ ದುರಾಲೋಚನೆ ಹೊಂದಿದ್ದಾರೆ ಎಂದು ಸೈನಿಕರ ಸಂಘ ನೀಡಿದ ದೂರಿನಲ್ಲಿ ವಿವರಿಸಲಾಗಿದೆ.

ಸ್ಥಳಕ್ಕೆ ಭೇಟಿ ನೀಡಿದ ಮಾಜಿ ಸೈನಿಕರ ಸಂಘದ ಉಪಾಧ್ಯಕ್ಷ ಶಂಕರಪ್ಪ ಕವಡಿಕಾಯಿ, ಸದಸ್ಯರಾದ ಶಂಕರಪ್ಪ ಗಾದಾರಿ, ಭೀಮಪ್ಪ ಮ್ಯಾಗೇರಿ, ಇತರರು ಇದ್ದರು.

## ಸುಡಾನ್‌ನ ಆಸ್ಪತ್ರೆ ಮೇಲೆ ದಾಳಿ:460 ಜನರನ್ನು ಕೊಂದ ಬಂದೂಕುಧಾರಿಗಳು



**ಜಿನೀವಾ:** ಸುಡಾನ್‌ನ ಆಸ್ಪತ್ರೆಯ ಮೇಲೆ ಬಂದೂಕುಧಾರಿಗಳ ಗುಂಪು ದಾಳಿ ಮಾಡಿ ಗುಂಡಿಕ್ಕಿ 460 ಜನರನ್ನು ಕೊಂದಿರುವ ಘಟನೆ ಕಳೆದ ರಾತ್ರಿ ನಡೆದಿದೆ. ವೈದ್ಯರು ಮತ್ತು ದಾದಿಯರನ್ನು ಅಪಹರಿಸಲಾಗಿದ್ದು ನಂತರ ಸಿಬ್ಬಂದಿ, ರೋಗಿಗಳು ಮತ್ತು ಅಲ್ಲಿ ಆಶ್ರಯ ಪಡೆದಿದ್ದ ಜನರ ಮೇಲೆ ಗುಂಡು ಹಾರಿಸಿ ನರಮೇಧ ಮಾಡಿದ್ದಾರೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸಿದೆ. ದೇಶದ ಡಾರ್ಫರ್ ಪ್ರದೇಶದಲ್ಲಿ ಪ್ರಬಲ ಅರೆಸೈನಿಕ ಗುಂಪಾದ ರಾಪಿಡ್ ಸಪೋರ್ಟ್ ಫೋರ್ಸ್ ಹಿಂಸಾಚಾರದ ಭಾಗವಾಗಿದೆ. ಕಳೆದ 18 ತಿಂಗಳ ಕಾಲ ಮುತ್ತಿಗೆ ಹಾಕಿದ ನಂತರ ಪ್ರಮುಖ ನಗರವಾದ ಎಲ್-ಫಶರ್ ಅನ್ನು ವಶಪಡಿಸಿಕೊಂಡಿದೆ. ಹೋರಾಟಗಾರರು ಮನೆ ಮನೆಗೆ ಹೋಗಿ ನಾಗರಿಕರನ್ನು ಕೊಂದು ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ವರದಿ ತಿಳಿಸಿದೆ.

ಆಸ್ಪತ್ರೆ ದಾಳಿ ಮತ್ತು ಇತರ ಹಿಂಸಾಚಾರದ ಬಗ್ಗೆ ಹಲವು ವಿವರಗಳು ನಿಧಾನವಾಗಿ ಹೊರಬರುತ್ತಿವೆ ಮತ್ತು ಒಟ್ಟು ಸಾವಿನ ಸಂಖ್ಯೆ ನಿಗರವಾಗಿ ಇನ್ನೂ ತಿಳಿದಿಲ್ಲ. ಎಲ್-ಫಶರ್‌ನ ಪತನವು ಆಫ್ರಿಕಾದ ಮೂರನೇ ಅತಿದೊಡ್ಡ ದೇಶದಲ್ಲಿ ಆರ್‌ಎಸ್‌ಎಫ್ ಮತ್ತು ಮಿಲಿಟರಿ ನಡುವಿನ ಕ್ರೂರ ಯುದ್ಧ, ಎರಡು ವರ್ಷಗಳ ಈ ಯುದ್ಧದ ಹೊಸ ಹಂತವನ್ನು ಸೂಚಿಸುತ್ತದೆ. ಯುಎನ್‌ನ ಅಂಕಿಅಂಶಗಳ ಪ್ರಕಾರ, ಯುದ್ಧವು 40,000 ಕ್ಕೂ ಹೆಚ್ಚು ಜನರನ್ನು ಬಲಿ ತೆಗೆದುಕೊಂಡಿದೆ, ಆದರೆ ನೆರವು ಗುಂಪುಗಳು ಅದು ಕಡಿಮೆ ಎಣಿಕೆಯಾಗಿದೆ ಮತ್ತು ನಿಜವಾದ ಸಂಖ್ಯೆ ಹಲವು ಪಟ್ಟು ಹೆಚ್ಚಿರಬಹುದು ಎಂದು ಹೇಳುತ್ತವೆ. ಯುದ್ಧವು 14 ಮಿಲಿಯನ್‌ಗಿಂತಲೂ ಹೆಚ್ಚು ಜನರನ್ನು ಸ್ಥಳಾಂತರಿಸಿದೆ ಮತ್ತು ಸಾವಿರಾರು ಜನರನ್ನು ಕೊಂದಿದೆ ಎನ್ನಲಾಗಿದೆ. ಸ್ಪೇನ್ ನಷ್ಟು ಗಾತ್ರದ ಪ್ರದೇಶವಾದ ಡಾರ್ಫರ್‌ನ ಕೆಲವು ಭಾಗಗಳಲ್ಲಿ ಮತ್ತು ದೇಶದ ಇತರ ಭಾಗಗಳಲ್ಲಿ ಕ್ಷಾಮವನ್ನು ಘೋಷಿಸಲಾಗಿದೆ.

### ಆಸಿಯಾನ್ ಶೃಂಗಸಭೆಯಲ್ಲಿ ಭೇಟಿಯಾದ ರಾಜ್ ನಾಥ್ ಸಿಂಗ್ ಮತ್ತು ಪೀಟ್ ಹೆಗ್ಸೇತ್

## ಭಾರತ-ಅಮೆರಿಕಾ ನಡುವೆ 10 ವರ್ಷಗಳ ರಕ್ಷಣಾ ಒಪ್ಪಂದ

**ಕೌಲಾಲಂಪುರ:** ಭಾರತ ಮತ್ತು ಅಮೆರಿಕ ನಡುವೆ ಸುಂಕ ಉದ್ವಿಗ್ನತೆಯನ್ನು ಶಮನಗೊಳಿಸುವ ನಿಟ್ಟಿನಲ್ಲಿ ಈಗಾಗಲೇ ಎರಡು ದೇಶಗಳ ನಡುವೆ ಮಾತುಕತೆ ಕಾರ್ಯರೂಪದಲ್ಲಿದ್ದ, ಈ ನಡುವೆ ಈಗ ಮತ್ತೆ ಎರಡು ರಾಷ್ಟ್ರಗಳ ನಡುವೆ ಮುಂದಿನ 10 ವರ್ಷಗಳ ರಕ್ಷಣಾ ವಲಯದಲ್ಲಿ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸಲು ವಿಸ್ತೃತವಾದ ಹೊಸ ರಕ್ಷಣಾ ಚೌಕಟ್ಟಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಅಮೆರಿಕದ ಅಧಿಕಾರಿ ಪೀಟ್ ಹೆಗ್ಸೆತ್ ಶುಕ್ರವಾರ ಸಹಿ ಹಾಕಿದ್ದಾರೆ.

ಈ ಕುರಿತು ಮಾತನಾಡಿರುವ ಅಧಿಕಾರಿಗಳು ಈ ಪಾಲುದಾರಿಕೆಯು ಮರುಸಂಘಟಿಸುವ ಉದ್ದೇಶ ಹೊಂದಿದೆ.

**ರಕ್ಷಣಾ ಒಪ್ಪಂದಕ್ಕೆ ಸಹಿ**

ಇನ್ನು, ಈ ಪ್ರದೇಶದಲ್ಲಿ ಉದ್ಭವಿಸುತ್ತಿರುವ ಭದ್ರತಾ ಸವಾಲುಗಳು ಮತ್ತು ಆದ್ಯತೆಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಹೊಸ ಒಮ್ಮತ ಮೂಡಿದೆ.

ಇದರ ಜೊತೆಗೆ, ಪ್ರಬಲ ನಿರೋಧಕ ಶಕ್ತಿ, ಸ್ಥಿರತೆ ಮತ್ತು ಹಾಗೂ ಮುಕ್ತ ಇಂಡೋ-ಪೆಸಿಫಿಕ್ ಅನ್ನು ರಕ್ಷಿಸುವ

- **ಭಾರತ ಹಾಗೂ ಅಮೆರಿಕಾ ನಡುವೆ 10 ವರ್ಷಗಳ ರಕ್ಷಣಾ ಒಪ್ಪಂದಕ್ಕೆ ಸಹಿ**
- **ಆಸಿಯಾನ್ ಶೃಂಗಸಭೆಯಲ್ಲಿ ಭೇಟಿಯಾದ ರಾಜ್ ನಾಥ್ ಸಿಂಗ್ ಮತ್ತು ಪೀಟ್ ಹೆಗ್ಸೇತ್**
- **ಭಾರತ ಹಾಗೂ ಅಮೆರಿಕಾ ನಡುವಿನ ರಕ್ಷಣಾ ಸಂಬಂಧ ಭದ್ರಗೊಳಿಸಲಿದೆ ಈ ಒಪ್ಪಂದ**

ಅಗತ್ಯತೆಗಳನ್ನು ಪೂರೈಸುವ ಉದ್ದೇಶದಿಂದ ಒಪ್ಪಂದವಾಗಿದೆ ಎಂದಿದ್ದಾರೆ.

ಇನ್ನು, ಹೆಗ್ಸೇತ್ ಸಹ ಈ ಒಪ್ಪಂದದ ಕುರಿತು ತಮ್ಮ ಅಧಿಕೃತ ಎಕ್ಸ್ ಖಾತೆಯಲ್ಲಿ 10 ವರ್ಷಗಳ ಯುಎಸ್-ಭಾರತ ರಕ್ಷಣಾ ಚೌಕಟ್ಟಿಗೆ ಸಹಿ ಹಾಕಲು ನಾನು ರಾಜನಾಥ್ ಸಿಂಗ್ ಅವರನ್ನು ಭೇಟಿಯಾದೆ. ಇದು ನಮ್ಮ ರಕ್ಷಣಾ ಪಾಲುದಾರಿಕೆಯನ್ನು ಮುನ್ನಡೆಸುತ್ತದೆ, ಪ್ರಾದೇಶಿಕ ಸ್ಥಿರತೆ ಮತ್ತು ತಡೆಗಟ್ಟುವಿಕೆಗೆ ಒಂದು ಮೂಲಾಧಾರವಾಗಿದೆ. ನಾವು ನಮ್ಮ ಸಮನ್ವಯ, ಮಾಹಿತಿ ಹಂಚಿಕೆ ಮತ್ತು ತಾಂತ್ರಿಕ ಸಹಕಾರವನ್ನು ಹೆಚ್ಚಿಸುತ್ತಿದ್ದೇವೆ. ಎಂದು ಹಂಚಿಕೊಂಡಿದ್ದಾರೆ.

ಭಾರತ ರಷ್ಯಾದ ಕಚ್ಚಾತೈಲವನ್ನು ಖರೀದಿಸುತ್ತಿದೆ ಎಂದು ಅಮೆರಿಕಾ ಆರೋಪಿಸಿ ಭಾರತೀಯ ಸರಕುಗಳಿಗೆ 25% ಹೆಚ್ಚುವರಿ ಸುಂಕಗಳನ್ನು ವಿಧಿಸಿದ ನಂತರ ಉಂಟಾಗಿದ್ದ ಉದ್ವಿಗ್ನತೆಯ ನಡುವೆ ಈ ಬೆಳವಣಿಗೆ ಬಂದಿದ್ದು, ಈ ಒಪ್ಪಂದ ಮತ್ತೆ ಭಾರತ ಹಾಗೂ ಅಮೆರಿಕಾದ ನಡುವಿನ ಸಂಬಂಧ ಮತ್ತೆ ಪುನರುಜ್ಜೀವನಗೊಳ್ಳುವ ಮೂಲಕ ಮಹತ್ವದ ಬೆಳವಣಿಗೆಯಾಗಿದ್ದು, ಇದು ಮುಂದೆ ವ್ಯಾಪಾರ ಹಾಗೂ ಸುಂಕ ಕಡಿತಗೊಳಿಸುವ ಮಾತುಕತೆಗಳ ಅಡಿಪಾಯವಾಗಲಿದೆ.



**ರಕ್ಷಣಾ ವಲಯದಲ್ಲಿ ಹೊಸ ಯುಗಕ್ಕೆ ನಾಂದಿ ಹಾಡಲಿರುವ ಒಪ್ಪಂದ**

**ಈ ಒಪ್ಪಂದದ ಕುರಿತು ರಕ್ಷಣಾ ಸಚಿವ ರಾಜನಾಥ್ ಸಿಂಗ್‌ನನ್ನ ಹಾಗೂ ಅಮೆರಿಕದ ಪೀಟ್ ಹೆಗೇತ್ಸ್ ನ ನಡುವೆ ಫಲಪ್ರದವಾದ ಮಾತುಕತೆ ನಡೆದಿದೆ. ನಾವು ಮುಂದಿನ 10 ವರ್ಷಗಳ 'ಅಮೆರಿಕ-ಭಾರತ ಪ್ರಮುಖ ರಕ್ಷಣಾ ಪಾಲುದಾರಿಕೆಗಾಗಿ ಚೌಕಟ್ಟ'ಗೆ ಸಹಿ ಹಾಕಿದ್ದೇವೆ. ಇದು ನಮ್ಮ ಈಗಾಗಲೇ ಬಲವಾದ ರಕ್ಷಣಾ ಪಾಲುದಾರಿಕೆಯಲ್ಲಿ ಹೊಸ ಯುಗಕ್ಕೆ ನಾಂದಿ ಹಾಡುತ್ತದೆ. ಈ ರಕ್ಷಣಾ ಚೌಕಟ್ಟು ಭಾರತ-ಅಮೆರಿಕ ರಕ್ಷಣಾ ಸಂಬಂಧದ ಸಂಪೂರ್ಣ ವರ್ಣಪಟಲಕ್ಕೆ ನೀತಿ ನಿರ್ದೇಶನವನ್ನು ಒದಗಿಸುತ್ತದೆ ಎಂದು ತಮ್ಮ ಅಧಿಕೃತ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ .**

**ಆಸಿಯಾನ್ ಸಭೆಯಲ್ಲಿ ಭೇಟಿ ಮಾಡಿದ ಉಭಯ ನಾಯಕರು**

**ಕೌಲಾಲಂಪುರದಲ್ಲಿ ನಡೆದ ಆಸಿಯಾನ್ ಶೃಂಗಸಭೆಯ ಸಂದರ್ಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಪೀಟ್ ಹೆಗ್ಸೆತ್ ನಡೆಸಿದ ಸಭೆಯಲ್ಲಿ ದ್ವಿಪಕ್ಷೀಯ ರಕ್ಷಣಾ ಯೋಜನೆಗೆ ಸಹಿ ಹಾಕಿದ್ದಾರೆ. 2025ರ ಈ ರಕ್ಷಣಾ ಒಪ್ಪಂದ ಮುಂದಿನ 10 ವರ್ಷಗಳಲ್ಲಿ ರಕ್ಷಣಾ-ಕೈಗಾರಿಕಾ ಸಹಯೋಗ, ಭೂಮಿ, ವಾಯು, ಸಮುದ್ರ, ಬಾಹ್ಯಾಕಾಶ ಮತ್ತು ಸೈಬರ್‌ಸ್ಪೇಸ್‌ನಾದ್ಯಂತ ಮಿಲಿಟರಿ ಪರಸ್ಪರ ಕಾರ್ಯಸಾಧ್ಯತೆ ಮತ್ತು ಕಡಲ ಕ್ಷೇತ್ರದ ಜಾಗೃತಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಸಹಕಾರವನ್ನು ಗಾಢವಾಗಿಸಲು ಏಕೀಕೃತ ದೃಷ್ಟಿ ಮತ್ತು ನೀತಿ ನಿರ್ದೇಶನವನ್ನು ಒದಗಿಸುವ ಮೂಲಕ ರಕ್ಷಣಾ ಪಾಲುದಾರಿಕೆಯನ್ನು ಮತ್ತಷ್ಟು ಪರಿವರ್ತಿಸುವ ಗುರಿಯನ್ನು ಒಳಗೊಂಡಿದೆ.**

## ಬೆಂಗಳೂರು-ಕೊಚ್ಚಿ ವಂದೇ ಭಾರತ್ ರೈಲಿನ ವೇಳಾಪಟ್ಟಿ ಪ್ರಕಟ

**ಮಿನಿ ನ್ಯೂಸ್**

**ಕೊಚ್ಚಿ:** ಶೀಘ್ರದಲ್ಲೇ ಸಂಚಾರ ಆರಂಭಿಸಲಿರುವ ಹೊಸ ಬೆಂಗಳೂರು-ಕೊಚ್ಚಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ವೇಳಾಪಟ್ಟಿಯನ್ನು ರೈಲ್ವೆ ಸಚಿವಾಲಯ ಪ್ರಕಟಿಸಿದೆ. ರೈಲ್ವೆ ಮಂಡಳಿ ಹೊರಡಿಸಿದ ಅಧಿಸೂಚನೆಯ ಪ್ರಕಾರ, ರೈಲು ಸಂಖ್ಯೆ 26651 ಕೆಎಸ್‌ಆರ್ ಬೆಂಗಳೂರು-ಎರ್ನಾಕುಲಂ ಜಂಕ್ಷನ್ ವಂದೇ ಭಾರತ್ ಎಕ್ಸ್‌ಪ್ರೆಸ್ ಬೆಂಗಳೂರಿನಿಂದ ಬೆಳಿಗ್ಗೆ 5.10 ಕ್ಕೆ ಹೊರಟು ಮಧ್ಯಾಹ್ನ 1.50 ಕ್ಕೆ ಎರ್ನಾಕುಲಂ ಜಂಕ್ಷನ್ ತಲುಪಲಿದೆ.

ರಿಟರ್ನ್ ಸೇವೆ, 26652 ಎರ್ನಾಕುಲಂ ಜಂಕ್ಷನ್ -ಕೆಎಸ್‌ಆರ್ ಬೆಂಗಳೂರು, ಎರ್ನಾಕುಲಂನಿಂದ ಮಧ್ಯಾಹ್ನ 2.20 ಕ್ಕೆ ಹೊರಟು ರಾತ್ರಿ 11 ಗಂಟೆಗೆ ಬೆಂಗಳೂರಿಗೆ ಆಗಮಿಸಲಿದೆ. ಈ ರೈಲು ಕೃಷ್ಣರಾಜಪುರಂ, ಸೇಲಂ, ಈರೋಡ್, ತಿರುಪ್ಪೂರು, ಕೊಯಮತ್ತೂರು, ಪಾಲಕ್ಕಾಡ್ ಮತ್ತು ತ್ರಿಶೂರ್‌ನಲ್ಲಿ ನಿಲುಗಡೆ ಹೊಂದಿರುತ್ತದೆ. ಸೌತ್ ರೈಲ್ವೇ ಮತ್ತು ನೈಋತ್ಯ ರೈಲ್ವೆ ವಲಯಗಳಿಗೆ ಸಾಧ್ಯವಾದಷ್ಟು ಬೇಗ ಸೇವೆಯನ್ನು ಪರಿಚಯಿಸಲು ಸಚಿವಾಲಯ ಸೂಚನೆ ನೀಡಿದೆ. ಅಗತ್ಯವಿದ್ದರೆ, ಉದ್ಘಾಟನಾ ರೈಲನ್ನು ವಿಶೇಷ ಸೇವೆಯಾಗಿ ನಿರ್ವಹಿಸಬಹುದು, ಅದು ನಂತರ ಅದರ ಲಿಂಕ್ ಅನ್ನು ತೆಗೆದುಕೊಳ್ಳುತ್ತದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ತಿರುವನಂತಪುರಂ-ಕಾಸರಗೋಡು ಮತ್ತು ತಿರುವನಂತಪುರಂ-ಮಂಗಳೂರು ಮಾರ್ಗಗಳ ನಂತರ ಕೇರಳದಲ್ಲಿ ಇದು ಮೂರನೇ ವಂದೇ ಭಾರತ್ ಎಕ್ಸ್‌ಪ್ರೆಸ್ ಸೇವೆಯಾಗಲಿದೆ.

## ರಾಜಸ್ಥಾನದಲ್ಲಿ 3 ಮೌಲ್ವಿಗಳು ಸೇರಿ ಐವರು ಶಂಕಿತ ಭಯೋತ್ಪಾದಕರು ಅರೆಸ್ಟ್

**ಜೈಪುರ್:** ಭಯೋತ್ಪಾದನೆಗೆ ಹಣಕಾಸು ನೆರವು ನೀಡಿದ ಐವರು ಶಂಕಿತರನ್ನು ರಾಜಸ್ಥಾನ ಎಟಿಎಸ್ ಬಂಧಿಸಿದೆ. ಬಂಧಿತ ಮೌಲ್ವಿಗಳನ್ನು ಅಯೂಬ್, ಮಸೂದ್ ಮತ್ತು ಉಸ್ಮಾನ್ ಎಂದು ಗುರುತಿಸಲಾಗಿದೆ. ಇನ್ನೂ ಕರೌಲ್‌ನ ಜುನೈದ್ ಎಂಬಾತನನ್ನು ಬಂಧಿಸಲಾಗಿದ್ದು, ಇನ್ನೊರ್ವನ ಗುರುತು ಪತ್ತೆಯಾಗಿಲ್ಲ. ಬಂಧಿತರಲ್ಲಿ ಒಬ್ಬನಾದ ಜೋಧ್‌ಪುರದ ಚೋಖಾದ ಅರೇಬಿಯಾ ಮದರಸಾದ ಧರ್ಮಗುರು ಆಯೂಬ್‌ನಿಂದ ಕೆಲವು ದಾಖಲೆಗಳನ್ನು ಎಟಿಎಸ್ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಆತ 13 ವರ್ಷಗಳಿಂದ ಮದರಸಾದಲ್ಲಿ ಕೆಲಸ ಮಾಡುತ್ತಿದ್ದ. ಇನ್ನೂ ಮದರಸಾದ ಉಳಿದ ಶಿಕ್ಷಕರು ಉಗ್ರರಿಗೆ ಸಹಕರಿಸುವ ಚಟುವಟಿಕೆ ನಡೆಸುತ್ತಿದ್ದಾರೆಯೇ ಎಂಬ ಬಗ್ಗೆ ಯಾವುದೇ ಸುಳಿವು ಸಿಕ್ಕಿಲ್ಲ. ಎಟಿಎಸ್ ಅಧಿಕಾರಿಗಳು ಆರೋಪಿಯ ಮನೆಯಿಂದ 3 ಮೊಬೈಲ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ಮನೆಯಲ್ಲಿ ಆರೋಪಿ ನಿರ್ಮಿಸಿದ್ದ ಗ್ರಂಥಾಲಯದಿಂದ ಕೆಲವು ದಾಖಲೆಗಳನ್ನು ವಶಕ್ಕೆ ಪಡೆಯಲಾಗಿದೆ. ಅಲ್ಲದೇ ಆತನ ರೂಮ್‌ನ್ನು ಅಧಿಕಾರಿಗಳು ಸೀಲ್ ಮಾಡಿದ್ದಾರೆ.

## ದೇಶದ ಮೊದಲ ಕಡುಬಡತನ ಮುಕ್ತ ರಾಜ್ಯ ಕೇರಳ: ಸಿಎಂ ಪಿಣರಾಯಿ ಘೋಷಣೆ

**ತಿರುವನಂತಪುರಂ:** ಕಡುಬಡತನವನ್ನು ನಿರ್ಮೂಲನೆ ಮಾಡಿದ್ದೇವೆ ಎಂಬ ಕೇರಳ ಸರ್ಕಾರದ ಘೋಷಣೆ ನಕಲಿ ಎಂದು ಟೀಕಿಸಿದ, ಕಾಂಗ್ರೆಸ್ ನೇತೃತ್ವದ ಯುಡಿಎಫ್ ವಿರೋಧ ಪಕ್ಷ ಶನಿವಾರ ಕೇರಳ ವಿಧಾನಸಭೆಯ ವಿಶೇಷ ಅಧಿವೇಶನವನ್ನು ಬಹಿಷ್ಕರಿಸಿದೆ.

ವಿಶೇಷ ವಿಧಾನಸಭೆ ಅಧಿವೇಶನ ಪ್ರಾರಂಭವಾಗುತ್ತಿದ್ದಂತೆ, ವಿರೋಧ ಪಕ್ಷದ ನಾಯಕ ವಿ ಡಿ ಸತೀಶನ್, ನಿಯಮ 300 ರ ಅಡಿಯಲ್ಲಿ ಮುಖ್ಯಮಂತ್ರಿಯವರ ಹೇಳಿಕೆ ಶುದ್ಧ ಸುಳ್ಳು ಮತ್ತು ಸದನದ ನಿಯಮಗಳ ತಿರಸ್ಕಾರ ಎಂದರು. ಆದ್ದರಿಂದ, ನಾವು ಅದರಲ್ಲಿ ಸೇರಲು ಸಾಧ್ಯವಿಲ್ಲ ಮತ್ತು ಅಧಿವೇಶನವನ್ನು ಸಂಪೂರ್ಣವಾಗಿ ಬಹಿಷ್ಕರಿಸುತ್ತಿದ್ದೇವೆ ಎಂದು ಸತೀಶನ್ ಹೇಳಿದರು. ನಂತರ ಯುಡಿಎಫ್ ಸದಸ್ಯರು, ಬಡತನ ಮುಕ್ತ ಹೇಳಿಕೆ ಮೋಸ ಮತ್ತು ನಾಚಿಕೆಗೇಡಿನ ಸಂಗತಿ ಎಂದು ಕೂಗುತ್ತಾ ಸದನದಿಂದ ಹೊರನಡೆದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ನಾವು ಕಾರ್ಯಗತಗೊಳಿಸಬಹುದಾದದ್ದನ್ನು ಮಾತ್ರ ಹೇಳುತ್ತೇವೆ ಮತ್ತು ನಾವು ಹೇಳಿದ್ದನ್ನು ಕಾರ್ಯಗತಗೊಳಿಸಿದ್ದೇವೆ. ಇದು ವಿರೋಧ ಪಕ್ಷದ ನಾಯಕನಿಗೆ ನಮ್ಮ ಉತ್ತರ ಎಂದರು.

ಕೇರಳ ಪಿರವಿ, ರಾಜ್ಯ ರಚನೆಯ ದಿನವನ್ನು ಗುರುತಿಸಲು ಕರೆಯಲಾದ ವಿಶೇಷ ಅಧಿವೇಶನದಲ್ಲಿ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರು ಕಡುಬಡತನ ಮುಕ್ತ ರಾಜ್ಯ ಕೇರಳ ಎಂದು ಘೋಷಣೆ ಮಾಡಿದರು. ಕೇರಳವು ಈ ಮೈಲಿಗಲ್ಲು ಸಾಧಿಸಿದ ದೇಶದ ಮೊದಲ ರಾಜ್ಯವಾಗಿದೆ ಎಂದು ಹೇಳಿದರು. ತೀವ್ರ ಬಡತನವನ್ನು ನಿರ್ಮೂಲನೆ ಮಾಡಲು ಮತ್ತು ಜಾಗತಿಕ ಸಾಮಾಜಿಕ ಭೂದೃಶ್ಯದಲ್ಲಿ ತನ್ನ ಛಾಪು ಮೂಡಿಸಲು ರಾಜ್ಯವು 1,000 ಕೋಟಿ ರೂ.ಗಳಿಗೂ ಹೆಚ್ಚು ಖರ್ಚು ಮಾಡಿದೆ ಎಂದು ಪಿಣರಾಯಿ ಹೇಳಿದರು.

## ಕಾಶ್ಮೀರ ಭಾರತದ ಅವಿಭಾಜ್ಯ ಅಂಗ: ಪುನರುಚ್ಚಾರ

**ವಿಶ್ವಸಂಸ್ಥೆ:** ವಿಶ್ವಸಂಸ್ಥೆಯಲ್ಲಿ ಭಾರತ ಪಾಕಿಸ್ತಾನದ ದ್ವಂದ್ವ ನೀತಿ ಮತ್ತು ಬೂಟಾಟಿಕೆಯನ್ನು ಬಹಿರಂಗಪಡಿಸುತ್ತಾ, ಪಾಕಿಸ್ತಾನ ಆಕ್ರಮಿಸಿರುವ ಕಾಶ್ಮೀರ ಪ್ರದೇಶದಲ್ಲಿ ನಡೆಯುತ್ತಿರುವ ಗಂಭೀರ ಮಾನವ ಹಕ್ಕು ಉಲ್ಲಂಘನೆಗಳನ್ನು ತಕ್ಷಣ ನಿಲ್ಲಿಸಬೇಕು ಎಂದು ಕಟುವಾಗಿ ಆಗ್ರಹಿಸಿದೆ.

ವಿಶ್ವಸಂಸ್ಥೆಯಲ್ಲಿ ಮಾತನಾಡಿದ ಭಾರತದ ಯುಎನ್ ಮಿಷನ್‌ನ ಮೊದಲ ಕಾರ್ಯದರ್ಶಿ ಭವಿಕಾ ಮನಗಲಾನಂದನ್ ಇತ್ತೀಚಿನ ಕೆಲವು ವಾರಗಳಲ್ಲಿ ಪಾಕಿಸ್ತಾನಿ ಆಕ್ರಮಣಕಾರಿ ಪಡೆಗಳು ಮತ್ತು ಅವರ ಪ್ರತಿನಿಧಿಗಳು(ಪ್ರಾಕ್ಸಿ) ತಮ್ಮ ಮೂಲಭೂತ ಹಕ್ಕುಗಳು ಮತ್ತು ಸ್ವಾತಂತ್ರ್ಯಕ್ಕಾಗಿ ಹೋರಾಡುತ್ತಿರುವ ನಿರಪರಾಧ ನಾಗರಿಕರನ್ನು ಹತ್ಯೆ ಮಾಡಿದ್ದಾರೆ ಹೇಳಿದ್ದಾರೆ.

ಅದೇ ವೇಳೆ ಪಾಕಿಸ್ತಾನವು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಪ್ರದೇಶಗಳಲ್ಲಿ ನಡೆಯುತ್ತಿರುವ ಗಂಭೀರ ಮತ್ತು ನಡೆಯುತ್ತಿರುವ ಮಾನವ ಹಕ್ಕುಗಳ ಉಲ್ಲಂಘನೆಯನ್ನು ನಿಲ್ಲಿಸುವಂತೆ ಪಾಕಿಸ್ತಾನವನ್ನು ಒತ್ತಾಯಿಸಿದ್ದಾರೆ. ಇನ್ನು ಪಾಕಿಸ್ತಾನದ ಮಿಲಿಟರಿ ಆಕ್ರಮಣ, ದಬ್ಬಾಳಿಕೆ, ಕ್ರೂರತೆ ಮತ್ತು ಸಂಪನ್ಮೂಲಗಳ ಅಕ್ರಮ ಶೋಷಣೆಯ ವಿರುದ್ಧ ಅಲ್ಲಿನ ಜನರು ದಂಗೆ ಎದ್ದಿದ್ದಾರೆ ಎಂದು ತಿಳಿಸಿದ್ದಾರೆ.




- **ಯುಎನ್ ನಲ್ಲಿ ಪಾಕಿಸ್ತಾನದ ದ್ವಂದ್ವ ನೀತಿಯನ್ನು ಖಂಡಿಸಿದ ಭಾರತದ ಮೊದಲ ಕಾರ್ಯದರ್ಶಿ ಭವಿಕಾ ಮನಗಲಾನಂದನ್**
- **ಪಾಕಿಸ್ತನದ ದಾಳಿಗೆ ಅಮಾಯಕ ಜನರ ಪ್ರಾಣ ಬಲಿಯಾಗುತ್ತಿದ್ದಾರೆ ಎಂದು ಖಂಡನೆ**
- **ಜಮ್ಮು, ಕಾಶ್ಮೀರ ಹಾಗೂ ಲಡಾಖ್ ಭಾರತದ ಅವಿಭಾಜ್ಯ ಅಂಗ ಎಂದು ಪುನರುಚ್ಚರಿಸಿದ ಭಾರತ**

**ಪಾಕಿಸ್ತಾನ ಸುಳ್ಳು ಹೇಳಿದ ಮಾತ್ರಕ್ಕೆ ಸತ್ಯವಾಗುವುದಿಲ್ಲ ಎಂದು ಖಂಡನೆ:** ಪಾಕಿಸ್ತಾನದ ರಾಜತಾಂತ್ರಿಕರು ಯಾವ ವಿಷಯದ ಚರ್ಚೆಯಾದರೂ ಯುಎನ್ ವೇದಿಕೆಯಲ್ಲಿ ಭಾರತ ವಿರುದ್ಧ ಅಸಂಬದ್ಧ ಆರೋಪಗಳನ್ನು ಮಾಡುತ್ತಿರುವುದನ್ನು ತೀವ್ರವಾಗಿ ಖಂಡಿಸಿದ ಅವರು ಪುನಃಪುನಃ ಹೇಳುವ ಸುಳ್ಳುಗಳು ಸತ್ಯವನ್ನು ಬದಲಾಯಿಸಲಾರವು. ಪಾಕಿಸ್ತಾನದ ಈ ದ್ವಂದ್ವ ನಾಟಕವು ಈ ಗೌರವಾನ್ವಿತ ವೇದಿಕೆಯ ಸಮಯಕ್ಕೇ ಅಹಿತಕರವಾಗಿದೆ ಎಂದು ಪಾಕಿಸ್ತಾನವನ್ನು ಖಂಡಿಸಿದ್ದಾರೆ.

ಜಮ್ಮು, ಕಾಶ್ಮೀರ ಮತ್ತು ಲಡಾಖ್ ಪ್ರದೇಶಗಳು ಭಾರತದ ಅವಿಭಾಜ್ಯ ಅಂಗಗಳು ಎಂದು ಪುನರುಚ್ಚರಿಸಿದ ಮಂಗಲಾನಂದನ್ ಜಮ್ಮು ಮತ್ತು ಕಾಶ್ಮೀರದಲ್ಲಿ ಚುನಾವಣೆಯ ಕುರಿತು ಮಾತನಾಡಿ ಪಾಕಿಸ್ತಾನವು ಯುಎನ್ ಭದ್ರತಾ ಮಂಡಳಿಯ 1948ರ ನಿರ್ಣಯ 47 ಅನ್ನು ತಪ್ಪಾಗಿ ವ್ಯಾಖ್ಯಾನಿಸುತ್ತಿದ್ದು, ಯುಎನ್ ನಿರ್ಣಯದಲ್ಲಿ ಕಾಶ್ಮೀರದ ವಿಚಾರದಲ್ಲಿ ಮತದಾನ ನಡೆಸುವ ಮುನ್ನ ಪಾಕಿಸ್ತಾನವು ತನ್ನ ಸೇನೆ ಮತ್ತು ನಾಗರಿಕರನ್ನು ಹಿಂಪಡೆಯಬೇಕು ಎಂದು ಸ್ಪಷ್ಟವಾಗಿ ಹೇಳಲಾಗಿತ್ತು. ಆದರೆ ಪಾಕಿಸ್ತಾನ ಇಂದಿಗೂ ಆಕ್ರಮಣವನ್ನು ಮುಂದುವರಿಸುತ್ತಿದೆ ಎಂದು ಹೇಳಿದ್ದಾರೆ.

## ನಮ್ಮ ಸರ್ಕಾರದ ಆಳ್ವಿಕೆಯಲ್ಲಿ ಅಭಿವೃದ್ಧಿಯ ವೇಗ ಬಹಳಷ್ಟು ಹೆಚ್ಚಾಗಿದೆ: ನಿತೀಶ್ ಕುಮಾರ್ ಸಂದೇಶ

**ಪಾಟ್ನಾ:** ನಮ್ಮ ಸರ್ಕಾರದ ಆಳ್ವಿಕೆಯಲ್ಲಿ ಅಭಿವೃದ್ಧಿಯ ವೇಗ ಬಹಳಷ್ಟು ಹೆಚ್ಚಾಗಿದೆ. ಎನ್‌ಡಿಎ ಮಾತ್ರ ರಾಜ್ಯವನ್ನು ಅಭಿವೃದ್ಧಿಪಡಿಸಬಹುದು. ಹೀಗಾಗಿ ಎನ್‌ಡಿಎಗೆ ಮತ ಚಲಾಯಿಸುವ ಮೂಲಕ ಮತ್ತೊಂದು ಅವಕಾಶ ನೀಡುವಂತೆ ಮುಖ್ಯಮಂತ್ರಿ ನಿತೀಶ್ ಕುಮಾರ್ ಜನರಿಗೆ ಮನವಿ ಮಾಡಿದ್ದಾರೆ. ಮೊದಲ ಹಂತದ ಮತದಾನಕ್ಕೆ ಕೆಲವೇ ದಿನಗಳು ಬಾಕಿ ಇರುವಾಗ ಸೋಶಿಯಲ್ ಮೀಡಿಯಾದಲ್ಲಿ ನಿತೀಶ್ ಕುಮಾರ್ ವಿಡಿಯೋ ಹಂಚಿಕೊಂಡಿದ್ದಾರೆ.

ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸುವಂತೆ ನಾನು ನಿಮ್ಮನ್ನು ವಿನಂತಿಸುತ್ತೇನೆ. ನಮಗೆ, ಎನ್‌ಡಿಎಗೆ, ಇನ್ನೊಂದು ಅವಕಾಶ ನೀಡಿ. ಇನ್ನಷ್ಟು ಹೆಚ್ಚಿನ ಕೆಲಸಗಳನ್ನು ಮಾಡುತ್ತೇವೆ ಮತ್ತು ಬಿಹಾರವನ್ನು ಉನ್ನತ ರಾಜ್ಯಗಳಲ್ಲಿ ಸೇರಿಸಲಾಗುವುದು ಎಂದು ಹೇಳಿದ್ದಾರೆ. 2005ರಲ್ಲಿ ತಾವು ಮುಖ್ಯಮಂತ್ರಿಯಾದಾಗ ಬಿಹಾರದ ಸ್ಥಿತಿ ತೀರಾ ಕಳಪೆಯಾಗಿತ್ತು. ಆ ಸಮಯದಲ್ಲಿ ಬಿಹಾರಿ ಎಂದು ಕರೆಯುವುದು 'ಅವಮಾನದ ವಿಷಯ'ವಾಗಿತ್ತು. ರಾಜ್ಯದ ಅಭಿವೃದ್ಧಿಗಾಗಿ ಸಂಪೂರ್ಣ ಪ್ರಾಮಾಣಿಕತೆ ಮತ್ತು ಕಠಿಣ ಪರಿಶ್ರಮದಿಂದ ಹಗಲಿರುಳು ಶ್ರಮಿಸಿದ್ದೇನೆ ಎಂದರು.

ನಮ್ಮ ಸರ್ಕಾರ ಯುವಕರಿಗೆ ಶಿಕ್ಷಣ, ಆರೋಗ್ಯ, ರಕ್ಷಣೆ, ಮೂಲಸೌಕರ್ಯ ಮತ್ತು ಉದ್ಯೋಗಾವಕಾಶಗಳ ಕುರಿತು ಸಾಕಷ್ಟು ಕೆಲಸ ಮಾಡಿದೆ. ದಲಿತರು ಮತ್ತು ಹಿಂದುಳಿದ ವರ್ಗಗಳು ಸೇರಿದಂತೆ ಸಮಾಜದ ಪ್ರತಿಯೊಂದು ವರ್ಗಕ್ಕೂ ಕೆಲಸ ಮಾಡಿದ್ದೇನೆ. ಬಿಹಾರಿಯಾಗಿರುವುದು ಅವಮಾನದ ವಿಷಯವಲ್ಲ, ಆದರೆ ಗೌರವದ ವಿಷಯ ಎಂದು ನುಡಿದರು. ಹಿಂದಿನ ಸರ್ಕಾರ ಮಹಿಳೆಯರಿಗಾಗಿ ಯಾವುದೇ ಕೆಲಸ ಮಾಡಲಿಲ್ಲ. ನಾವು ಈಗ ಮಹಿಳೆಯರನ್ನು ಎಷ್ಟು ಬಲಿಷ್ಠರನ್ನಾಗಿ ಮಾಡಿದ್ದೇವೆ ಎಂದರೆ ಅವರು ಇನ್ನು ಮುಂದೆ ಯಾರನ್ನೂ ಅವಲಂಬಿಸಲ್ಲ ಮತ್ತು ಅವರ ಕುಟುಂಬಗಳು ಮತ್ತು ಮಕ್ಕಳಿಗಾಗಿ ಎಲ್ಲಾ ಕೆಲಸಗಳನ್ನು ಮಾಡಬಹುದು. ನಾವು ಮೊದಲಿನಿಂದಲೂ ಸಮಾಜದ ಎಲ್ಲಾ ವರ್ಗಗಳನ್ನು ಅಭಿವೃದ್ಧಿಪಡಿಸಿದ್ದೇವೆ ಎಂದು ತಿಳಿಸಿದರು.



## ಶ್ರೀ ವೆಂಕಟೇಶ್ವರ ಮೃಗಾಲಯದಲ್ಲಿ ಕಾಂಗರೂ ಸಾವು

**ತಿರುಪತಿ:** 2 ತಿಂಗಳ ಹಿಂದೆ ತಿರುಮಲ ತಿರುಪತಿಯಲ್ಲಿರುವ ಶ್ರೀ ವೆಂಕಟೇಶ್ವರ ಮೃಗಾಲಯಕ್ಕೆ ಆಗಮಿಸಿದ್ದ ಗಂಡು ಕೆಂಪು ಕುತ್ತಿಗೆಯ ವಾಲಬಿ (ಕಾಂಗರೂ) ಅನಾರೋಗ್ಯದಿಂದ ಸಾವನ್ನಪ್ಪಿದೆ ಎಂದು ಮೃಗಾಲಯದ ಅಧಿಕಾರಿಗಳು ತಿಳಿಸಿದ್ದಾರೆ.

ಅ. 30 ರ ತಡರಾತ್ರಿ ಮಾರ್ಸ್ಪಿಯಲ್ ಪ್ರಾಣಿಯು ಸಾವನ್ನಪ್ಪಿದೆ ಎಂದು ಮೃಗಾಲಯವು ಹೇಳಿಕೆಯಲ್ಲಿ ತಿಳಿಸಿದೆ. ಶ್ರೀ ವೆಂಕಟೇಶ್ವರ ಮೃಗಾಲಯ ಗಂಡು ಕೆಂಪು ಕುತ್ತಿಗೆಯ ವಾಲಬಿಯ ಮರಣವನ್ನು ಘೋಷಿಸಲು ತೀವ್ರ ವಿಷಾದವಿದೆ ಎಂದು ಹೇಳಿಕೆಯಲ್ಲಿ ತಿಳಿಸಿದೆ.

ಅಸ್ವಸ್ಥಗೊಂಡಿದ್ದ ಕಾಂಗರೂವಿಗೆ ಮೃಗಾಲಯದ ಪಶುವೈದ್ಯಕೀಯ ತಂಡವು ತೀವ್ರ ನಿಗಾ ವಹಿಸಲು ಮತ್ತು ಸಕಾಲಿಕ ಔಷಧಿಗಳನ್ನು ಒದಗಿಸಲು ಪ್ರೇರೇಪಿಸಿತು. ನಿರಂತರ ಚಿಕಿತ್ಸೆ ಮತ್ತು ನಿಕಟ ಮೇಲ್ವಿಚಾರಣೆಯ ಹೊರತಾಗಿಯೂ, ರಾತ್ರಿಯಲ್ಲಿ ಅದರ ಸ್ಥಿತಿ ಹದಗೆಟ್ಟಿತು. ಕಾರ್ಡಿಯೋಪಲ್ಮನರಿ ಪುನರುಜ್ಜೀವನ ಸೇರಿದಂತೆ ತುರ್ತು ಕಾರ್ಯವಿಧಾನಗಳನ್ನು ಮಾಡಲಾಯಿತು ಆದರೆ ದುರದೃಷ್ಟವಶಾತ್ ಅವು ವಿಫಲವಾದವು ಎಂದು ಹೇಳಿಕೆ ತಿಳಿಸಿದೆ. ಶಿಷ್ಟಾಚಾರದ ಪ್ರಕಾರ,



ಮೃತದೇಹವನ್ನು ವಿವರವಾದ ಮರಣೋತ್ತರ ಪರೀಕ್ಷೆಗಾಗಿ ಶ್ರೀ ವೆಂಕಟೇಶ್ವರ ಪಶುವೈದ್ಯಕೀಯ ವಿಶ್ವವಿದ್ಯಾಲಯದ ರೋಗಶಾಸ್ತ್ರ ವಿಭಾಗಕ್ಕೆ ಕಳುಹಿಸಲಾಯಿತು, ಇದು ಟಾಕ್ಸೊಪ್ಲಾಸ್ಮಾಸಿಸ್ ಅನ್ನು ಸಾವಿಗೆ ಕಾರಣವೆಂದು ನಿರ್ಧರಿಸಿತು.

ಟೊಕ್ಸೊಪ್ಲಾಸ್ಮಾಸಿಸ್ ಎಂಬುದು ಪ್ರೊಟೊಜೋವನ್ ಟೊಕ್ಸೊಪ್ಲಾಸ್ಮಾ ಗೊಂಡಿಯಿಂದ ಉಂಟಾಗುವ ಸೋಂಕಾಗಿದ್ದು, ಇದು ಮಾನವರು, ಭೂಮಿ ಮತ್ತು ಸಮುದ್ರ, ಸಸ್ತನಿಗಳು ಮತ್ತು ಹಲವಾರು ಪಕ್ಷಿ ಪ್ರಭೇದಗಳ ಮೇಲೆ ಪರಿಣಾಮ ಬೀರುವ ಕಡ್ಡಾಯ ಅಂತರ್ಜೀವಕೋಶದ ಪರಾವಲಂಬಿಯಾಗಿದೆ. ನಂತರ ಶವವನ್ನು ವಿಶ್ವವಿದ್ಯಾಲಯದ ಮರಣೋತ್ತರ ಪರೀಕ್ಷೆ ಸಂಕೀರ್ಣದಲ್ಲಿ ಹೂಳಲಾಯಿತು.

## ಮುಂಬೈ ವಿಮಾನ ನಿಲ್ದಾಣದಲ್ಲಿ 47 ಕೋಟಿ ಮೌಲ್ಯದ ಕೊಕೇನ್ ವಶ

**ನವದೆಹಲಿ:** ಮುಂಬೈ ವಿಮಾನ ನಿಲ್ದಾಣದಲ್ಲಿ ಕೊಲಂಬೊದಿಂದ ಆಗಮಿಸಿದ ಮಹಿಳಾ ಪ್ರಯಾಣಿಕರೊಬ್ಬರಿಂದ ಸುಮಾರು 47 ಕೋಟಿ ರೂ. ಮೌಲ್ಯದ 4.7 ಕೆಜಿ ಕೊಕೇನ್ ಅನ್ನು ಡಿಆರ್‌ಐ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ ಮತ್ತು ಐದು ಜನರನ್ನು ಬಂಧಿಸಿದ್ದಾರೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ. ಡಿಆರ್‌ಐ ಅಧಿಕಾರಿಗಳು ಪ್ರಯಾಣಿಕಳ ಆಗಮನದ ಸ್ವಲ್ಪ ಸಮಯದ ನಂತರ ಅವರನ್ನು ತಡೆದು ಅವರ ಲಗೇಜ್‌ಗಳನ್ನು ವಿವರವಾದ ಪರೀಕ್ಷೆಗೆ ಒಳಪಡಿಸಿದರು ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಪರಿಶೀಲನೆಯಲ್ಲಿ ಕಾಫಿ ಪ್ಯಾಕೆಟ್‌ಗಳ ಒಳಗೆ ಮರೆಮಾಡಲಾಗಿರುವ ಬಿಳಿ ಪುಡಿಯ ವಸ್ತುವಿನ ಒಂಬತ್ತು ಚೀಲಗಳು ಪತ್ತೆಯಾಗಿವೆ. ಎನ್‌ಡಿಪಿಎಸ್ ಫೀಲ್ಡ್ ಕಿಟ್‌ನೊಂದಿಗೆ ಪ್ರಾಥಮಿಕ ಪರೀಕ್ಷೆಯಲ್ಲಿ ಆ ವಸ್ತುವು ಕೊಕೇನ್ ಎಂದು ದೃಢಪಟ್ಟಿದೆ.

ಅಂತರರಾಷ್ಟ್ರೀಯ ಮಾದಕವಸ್ತು ಕಳ್ಳಸಾಗಣೆ ಜಾಲಗಳಿಗೆ ದೊಡ್ಡ ಹೊಡೆತವಾಗಿ, ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ (ಸಿಎಸ್‌ಎಂಐಎ) ಕೊಲಂಬೊದಿಂದ ಆಗಮಿಸಿದ ಮಹಿಳಾ ಪ್ರಯಾಣಿಕರೊಬ್ಬರಿಂದ ಅಕ್ರಮ ಮಾರುಕಟ್ಟೆಯಲ್ಲಿ ಸುಮಾರು 47 ಕೋಟಿ ರೂ. ಮೌಲ್ಯದ 4.7 ಕೆಜಿ ಕೊಕೇನ್ ಅನ್ನು ವಶಪಡಿಸಿಕೊಂಡಿದೆ ಎಂದು ಹೇಳಿಕೆ ತಿಳಿಸಿದೆ.

ಡಿಆರ್‌ಐ ಸಿಂಡಿಕೇಟ್‌ನ ನಾಲ್ವರು ಹೆಚ್ಚುವರಿ ವ್ಯಕ್ತಿಗಳನ್ನು ಬಂಧಿಸಿದೆ ಒಬ್ಬರು ಸಾಗಣೆಯನ್ನು ಸ್ವೀಕರಿಸಲು ವಿಮಾನ ನಿಲ್ದಾಣಕ್ಕೆ ಬಂದಿದ್ದವರು ಮತ್ತು ಕಳ್ಳಸಾಗಣೆ ಮಾಡಿದ ಮಾದಕ ವಸ್ತುಗಳ ಹಣಕಾಸು, ಲಾಜಿಸ್ಟಿಕ್ಸ್ ಮತ್ತು ವಿತರಣಾ ಜಾಲಕ್ಕೆ ಸಂಬಂಧಿಸಿದ ಮೂವರು ಸೇರಿದಂತೆ ಐದು ಆರೋಪಿಗಳನ್ನು ಮಾದಕ ದ್ರವ್ಯಗಳು ಮತ್ತು ಮನೋವಿಶ್ಲೇಷಕ ವಸ್ತುಗಳ (ಎನ್‌ಡಿಪಿಎಸ್) ಕಾಯ್ದೆ, 1985 ರ ನಿಬಂಧನೆಗಳ ಅಡಿಯಲ್ಲಿ ಬಂಧಿಸಲಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.



**ಡಿಆರ್‌ಐ ಇತ್ತೀಚೆಗೆ ವಶಪಡಿಸಿಕೊಂಡ ಕೆಲವು ಪ್ರಕರಣಗಳು, ಅಂತರರಾಷ್ಟ್ರೀಯ ಮಾದಕ ದ್ರವ್ಯ ಸಿಂಡಿಕೇಟ್‌ಗಳು ಭಾರತೀಯ ಮಹಿಳೆಯರನ್ನು ಕೊರಿಯರ್‌ಗಳಾಗಿ ಹೆಚ್ಚಾಗಿ ಬಳಸಿಕೊಳ್ಳುತ್ತಿವೆ, ಆದರೆ ಆಹಾರ ಪದಾರ್ಥಗಳು ಮತ್ತು ದಿನನಿತ್ಯದ ಖಾದ್ಯಗಳಲ್ಲಿ ಮಾದಕ ದ್ರವ್ಯಗಳನ್ನು ಮರೆಮಾಚಲು ಮತ್ತು ಪತ್ತೆಹಚ್ಚುವಿಕೆಯಿಂದ ತಪ್ಪಿಸಿಕೊಳ್ಳಲು ಬಳಸುತ್ತಿವೆ ಎಂಬ ಕಳವಳಕಾರಿ ಪ್ರವೃತ್ತಿಯನ್ನು ಸೂಚಿಸುತ್ತವೆ ಎಂದು ಸಚಿವಾಲಯ ತಿಳಿಸಿದೆ.**

# ಉಷಾ ಅಪ್ಪಟ ಹಿಂದೂ, ಕ್ರಿಶ್ಚಿಯನ್ ಆಗುವುದಿಲ್ಲ

## ಹೇಳಿಕೆ ಬದಲಿಸುವಲ್ಲಿ ಜೆಡಿ ವ್ಯಾನ್ಸ್ ಹಿರಿಯಣ್ಣ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ನ ಪಡಿಯಚ್ಚು

**ವಾಷಿಂಗ್ಟನ್:** ಹಿರಿಯಕ್ಕನ ಚಾಳಿ ಮನೆ ಮಂದಿಗೆಲ್ಲಾ ಎಂಬಂತೆ, ಹೇಳಿಕೆಗಳನ್ನು ಬದಲಿಸುವಲ್ಲಿ ನಿಸ್ಸೀಮರಾಗಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ತಮ್ಮ ವಿಶಿಷ್ಟ ಈ ಗುಣವನ್ನು ತಮ್ಮವರಿಗೆಲ್ಲಾ ಚೆನ್ನಾಗಿ ಕಲಿಸಿದ್ದಾರೆ. ಅಮೆರಿಕ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಕೂಡ ತಾವೇ ನೀಡಿದ ಹೇಳಿಕೆಯನ್ನು ಕ್ಷಣಮಾತ್ರದಲ್ಲಿ ಬದಲಿಸುವ ಕಲೆಯನ್ನು ಕರಗತ ಮಾಡಿಕೊಂಡಿದ್ದಾರೆ. ನಿನ್ನೆ ಮಿಸ್ಸಿಸ್ಸಿಪ್ಪಿಯಲ್ಲಿ ನಡೆದಿದ್ದ ಟರ್ನಿಂಗ್ ಪಾಯಿಂಟ್ ಯುಎಸ್‌ಎ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಜೆಡಿ ವ್ಯಾನ್ಸ್, ಪತ್ನಿ ಉಷಾ ವ್ಯಾನ್ಸ್ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರವಾಗಬೇಕು ಎಂಬುದು ನನ್ನ ಬಯಕೆ ಎಂದು ಹೇಳಿದ್ದರು. ಆದರೆ ಈ ಹೇಳಿಕೆ ನೀಡಿ 24 ಗಂಟೆಗಳಲ್ಲಿ ಉಲ್ಟಾ ಹೊಡೆದಿರುವ ಜೆಡಿ ವ್ಯಾನ್ಸ್, ಅಪ್ಪಟ ಹಿಂದೂವಾಗಿರುವ ಉಷಾ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರ ಹೊಂದುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿರುವ ಜೆಡಿ ವ್ಯಾನ್ಸ್, ಪತ್ನಿ ಉಷಾ ಹಿದೂವಾಗಿದ್ದು, ತಮ್ಮ ಧಾರ್ಮಿಕ ನಂಬಿಕೆಗಳಿಗೆ ಅನುಗುಣವಾಗಿಯೇ ಬದುಕಲಿದ್ದಾರೆ. ಅವರನ್ನು ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಳಿಸಬೇಕು ಎಂಬ ಯಾವುದೇ ಉದ್ದೇಶ ನನಗಿಲ್ಲ. ಈ ವಿಚಾರವಾಗಿ ನನ್ನ ವಿರುದ್ಧ ಮಾಡುತ್ತಿರುವ ಟೀಕೆಗಳು ನಿಜಕ್ಕೂ ಅಸಹ್ಯಕರವಾಗಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನನ್ನ ಅಂತರ್ಧರ್ಮೀಯ ವಿವಾಹ ವೈಯಕ್ತಿಕ ವಿಷಯವಾದರೂ, ನಾನು ಸಾರ್ವಜನಿಕ ವ್ಯಕ್ತಿ (ಅಮೆರಿಕದ ಉಪಾಧ್ಯಕ್ಷ)ಯಾಗಿರುವುದರಿಂದ ಈ ಕುರಿತಾದ ಪ್ರಶ್ನೆಗಳಿಂದ ವಿಮುಖವಾಗಲು ಸಾಧ್ಯವಿಲ್ಲ. ಆದರೆ ಭಾರತೀಯ ಮೂಲದ ಹಿಂದೂ ಪತ್ನಿ ಉಷಾ ಕೊನೆಯವರೆಗೂ ಹಿಂದೂವಾಗಿಯೇ ಉಳಿಯಲಿದ್ದಾರೆ.

ಅವರ ಹಿಂದೂ ನಂಬಿಕೆಗಳು ನಮ್ಮಲ್ಲಿ ಕೌಟುಂಬಿಕ ಸಮಸ್ಯೆಗಳನ್ನು ಎಂದಿಗೂ ಸೃಷ್ಟಿಸಿಲ್ಲ ಎಂದು ಜೆಡಿ ವ್ಯಾನ್ಸ್ ಸ್ಪಷ್ಟಪಡಿಸಿದ್ದಾರೆ. ಉಷಾ ವ್ಯಾನ್ಸ್ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಳ್ಳಬೇಕು ಎಂಬ ತಮ್ಮ ಹೇಳಿಕೆಗೆ ಸ್ಪಷ್ಟನೆ ನೀಡಿರುವ ಜೆಡಿ ವ್ಯಾನ್ಸ್, ಅಮೆರಿಕದಲ್ಲಿ ಕ್ರಿಶ್ಚಿಯನ್ ಧರ್ಮದ ಪ್ರಭಾವದ ಮಹತ್ವದ ಬಗ್ಗೆ ಮಾತನಾಡುತ್ತಾ ಆ ರೀತಿ ಹೇಳಿದ್ದೆ. ನನ್ನ ಮಾತುಗಳ ಅರ್ಥ ಉಷಾ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಳ್ಳಬೇಕು ಎಂದು ಖಂಡಿತ ಆಗಿರಲಿಲ್ಲ. ಆಕೆ ಹಿಂದೂವಾಗಿಯೇ ಉಳಿಯುವುದರಿಂದ ನನಗೆ ಯಾವ ಅಭ್ಯಂತರವೂ ಇಲ್ಲ ಎಂದು ಹೇಳಿದ್ದಾರೆ. ನನ್ನ ಮೂವರೂ ಮಕ್ಕಳು ಕ್ರಿಶ್ಚಿಯನ್ ಧರ್ಮದ ಸಂಪ್ರದಾಯದಂತೆ ಬೆಳೆಯುತ್ತಿದ್ದಾರೆ. ಉಷಾ ಕೂಡ ನನ್ನೊಂದಿಗೆ ಭಾನುವಾರದ ಪ್ರಾರ್ಥನೆಗೆ ಚರ್ಚ್‌ಗೆ ಬರುತ್ತಾರೆ. ಹೀಗಾಗಿ ಮುಂದೊಂದು ದಿನ ಅವರು ಕ್ರಿಶ್ಚಿಯನ್ ಧರ್ಮ ಸ್ವೀಕರಿಸಿದರೆ ನನಗೆ ಸಂತೋಷವಾಗುತ್ತದೆ ಎಂದಷ್ಟೇ ನಾನು ಹೇಳಿದ್ದೆ. ಆದರೆ ವಿರೋಧಿಗಳು ನನ್ನನ್ನು ಮತಾಂತರಿ, ಕಟ್ಟರ್‌ವಾದಿ ಎಂದೆಲ್ಲಾ ಟೀಕಿಸುತ್ತಿದ್ದಾರೆ ಎಂದು ಯುಎಸ್ ಉಪಾಧ್ಯಕ್ಷರು ಆಕ್ರೋಶ ಹೊರಹಾಕಿದ್ದಾರೆ.

ಟರ್ನಿಂಗ್ ಪಾಯಿಂಟ್ ಯುಎಸ್‌ಎ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ್ದ ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್, ಕ್ರಿಶ್ಚಿಯನ್ ಮೌಲ್ಯಗಳು ಅಮೆರಿಕದ ರಾಜ್ಯಾಡಳಿತದ ಪ್ರಮುಖ ಅಡಿಪಾಯ ಎಂದು ಹೇಳಿದ್ದರು. ಅಲ್ಲದೇ ಹಿಂದೂವಾಗಿರುವ ತಮ್ಮ ಪತ್ನಿ ಉಷಾ ವ್ಯಾನ್ಸ್ ಕ್ರಿಶ್ಚಿಯನ್ ಧರ್ಮ ಸ್ವೀಕರಿಸಿದರೆ ಸ್ವಾಗತಿಸುವುದಾಗಿ ಹೇಳಿ ಅಚ್ಚರಿ ಮೂಡಿಸಿದ್ದರು.

- **24 ಗಂಟೆಯಲ್ಲಿ ವರಸೆ ಬದಲಿಸಿದ ಅಮೆರಿಕ ಉಪಾಧ್ಯಕ್ಷ ಜೆಡಿ ವ್ಯಾನ್ಸ್.**
- **ಹಿಂದೂವಾಗಿರುವ ಪತ್ನಿ ಉಷಾ ಕ್ರಿಶ್ಚಿಯನ್ ಆಗುವುದಿಲ್ಲ ಎಂದ ಜೆಡಿ ವ್ಯಾನ್ಸ್.**
- **ಉಷಾ ವ್ಯಾನ್ಸ್ ಮತಾಂತರದ ಬಗ್ಗೆ ಮಾತನಾಡಿ ಹಲವರ ಕೋಪಕ್ಕೆ ಗುರಿಯಾದ ಜೆಡಿ ವ್ಯಾನ್ಸ್.**




## ದಾಖಲೆ ವೇಗದಲ್ಲಿ ಬಾಹ್ಯಾಕಾಶ ನಿಲ್ದಾಣ ತಲುಪಿದ ಚೀನಾ

**ಜಿಯುಕ್ವಾನ್:** ಚೀನಾ ತನ್ನ ಶೆನ್‌ಝೌ 21 ಬಾಹ್ಯಾಕಾಶ ನೌಕೆಯನ್ನು ತನ್ನ ಯಶಸ್ವಿ ಉಡಾವಣೆಯ ನಂತರ ದಾಖಲೆಯ ವೇಗದಲ್ಲಿ ಚೀನಾದ ಬಾಹ್ಯಾಕಾಶ ನಿಲ್ದಾಣದೊಂದಿಗೆ ಡಾಕ್ ಮಾಡಿದೆ ಎಂದು ಘೋಷಿಸಿದೆ. ಇಡೀ ಡಾಕಿಂಗ್ ಪ್ರಕ್ರಿಯೆಯು ಸುಮಾರು 3.5 ಗಂಟೆಗಳ ಕಾಲ ನಡೆಯಿತು ಇದು ಹಿಂದಿನ ಕಾರ್ಯಾಚರಣೆಗಳಿಗಿಂತ ಮೂರು ಗಂಟೆಗಳು ಕಡಿಮೆ ಎಂದು ಚೀನಾ ಮ್ಯಾನ್ಡ್ ಸ್ಪೇಸ್ ಏಜೆನ್ಸಿ ತಿಳಿಸಿದೆ.

ಶೆನ್‌ಝೌ 21 ಬಾಹ್ಯಾಕಾಶ ನೌಕೆಯು ತಡರಾತ್ರಿ 11:44 ಕ್ಕೆ ವಾಯುವ್ಯ ಚೀನಾದ ಜಿಯುಕ್ವಾನ್ ಉಡಾವಣಾ ಕೇಂದ್ರದಿಂದ ಯೋಜಿಸಿದಂತೆ ಹಾರಿತು. ಶೆನ್‌ಝೌ 21 ರಲ್ಲಿರುವ 3 ಗಗನಯಾತ್ರಿಗಳು ಬಾಹ್ಯಾಕಾಶ ನಿಲ್ದಾಣದ ಟಿಯಾನ್ಹೆ ಕೋರ್ ಮಾಡ್ಯೂಲ್ ಅನ್ನು ಪ್ರವೇಶಿಸುತ್ತಾರೆ. ಸಿಬ್ಬಂದಿಯಲ್ಲಿ ಪೈಲಟ್ ಮತ್ತು ಮಿಷನ್ ಕಮಾಂಡರ್ ಜಾಂಗ್‌ಲು ಸೇರಿದ್ದಾರೆ, ಅವರು ಎರಡು ವರ್ಷಗಳ ಹಿಂದೆ ಬಾಹ್ಯಾಕಾಶ ನಿಲ್ದಾಣಕ್ಕೆ ಶೆನ್‌ಝೌ 15 ಮಿಷನ್‌ನಲ್ಲಿದ್ದರು.

ಇತರ ಇಬ್ಬರು ಮೊದಲ ಬಾರಿಗೆ ಹಾರುತ್ತಿದ್ದಾರೆ. ಎಂಜಿನಿಯರ್ ಆಗಿರುವ 32 ವರ್ಷದ ವೂ ಫೀ ಬಾಹ್ಯಾಕಾಶ ಹಾರಾಟಕ್ಕೆ ಸೇರಿದ ದೇಶದ ಅತ್ಯಂತ ಕಿರಿಯ ಗಗನಯಾತ್ರಿ. ಜಾಂಗ್ ಹಾಂಗ್‌ಜಾಂಗ್ ಒಬ್ಬ ಪೇಲೋಡ್ ತಜ್ಞರಾಗಿದ್ದು, ಅವರು ಗಗನಯಾತ್ರಿಯಾಗುವ ಮೊದಲು ಹೊಸ ಶಕ್ತಿ ಮತ್ತು ಹೊಸ ವಸ್ತುಗಳ ಮೇಲೆ ಕೇಂದ್ರೀಕರಿಸುವ ಸಂಶೋಧಕರಾಗಿದ್ದರು.

ಟಿಯಾಂಗಾಂಗ್ ಬಾಹ್ಯಾಕಾಶ ನಿಲ್ದಾಣದ ಕುರಿತು ಟೈ-ಚಿ, ತೋಟಗಾರಿಕೆ ಮತ್ತು ಕಾವ್ಯವನ್ನು ಮೆಚ್ಚುವ ಮೂಲಕ ತಂಡವು ಬಾಹ್ಯಾಕಾಶ ನಿಲ್ದಾಣವನ್ನು ರಾಮರಾಜ್ಯವನ್ನಾಗಿ ಪರಿವರ್ತಿಸುತ್ತದೆ ಎಂದು ಜಾಂಗ್ ಹೇಳಿದರು. ಅವರ ಹಿಂದಿನವರಂತೆ, ಅವರು ಸುಮಾರು ಆರು ತಿಂಗಳ ಕಾಲ ನಿಲ್ದಾಣದಲ್ಲಿಯೇ ಇರುತ್ತಾರೆ. ಬಾಹ್ಯಾಕಾಶದಲ್ಲಿದ್ದಾಗ, ಗಗನಯಾತ್ರಿಗಳು ಜೈವಿಕ ತಂತ್ರಜ್ಞಾನ, ಏರೋಸ್ಪೇಸ್ ಮೆಡಿಸಿನ್, ಮೆಟೀರಿಯಲ್ ಸೈನ್ಸ್ ಮತ್ತು ಇತರ ಕ್ಷೇತ್ರಗಳಲ್ಲಿ 27 ವೈಜ್ಞಾನಿಕ ಮತ್ತು ಅನ್ವಯಿಕ ಯೋಜನೆಗಳನ್ನು ನಡೆಸಲು ಯೋಜಿಸಿದ್ದಾರೆ. ಇದು ಬಾಹ್ಯಾಕಾಶದಲ್ಲಿ ಸಣ್ಣ ಸಸ್ತನಿಗಳ ಸಂತಾನೋತ್ಪತ್ತಿ ಮತ್ತು ಮೇಲ್ವಿಚಾರಣೆಗೆ ಪ್ರಮುಖ ತಂತ್ರಜ್ಞಾನಗಳನ್ನು ಕರಗತ ಮಾಡಿಕೊಳ್ಳಲು ಮತ್ತು ಬಾಹ್ಯಾಕಾಶ ಪರಿಸರದಲ್ಲಿ ಇಲಿಗಳ ತುರ್ತು ಪ್ರತಿಕ್ರಿಯೆಗಳು ಮತ್ತು ಹೊಂದಾಣಿಕೆಯ ಬದಲಾವಣೆಗಳ ಪ್ರಾಥಮಿಕ ಮೌಲ್ಯಮಾಪನವನ್ನು ಮಾಡಲು ನಮಗೆ ಸಹಾಯ ಮಾಡುತ್ತದೆ ಎಂದು ಹಾನ್ ಹೇಳಿದರು.




**ಮೊದಲ ಬಾರಿಗೆ, ಚೀನಾ ತನ್ನ ಬಾಹ್ಯಾಕಾಶ ನಿಲ್ದಾಣಕ್ಕೆ ಇಲಿಗಳನ್ನು ಕಳುಹಿಸುತ್ತಿದೆ. ತೂಕವಿಲ್ಲದಿರುವಿಕೆ ಮತ್ತು ಬಂಧನವು ಅವುಗಳ ನಡವಳಿಕೆಯ ಮಾದರಿಗಳ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂಬುದನ್ನು ಅಧ್ಯಯನ ಮಾಡಲು ಒಟ್ಟು ನಾಲ್ಕು, ಎರಡು ಗಂಡು ಮತ್ತು ಎರಡು ಹೆಣ್ಣು, ಮೇಲ್ವಿಚಾರಣೆ ಮಾಡಲಾಗುತ್ತದೆ.**

**-ಹಾನ್ ಪೀ ಚೀನೀ ಅಕಾಡೆಮಿ ಆಫ್ ಸೈನ್ಸಸ್‌ನ ಎಂಜಿನಿಯರ್**

# ಕನ್ನಡ ಭಾಷೆ ಹೃದಯದಲ್ಲಿರಲಿ

ಪ್ಯಾನ್ ಇಂಡಿಯಾ ಸ್ಟಾರ್ ಯಶ್ ತಮ್ಮ ಕನ್ನಡ ಪ್ರೀತಿ ಸ್ಪಷ್ಟಪಡಿಸಿದ್ದಾರೆ. ಕನ್ನಡ ರಾಜ್ಯೋತ್ಸವದಂದು 'ಸಾವಿರ ಭಾಷೆ ನಾಲಿಗೆಯಲ್ಲಿರಲಿ, ಕನ್ನಡ ಭಾಷೆ ಹೃದಯದಲ್ಲಿರಲಿ' ಎಂದು ಟ್ವೀಟ್ ಮಾಡುವ ಮೂಲಕ ಕನ್ನಡ ಪ್ರೀತಿ ತೋರಿಸಿದ್ದಾರೆ. ಅಲ್ಲದೆ, ಅವರ ಬಹುನಿರೀಕ್ಷಿತ 'ಟಾಕ್ಸಿಕ್' ಸಿನಿಮಾ ಕುರಿತಾದ ಎಲ್ಲಾ ವದಂತಿಗಳನ್ನು ನಿರ್ಮಾಪಕರು ತಳ್ಳಿ ಹಾಕಿದ್ದು, ಸಿನಿಮಾ ಯುಗಾದಿಗೆ ತೆರೆಗೆ ಬರಲಿದೆ.



ರಾಕಿಂಗ್ ಸ್ಟಾರ್ ಯಶ್ ಅವರು ಈಗ ಪ್ಯಾನ್ ಇಂಡಿಯಾ ಸ್ಟಾರ್ ಆಗಿದ್ದಾರೆ. ಅವರಿಗೆ ಕನ್ನಡದ ಮೇಲೆ ಗೌರವ ಇನ್ನೂ ಹಾಗೆಯೇ ಉಳಿದುಕೊಂಡಿದೆ. ಆದರೆ, ಅವರು ಕರ್ನಾಟಕದಲ್ಲಿ ನಡೆಯೋ ಎಲ್ಲಾ ಬೆಳವಣಿಗೆ ಬಗ್ಗೆಯೂ ಪ್ರತಿಕ್ರಿಯೆ ನೀಡೋದಿಲ್ಲ. ಈ ಬಗ್ಗೆ ಅನೇಕರಿಗೆ ಬೇಸರ ಇದೆ. ಯಶ್ ಕನ್ನಡ ಮರೆತಿದ್ದಾರೆ ಎಂಬ ಆರೋಪ ಮರೆತಿದ್ದಾರೆ ಎಂದು ಹೇಳಲಾಗಿತ್ತು. ಆದರೆ, ಒಂದೇ ಟ್ವೀಟ್ ಮೂಲಕ ಅವರು ಅದನ್ನು ಸುಳ್ಳು ಮಾಡಿದ್ದಾರೆ. ನವೆಂಬರ್ 1 ಕನ್ನಡ ರಾಜ್ಯೋತ್ಸವ. ಈ ಸಮಯದಲ್ಲಿ ಅನೇಕರು ಶುಭಾಶಯ ಕೋರುತ್ತಿದ್ದಾರೆ.

ಯಶ್ ಕೂಡ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಟ್ವೀಟ್ ಮಾಡಿದ್ದಾರೆ. 'ಎದೆ ತಟ್ಟಿ ಹೇಳು ನಾ ಭಾರತೀಯನೆಂದು. ಗರ್ವದಿಂದ ಬಾಳು ನಾ ಕನ್ನಡಿಗನೆಂದು. ಸಾವಿರ ಭಾಷೆ ನಾಲಿಗೆಯಲ್ಲಿರಲಿ. ಕನ್ನಡ ಭಾಷೆ ಹೃದಯದಲ್ಲಿರಲಿ. ಸಿರಿಗನ್ನಡಂ ಗೆಲ್ಗೆ ಸಿರಿಗನ್ನಡಂ ಬಾಳ್ಗೆ' ಎಂದು ಯಶ್ ಕನ್ನಡದಲ್ಲೇ ಟ್ವೀಟ್ ಮಾಡಿದ್ದಾರೆ.

**ಸಾವಿರ ಭಾಷೆ ನಾಲಿಗೆಯಲ್ಲಿ ಇರಲಿ**



# ಮಾರಿಗಲ್ಲು ವೆಬ್ ಸರಣಿ



'ಮಾರಿಗಲ್ಲು' ಏಳು ಎಪಿಸೋಡ್‌ಗಳನ್ನು ಹೊಂದಿದೆ. ಇದರಲ್ಲಿ ಕೆಲವು 30 ನಿಮಿಷಗಳ ಎಪಿಸೋಡ್ ಇದ್ದರೆ ಇನ್ನೂ ಕೆಲವು 15 ನಿಮಿಷದ ಎಪಿಸೋಡ್ ಇದೆ. ಉತ್ತರ ಕನ್ನಡ ಜಿಲ್ಲೆಯ ಶಿರಸಿ ಸುತ್ತಮುತ್ತ ವೆಬ್ ಸರಣಿಯ ಕಥೆ ಸಾಗುತ್ತದೆ. ಎರಡು ಎಪಿಸೋಡ್ ಬಳಿಕ ಸರಣಿ ಮತ್ತಷ್ಟು ರೋಚಕ ಎನಿಸುತ್ತದೆ. ಶಿರಸಿಯಿಂದ 20 ಕಿಮೀ ದೂರದಲ್ಲಿರುವ ಬನವಾಸಿಯಲ್ಲಿ ಕದಂಬರು ಆಳಿ ಹೋಗಿದ್ದಾರೆ. ಇದರ ಒಂದೆಳೆಯನ್ನು ಇಟ್ಟುಕೊಂಡು ಕಾಲ್ಪನಿಕ ಕಥೆ ಹೆಣೆದು ಮಾಡಲಾದ ಕಥೆಯೇ 'ಮಾರಿಗಲ್ಲು' ವೆಬ್ ಸರಣಿ. ಈ ಸರಣಿ ಜೀ5ನಲ್ಲಿ ಪ್ರಸಾರ ಆರಂಭಿಸಿದೆ. 'ಅಯ್ಯನ ಮನೆ', 'ಶೋಧ' ಬಳಿಕ ಪ್ರಸಾರ ಕಂಡ ಸರಣಿ ಇದಾಗಿದೆ. ಪಿಆರ್‌ಕೆ ಪ್ರೊಡಕ್ಷನ್ಸ್ ಇದನ್ನು ನಿರ್ಮಾಣ ಮಾಡಿದೆ ಎಂಬುದು ವಿಶೇಷ.

ಮಾರಿಗಲ್ಲು ಎಂಬ ಕಾಲ್ಪನಿಕ ಊರಲ್ಲಿ ಸಾಗೋ ಕಥೆಯೇ 'ಮಾರಿಗಲ್ಲು' ವೆಬ್ ಸರಣಿ. ಆ ಊರಿನ ಕಾಡಲ್ಲಿ ಕದಂಬರು ನಿಧಿ ಹುಗಿದಿಟ್ಟಿದ್ದಾರೆ ಎಂಬ ಪ್ರತೀತಿ ಇರುತ್ತದೆ. ಆದರೆ, ಇದನ್ನು ಕದಿಯಲು ಹೋದರೆ ಅದನ್ನು ಕಾಯುತ್ತಿರುವ ಮಾರಿ ಕಾಲಿಗೆ ಗೆಜ್ಜೆ ಕಟ್ಟಿಕೊಂಡು ಬರುತ್ತಾಳೆ ಎಂಬುದು ಆ ಊರಿನವರ ನಂಬಿಕೆ. ಆ ಊರಿಗೆ ಪುರಾತತ್ವ ಇಲಾಖೆಯ ಸಿಬ್ಬಂದಿ (ರಂಗಾಯಣ ರಘು) ಬರುತ್ತಾನೆ. ಇದೇ ಸಮಯಕ್ಕೆ ವರದನಿಗೆ (ಪ್ರವೀಣ್ ತೇಜ್) ಹಣದ ಅವಶ್ಯಕತೆ ಬರುತ್ತದೆ. ಇಬ್ಬರೂ ಸೇರಿ ಕಾಡಿನಲ್ಲಿ ನಿಧಿ ಹುಡುಕಿ ಹೋಗುತ್ತಾರೆ. ಮುಂದೇನಾಗುತ್ತದೆ ಎಂಬುದೇ ವೆಬ್ ಸರಣಿಯ ಕಥೆ.

'ಮಾರಿಗಲ್ಲು' ಏಳು ಎಪಿಸೋಡ್‌ಗಳನ್ನು ಹೊಂದಿದೆ. ಇದರಲ್ಲಿ ಕೆಲವು 30 ನಿಮಿಷಗಳ ಎಪಿಸೋಡ್ ಇದ್ದರೆ ಇನ್ನೂ ಕೆಲವು 15 ನಿಮಿಷದ ಎಪಿಸೋಡ್ ಇದೆ.

ಉತ್ತರ ಕನ್ನಡ ಜಿಲ್ಲೆಯ ಶಿರಸಿ ಸುತ್ತಮುತ್ತ ವೆಬ್ ಸರಣಿಯ ಕಥೆ ಸಾಗುತ್ತದೆ. ಈ ಸರಣಿಯಲ್ಲಿ ಕಥೆ ತೆರೆದುಕೊಳ್ಳಲು ಮೊದಲ ಎರಡು ಎಪಿಸೋಡ್ ಬಳಿಕವೇ. ಆ ಬಳಿಕ ಸರಣಿ ಮತ್ತಷ್ಟು ರೋಚಕ ಎನಿಸುತ್ತದೆ. ಇಡೀ ಸರಣಿ ಸಾಗೋದು 90ರ ದಶಕದಲ್ಲಿ. ರಂಗಾಯಣ ರಘು, ಗೋಪಾಲ ಕೃಷ್ಣ ದೇಶಪಾಂಡೆ, ಪ್ರವೀಣ್ ತೇಜ್, ಸೂರಜ್ ಅವರ ನಟನೆ ಗಮನ ಸೆಳೆಯುವ ರೀತಿಯಲ್ಲಿ ಇದೆ. ದೈವ ಹಾಗೂ ನಿಧಿ ಎರಡು ವಿಚಾರಗಳ ಮಧ್ಯೆ ಕಥೆ ಸಾಗುತ್ತದೆ. ಪ್ರತಿ ಎಪಿಸೋಡ್ ಮುಗಿಯುತ್ತಿದ್ದಂತೆ ಕುತೂಹಲ ಮತ್ತಷ್ಟು ಹೆಚ್ಚುತ್ತದೆ. ಕ್ಲೈಮ್ಯಾಕ್ಸ್ ಅಲ್ಲಿ ಎಲ್ಲದಕ್ಕೂ ಉತ್ತರ ಸಿಗಲಿದೆ.

**ಕಾಲ್ಪನಿಕ ಊರಲ್ಲಿ ಸಾಗೋ ಕಥೆ**

# 50 ಕೆಜಿ ಚಿನ್ನ ಧರಿಸಿ ಬಂದ ನಟಿ



ಸೋನಾಕ್ಷಿ ಸಿನ್ಹಾ ಜಟಾಧರ ಚಿತ್ರದ ಮೂಲಕ ಪ್ರವೇಶಿಸುತ್ತಿದ್ದಾರೆ. ಈ ಪ್ಯಾನ್ ಇಂಡಿಯಾ ಥ್ರಿಲ್ಲರ್‌ನಲ್ಲಿ ಅವರು ವಿಲನ್ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಪಾತ್ರಕ್ಕಾಗಿ 50 ಕೆಜಿ ಚಿನ್ನಾಭರಣ ಧರಿಸಿದ್ದು, ಇದು ದೈಹಿಕವಾಗಿ ಸವಾಲಾಗಿತ್ತೆಂದು ಸೋನಾಕ್ಷಿ ಹೇಳಿದ್ದಾರೆ. ನವೆಂಬರ್ 7 ರಂದು ಬಿಡುಗಡೆಯಾಗಲಿರುವ ಈ ಚಿತ್ರದಲ್ಲಿ ಸುಧೀರ್ ಬಾಬು ಕೂಡ ಇದ್ದಾರೆ.

ಬಾಲಿವುಡ್ ನಟಿ ಸೋನಾಕ್ಷಿ ಸಿನ್ಹಾ ಅವರು ಮದುವೆ ಆದ ಬಳಿಕ ಚಿತ್ರರಂಗದಲ್ಲಿ ಹೆಚ್ಚು ಆಯಕ್ಟೀವ್ ಆಗಿಲ್ಲ. ಅವರು ಅಲ್ಲೊಂದು ಇಲ್ಲೊಂದು ಸಿನಿಮಾ ಮಾಡುತ್ತಿದ್ದಾರೆ. ಸಿನಿಮಾಗಳು ಯಶಸ್ಸು ಕಾಣದೆ ಇರುವ ಬಗ್ಗೆ ಅವರಿಗೆ ಬೇಸರ ಇದೆ. ಈಗ ಅವರು ಟಾಲಿವುಡ್‌ಗೆ ಎಂಟ್ರಿ ಪಡೆಯಲು ರೆಡಿ ಆಗಿದ್ದಾರೆ.


ಇದಕ್ಕಾಗಿ ಅವರು ಬರೋಬ್ಬರಿ 50 ಕೆಜಿ ಚಿನ್ನ ಧರಿಸಿದ್ದಾರೆ. ಸೋನಾಕ್ಷಿ ತೆಲುಗಿನಲ್ಲಿ ನಟಿಸುತ್ತಿರುವ ಸಿನಿಮಾದ ಹೆಸರು 'ಜಟಾಧರ' ಎಂದು. ಸುಧೀರ್ ಬಾಬು ಅವರು ಈ ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಈ ಸಿನಿಮಾ ನವೆಂಬರ್ 7ರಂದು ವಿಶ್ವಾದ್ಯಂತ ಬಿಡುಗಡೆ ಕಾಣುತ್ತಿದೆ. ಈ ಸಿನಿಮಾದಲ್ಲಿ ಸೋನಾಕ್ಷಿ ವಿಲನ್ ಪಾತ್ರ ಮಾಡುತ್ತಿದ್ದಾರೆ. ಅವರು ಸಿನಿಮಾ ಶೂಟಿಂಗ್ ಮಾಡುವಾಗ 50 ಕೆಜಿ ಚಿನ್ನ ಧರಿಸಿದ್ದಾಗಿ ಮಾಹಿತಿ ನೀಡಿದ್ದಾರೆ. ಸಂದರ್ಶನ ಒಂದರಲ್ಲಿ ಸೋನಾಕ್ಷಿ ಈ ಬಗ್ಗೆ ಮಾತನಾಡಿದ್ದಾರೆ. 'ನನ್ನ ವೃತ್ತಿ ಜೀವನದಲ್ಲಿ ದೈಹಿಕವಾಗಿ ಚಾಲೆಂಜಿಂಗ್ ಎನಿಸಿದ ಪಾತ್ರ. ಸೆಟ್‌ಗೆ ಬರೋದಕ್ಕೂ ಮೊದಲು ಮೂರು ಗಂಟೆ ತಯಾರಾಗೋಕೆ ಬೇಕಾಯ್ತು. ನಾನು 50 ಕೆಜಿ ಜ್ಯುವೆಲರಿ ಧರಿಸಬೇಕಿತ್ತು. ಇದರಿಂದ ಆಕ್ಷನ್ ದೃಶ್ಯಗಳನ್ನು ಮಾಡುವುದು ಕಷ್ಟವಾಗುತ್ತಿತ್ತು' ಎಂದಿದ್ದಾರೆ ಸೋನಾಕ್ಷಿ ಸಿನ್ಹಾ.

**ಚಾಲೆಂಜಿಂಗ್ ಎನಿಸಿದ ಪಾತ್ರ**

# ನಿರ್ಮಾಣ ಸಂಸ್ಥೆಗಳಿಗೆ ತಲೆನೋವಾದ ನಿರ್ದೇಶಕ

ಒಂದು ಸಿನಿಮಾ ಹಿಟ್ ಆದ ಕೂಡಲೇ ಯಶಸ್ಸಿನ ಅಮಲು ಏರಿಸಿಕೊಂಡವರು ವೃತ್ತಿಪರತೆ ಮರೆಯುತ್ತಾರೆ. ನಿರ್ದೇಶಕರು ವೃತ್ತಪರತೆ ಬಿಟ್ಟರೆ ನಿರ್ಮಾಪಕರುಗಳಿಗೆ ಸಮಸ್ಯೆ ಶುರುವಾಗುತ್ತದೆ. ತೆಲುಗು ಚಿತ್ರರಂಗದಲ್ಲಿ ಈಗ ಹೀಗೊಂದು ಪ್ರಕರಣ ನಡೆಯುತ್ತಿದೆ. ಹೊಂಬಾಳೆ ಸೇರಿದಂತೆ ಕೆಲವು ನಿರ್ಮಾಣ ಸಂಸ್ಥೆಗಳ ತಲೆನೋವಿಗೆ ಕಾರಣವಾಗಿದ್ದಾರೆ ಒಬ್ಬ ನಿರ್ದೇಶಕ. ಒಂದೇ ಒಂದು ಹಿಟ್ ಸಿನಿಮಾ ಸಾಕು ಸಾಮಾನ್ಯ ನಟ ಅಥವಾ ನಿರ್ದೇಶಕ ಸ್ಟಾರ್ ಆಗಿಬಿಡಲು. ಒಂದು ಸಿನಿಮಾ ಹಿಟ್ ಆದ ಕೂಡಲೇ ಅಂಥಹವರ ಹಿಂದೆ ನಿರ್ಮಾಪಕರುಗಳು ಸಾಲುಗಟ್ಟಿ ನಿಲ್ಲುತ್ತಾರೆ. ಆದರೆ ಸಿನಿಮಾದ ಯಶಸ್ಸಿನ ಅಮಲು ತಲೆಗೆ ಏರಿದವರು ಎಲ್ಲರಿಗಿಂತಲೂ ತಾವೇ ದೊಡ್ಡವರು ಎಂದು ಮೆರೆಯಲು ಆರಂಭಿಸಿ, ವೃತ್ತಿಪರತೆಯನ್ನು ಮರೆಯುತ್ತಾರೆ, ಆಗಲೇ ಶುರು ಆಗುವುದು ನಿರ್ಮಾಪಕರುಗಳಿಗೆ ಸಂಕಷ್ಟ. ಈಗ ತೆಲುಗಿನಲ್ಲಿ ಇದೇ ಆಗಿದೆ. ಹೊಂಬಾಳೆ ಸೇರಿದಂತೆ ಇನ್ನೂ ಕೆಲವು ನಿರ್ಮಾಣ ಸಂಸ್ಥೆಗಳು ನಿರ್ದೇಶಕನೊಬ್ಬನಿಂದ ಇಕ್ಕಟ್ಟಿಗೆ ಸಿಲುಕಿವೆ.

'ಹನು-ಮ್ಯಾನ್' ಸಿನಿಮಾ ನಿರ್ದೇಶನ ಮಾಡಿರುವ ಪ್ರಶಾಂತ್ ವರ್ಮಾ ಬಗ್ಗೆ ಈಗ ತೆಲುಗು ಚಿತ್ರರಂಗದ ಕೆಲ ದೊಡ್ಡ ನಿರ್ಮಾಪಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. 'ಹನುಮ್ಯಾನ್' ಸಿನಿಮಾ ಸೂಪರ್ ಹಿಟ್ ಆದ ಬೆನ್ನಲ್ಲೆ ಕೆಲವಾರು ನಿರ್ಮಾಪಕರು ಪ್ರಶಾಂತ್ ವರ್ಮಾಗೆ ಆತ ಕೇಳಿದಷ್ಟು ಮುಂಗಡ ಸಂಭಾವನೆ ಕೊಟ್ಟು ಸಿನಿಮಾ ನಿರ್ದೇಶಿಸಿಕೊಡುವಂತೆ ಕೇಳಿದರು. ಅದರಲ್ಲಿ ಹೊಂಬಾಳೆಯೂ ಒಂದು. ಆದರೆ ಈಗ ಪ್ರಶಾಂತ್ ವರ್ಮಾ ವೃತ್ತಿಪರತೆ ಮರೆತು ವರ್ತಿಸುತ್ತಿದ್ದಾನೆ ಎನ್ನಲಾಗುತ್ತಿದೆ.



# ಶಿಲ್ಪಾ ಶೆಟ್ಟಿ ತಾಯಿ ದಿಢೀರ್ ಆಸ್ಪತ್ರೆಗೆ

ಬಾಲಿವುಡ್ ನಟಿ ಶಿಲ್ಪಾ ಶೆಟ್ಟಿ ತಾಯಿ ಸುನಂದಾ ಶೆಟ್ಟಿ ದಿಢೀರ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಮುಂಬೈನ ಲೀಲಾವತಿ ಆಸ್ಪತ್ರೆಗೆ ತುರ್ತುನಿಗಾ ಘಟಕದಲ್ಲಿ ಚಿಕಿತ್ಸೆ ನಡೆಯುತ್ತಿದೆ. ಆರೋಗ್ಯದ ಸ್ಥಿತಿ ಕುರಿತು ಯಾವುದೇ ಮಾಹಿತಿ ಬಹಿರಂಗವಾಗಿಲ್ಲ. ತಾಯಿಯ ಆರೈಕೆಗಾಗಿ ಶಿಲ್ಪಾ ಶೆಟ್ಟಿ ಕೂಡ ಆಸ್ಪತ್ರೆಯಲ್ಲೇ ಇದ್ದಾರೆ.

ಮುಂಬೈನಲ್ಲಿ ಮಗಳು ಶಮಿತಾ ಶೆಟ್ಟಿ ಜೊತೆ ಸುನಂದಾ ಶೆಟ್ಟಿ ವಾಸವಿದ್ದರು. ಏಕಾಏಕಿ ಆರೋಗ್ಯದಲ್ಲಿ ಏರುಪೇರಾಗಿರೋದ್ರಿಂದ ಅವರನ್ನ ಆಸ್ಪತ್ರೆಗೆ ಸೇರಿಸಲಾಗಿದೆ. ಕಳೆದ ಕೆಲ ದಿನಗಳ ಹಿಂದಷ್ಟೇ ಮಗಳು ಶಿಲ್ಪಾ ಶೆಟ್ಟಿ ನಿವಾಸದಲ್ಲಿ ಸುನಂದಾ ಶೆಟ್ಟಿ ಅದ್ದೂರಿಯಾಗಿ ದೀಪಾವಳಿ ಆಚರಿಸಿದ್ದರು. ಅಂದಹಾಗೆ 9 ವರ್ಷಗಳ ಹಿಂದೆ ಶಿಲ್ಪಾ ತಂದೆಯನ್ನು ಕಳೆದುಕೊಂಡಿದ್ದರು. ತಾಯಿ ಹಾಗೂ ತಂಗಿ ಶಮಿತಾ ರಕ್ಷಣೆಯ ಜವಾಬ್ದಾರಿ ಹೊತ್ತಿದ್ದ ಶಿಲ್ಪಾ ಇದೀಗ ಕೋರ್ಟ್, ಕೇಸ್ ಎಂದು ಅಲೆಯುತ್ತಿದ್ದಾರೆ.

60 ಕೋಟಿ ವಂಚನೆ ಪ್ರಕರಣ ಶಿಲ್ಪಾ ಶೆಟ್ಟಿ ಪತಿ ರಾಜ್‌ಕುಂದ್ರಾ ಮೇಲಿದೆ. ಈ ಸಂಬಂಧ ಮುಂಬೈ ಪೊಲೀಸ್ ಆರ್ಥಿಕ ಅಪರಾಧಗಳ ವಿಭಾಗದಲ್ಲಿ ತನಿಖೆ ಜಾರಿಯಲ್ಲಿದೆ. ಶಿಲ್ಪಾ ಶೆಟ್ಟಿ, ರಾಜ್ ಕುಂದ್ರಾ ದಂಪತಿಯ ವಿದೇಶ ಪ್ರಯಾಣದ ಮೇಲೆ ಕೋರ್ಟ್ ನಿಷೇಧ ಹೇರಿದೆ. ಇತ್ತೀಚೆಗೆ ವಿದೇಶ ಪ್ರಯಾಣಕ್ಕೆ ಅವಕಾಶ ಕೋರಿ ಅರ್ಜಿ ಸಲ್ಲಿಸಿದ್ದ ದಂಪತಿಗೆ ಕೋರ್ಟ್ 60 ಕೋಟಿ ರೂ. ಠೇವಣಿ ಇಡುವಂತೆ ಕೇಳಿತ್ತು. ಬಳಿಕ ಶಿಲ್ಪಾ ದಂಪತಿ ಅರ್ಜಿ ಹಿಂಪಡೆದಿದ್ದರು. ಇದೀಗ ಕಾನೂನು ಹೋರಾಟದ ನಡುವೆ ಅಮ್ಮನ ಆರೋಗ್ಯವನ್ನೂ ನೋಡಿಕೊಳ್ಳುವ ಜವಾಬ್ದಾರಿ ಶಿಲ್ಪಾ ಹೆಗಲೇರಿದೆ.



# 42 ವರ್ಷಗಳ ನಂತರ ಇಂಗ್ಲೆಂಡ್‌ಗೆ ಸೋಲು

ಇಂಗ್ಲೆಂಡ್ ವಿರುದ್ಧ ಮೂರು ಪಂದ್ಯಗಳ ಏಕದಿನ ಸರಣಿಯನ್ನು ನ್ಯೂಜಿಲೆಂಡ್ 3-0 ಅಂತರದಿಂದ ಕ್ಲೀನ್ ಸ್ವೀಪ್ ಮಾಡುವ ಮೂಲಕ ಇತಿಹಾಸ ನಿರ್ಮಿಸಿದೆ. 42 ವರ್ಷಗಳ ನಂತರ ಇಂಗ್ಲೆಂಡ್ ತಂಡವನ್ನು ಏಕದಿನ ಸರಣಿಯಲ್ಲಿ ಕ್ಲೀನ್ ಸ್ವೀಪ್ ಮಾಡಿದ ಕಿವೀಸ್, ಕೊನೆಯ ಪಂದ್ಯದಲ್ಲಿ ಇಂಗ್ಲೆಂಡ್ ನೀಡಿದ 222 ರನ್ ಗಳ ಗುರಿ ಬೆನ್ನತ್ತಿ 8 ವಿಕೆಟ್ ನಷ್ಟಕ್ಕೆ ಜಯ ಸಾಧಿಸಿತು. ಬೌಲರ್‌ಗಳ ಮಿಂಚಿನ ಪ್ರದರ್ಶನ ಮತ್ತು ಕೆಳ ಕ್ರಮಾಂಕದ ಬ್ಯಾಟ್ಸ್‌ಮನ್‌ಗಳ ಜವಾಬ್ದಾರಿಯುತ ಆಟ ಈ ಜಯಕ್ಕೆ ಕಾರಣವಾಯಿತು. ನ್ಯೂಜಿಲೆಂಡ್ ಮತ್ತು ಇಂಗ್ಲೆಂಡ್ ನಡುವೆ ನಡೆದ ಮೂರು ಪಂದ್ಯಗಳ ಏಕದಿನ ಸರಣಿಯನ್ನು ಆತಿಥೇಯ ನ್ಯೂಜಿಲೆಂಡ್ 3-0 ಅಂತರದಿಂದ ಗೆದ್ದುಕೊಳ್ಳುವಲ್ಲಿ ಯಶಸ್ವಿಯಾಗಿದೆ. ವೆಲ್ಲಿಂಗ್ಟನ್‌ನ ಸ್ಕೈ ಕ್ರೀಡಾಂಗಣದಲ್ಲಿ ನಡೆದ ಕೊನೆಯ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ 222 ರನ್‌ಗಳಿಗೆ ಆಲೌಟ್ ಆಯಿತು. ಈ ಗುರಿ ಬೆನ್ನಟ್ಟಿದ ನ್ಯೂಜಿಲೆಂಡ್ ಕೂಡ ಗೆಲುವಿಗಾಗಿ ಸಾಕಷ್ಟು ಶ್ರಮಿಸಬೇಕಾಯಿತು. ಅಂತಿಮವಾಗಿ ಕಿವೀಸ್ ತಂಡ 8 ವಿಕೆಟ್‌ಗಳನ್ನು ಕಳೆದುಕೊಂಡು 45ನೇ ಓವರ್‌ನಲ್ಲಿ ಜಯದ ನಗೆ ಬೀರಿತು. ಇದರೊಂದಿಗೆ, ಕಿವೀಸ್ ತಂಡವು ಸರಣಿಯಲ್ಲಿ ಇಂಗ್ಲೆಂಡ್ ತಂಡವನ್ನು 3-0 ಅಂತರದಿಂದ ಸೋಲಿಸಿ ಕ್ಲೀನ್ ಸ್ವೀಪ್ ಸಾಧಿಸಿತು. ಗಮನಾರ್ಹವಾಗಿ, ನ್ಯೂಜಿಲೆಂಡ್ 42 ವರ್ಷಗಳ ನಂತರ ಏಕದಿನ ಪಂದ್ಯಗಳಲ್ಲಿ ಇಂಗ್ಲೆಂಡ್ ತಂಡವನ್ನು ಕ್ಲೀನ್ ಸ್ವೀಪ್ ಮಾಡಿದ ದಾಖಲೆ ನಿರ್ಮಿಸಿದೆ. ಈ ಹಿಂದೆ 1983 ರಲ್ಲಿ ಇಂಗ್ಲೆಂಡ್ ತಂಡವನ್ನು ನ್ಯೂಜಿಲೆಂಡ್ ಏಕದಿನ ಸರಣಿಯಲ್ಲಿ ಕ್ಲೀನ್ ಸ್ವೀಪ್ ಮಾಡಿತ್ತು.

ಟಾಸ್ ಗೆದ್ದು ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡ ನ್ಯೂಜಿಲೆಂಡ್, ಇಂಗ್ಲೆಂಡ್ ತಂಡವನ್ನು ಆರಂಭದಲ್ಲೇ ಕಟ್ಟಿಹಾಕಿತು. ಇಂಗ್ಲೆಂಡ್ ತಂಡದ ಅಗ್ರ ನಾಲ್ವರು ಬ್ಯಾಟ್ಸ್‌ಮನ್‌ಗಳು ಕೇವಲ 31 ರನ್‌ಗಳಿಗೆ ಪೆವಿಲಿಯನ್ ಸೇರಿಕೊಂಡರು. ಆ ನಂತರ 102 ರನ್ ತಲುಪುವಷ್ಟರಲ್ಲಿ ತಂಡದ ಏಳು ವಿಕೆಟ್‌ಗಳು ಪತನಗೊಂಡವು. ಆದಾಗ್ಯೂ, ಜೇಮೀ ಓವರ್ಟನ್ 68 ರನ್‌ಗಳ ನಿರ್ಣಾಯಕ ಇನ್ನಿಂಗ್ಸ್ ಆಡುವ ಮೂಲಕ ತಂಡವು 200 ರನ್‌ಗಳ ಗಡಿ ದಾಟಲು ಸಹಾಯ ಮಾಡಿದರು. ಉಳಿದಂತೆ ಬ್ರೈಡನ್ ಕಾರ್ಸ್ 36 ರನ್ ಮತ್ತು ಜೋಸ್ ಬಟ್ಲರ್ 38 ರನ್‌ಗಳ ಕೊಡುಗೆ ನೀಡಿದರು. ಅಂತಿಮವಾಗಿ ಇಂಗ್ಲೆಂಡ್ 40.2 ಓವರ್‌ಗಳಲ್ಲಿ 222 ರನ್‌ಗಳಿಗೆ ಆಲೌಟ್ ಆಯಿತು. ಮತ್ತೊಂದೆಡೆ ಅದ್ಭುತ ಬೌಲಿಂಗ್ ಪ್ರದರ್ಶನ ನೀಡಿದ ನ್ಯೂಜಿಲೆಂಡ್‌ನ ವೇಗಿಗಳಾದ ಬ್ಲೇರ್ ಟಿಕ್ನರ್ 10 ಓವರ್‌ಗಳಲ್ಲಿ 64 ರನ್‌ಗಳಿಗೆ 4 ವಿಕೆಟ್‌ಗಳನ್ನು ಪಡೆದರೆ, ಜಾಕೋಬ್ ಡಫಿ 3 ವಿಕೆಟ್‌ಗಳನ್ನು ಪಡೆದರು.

ಜ್ಯಾಕ್ ಫೌಲ್ಕ್ಸ್ ಕೂಡ ಎರಡು ವಿಕೆಟ್ ಉರುಳಿಸಿದರೆ ಮಿಚೆಲ್ ಸ್ಯಾಂಟ್ನರ್ 1 ವಿಕೆಟ್ ಪಡೆದರು. 223 ರನ್‌ಗಳ ಗುರಿ ಬೆನ್ನಟ್ಟಿದ ನ್ಯೂಜಿಲೆಂಡ್ ಉತ್ತಮ ಆರಂಭವನ್ನು ಪಡೆದುಕೊಂಡಿತು. ಮೊದಲ ವಿಕೆಟ್‌ಗೆ 78 ರನ್‌ಗಳ ಜೊತೆಯಾಟ ಸಿಕ್ಕಿತು. ಆದರೆ, ಆ ನಂತರ ತಂಡದ ಇನ್ನಿಂಗ್ಸ್ ಕುಸಿಯಿತು. ವಿಕೆಟ್‌ಗಳು ಒಂದರ ನಂತರ ಒಂದರಂತೆ ಬಿದ್ದವು. ಹೀಗಾಗಿ ನ್ಯೂಜಿಲೆಂಡ್ 196 ರನ್‌ಗಳಿಗೆ 8 ವಿಕೆಟ್‌ಗಳನ್ನು ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ಈ ಅವಧಿಯಲ್ಲಿ ತಂಡಕ್ಕೆ ಗೆಲ್ಲಲು ಇನ್ನೂ 27 ರನ್‌ಗಳು ಬೇಕಾಗಿದ್ದವು. ಆದಾಗ್ಯೂ, ಜ್ಯಾಕ್ ಫೌಲ್ಕ್ಸ್ ಮತ್ತು ಬ್ಲೇರ್ ಟಿಕ್ನರ್ ಉತ್ತಮ ಜೊತೆಯಾಟವನ್ನಾಡಿ ತಂಡಕ್ಕೆ ಅಮೋಘ ಗೆಲುವು ತಂದುಕೊಟ್ಟರು. ಜ್ಯಾಕ್ ಫೌಲ್ಕ್ಸ್ 14 ರನ್ ಮತ್ತು ಬ್ಲೇರ್ ಟಿಕ್ನರ್ 18 ರನ್ ಬಾರಿಸಿ ಅಜೇಯರಾಗಿ ಉಳಿದರು.

**ನ್ಯೂಜಿಲೆಂಡ್ 3-0 ಅಂತರದ ಜಯ**

# ಶ್ರೇಯಸ್ ಆಸ್ಪತ್ರೆಯಿಂದ ಡಿಸ್ಚಾರ್ಜ್

ಸಿಡ್ನಿಯಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ ಮೂರನೇ ಏಕದಿನ ಪಂದ್ಯದ ವೇಳೆ ಟೀಮ್ ಇಂಡಿಯಾ ಆಟಗಾರ ಶ್ರೇಯಸ್ ಅಯ್ಯರ್ ಗಂಭೀರವಾಗಿ ಗಾಯಗೊಂಡಿದ್ದರು. ಹೀಗಾಗಿ ಅವರನ್ನು ಸಿಡ್ನಿಯಲ್ಲಿರುವ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇದೀಗ ವೈದ್ಯರ ಮೇಲ್ವಿಚಾರಣೆಯಲ್ಲಿರುವ ಅಯ್ಯರ್ ಶೀಘ್ರದಲ್ಲೇ ಭಾರತಕ್ಕೆ ಮರಳಲಿದ್ದಾರೆ. ಭಾರತ ಏಕದಿನ ತಂಡದ ಉಪ ನಾಯಕ ಶ್ರೇಯಸ್ ಅಯ್ಯರ್ ಸಿಡ್ನಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ.

ಆಸ್ಟ್ರೇಲಿಯಾ ವಿರುದ್ಧದ ಮೂರನೇ ಏಕದಿನ ಪಂದ್ಯದ ವೇಳೆ ಗಂಭೀರವಾಗಿ ಗಾಯಗೊಂಡಿದ್ದ ಅಯ್ಯರ್ ಕಳೆದ ಕೆಲ ದಿನಗಳಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಇದೀಗ ಚೇತರಿಸಿಕೊಂಡಿರುವ ಅವರು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ.

ಇದಾಗ್ಯೂ ಶ್ರೇಯಸ್ ಅಯ್ಯರ್ ಭಾರತಕ್ಕೆ ಮರಳಲು ಕೆಲ ದಿನಗಳನ್ನು ತೆಗೆದುಕೊಳ್ಳಲಿದ್ದಾರೆ. ಬಿಸಿಸಿಐ ಮೂಲಗಳ ಮಾಹಿತಿ ಪ್ರಕಾರ, ಅಯ್ಯರ್ ಅವರ ಆರೋಗ್ಯವು ಸ್ಥಿರವಾಗಿದ್ದು, ಚೆನ್ನಾಗಿ ಚೇತರಿಸಿಕೊಳ್ಳುತ್ತಿದ್ದಾರೆ. ಅವರು ಮುಂದಿನ ವೈದ್ಯಕೀಯ ಸಮಾಲೋಚನೆಗಾಗಿ ಸಿಡ್ನಿಯಲ್ಲಿಯೇ ಇರಲಿದ್ದಾರೆ. ಆ ಬಳಿಕ ಅವರು ಪ್ರಯಾಣಿಸಲು ಯೋಗ್ಯರೆಂದು ಪರಿಗಣಿಸಲ್ಪಟ್ಟ ನಂತರ ಭಾರತಕ್ಕೆ ಹಿಂತಿರುಗಲಿದ್ದಾರೆ ಎಂದು ತಿಳಿದು ಬಂದಿದೆ.

ಅಕ್ಟೋಬರ್ 25 ರಂದು ಸಿಡ್ನಿಯಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ ಮೂರನೇ ಏಕದಿನ ಪಂದ್ಯದ ವೇಳೆ ಹರ್ಷಿತ್ ರಾಣಾ ಅವರ ಎಸೆತದಲ್ಲಿ ಅಲೆಕ್ಸ್ ಕ್ಯಾರಿ ಭರ್ಜರಿ ಹೊಡೆತ ಬಾರಿಸಿದ್ದರು. ಈ ವೇಳೆ ಬ್ಯಾಕ್‌ವರ್ಡ್ ಪಾಯಿಂಟ್‌ನಲ್ಲಿ ನಿಂತಿದ್ದ ಅಯ್ಯರ್ ವೇಗವಾಗಿ ಓಡಿ ಹೋಗಿ ಡೈವಿಂಗ್ ಕ್ಯಾಚ್ ಹಿಡಿದಿದ್ದರು.

ಈ ಡೈವಿಂಗ್ ವೇಳೆ ಅವರ ಎಡ ಪಕ್ಕೆಲುಬುಗಳಿಗೆ ಗಂಭೀರ ಪೆಟ್ಟಾಗಿತ್ತು. ಇದರಿಂದ ಅವರ ಪಕ್ಕೆಲುಬಿನ ಮೇಲ್ಭಾಗದ ಅಂಗದಲ್ಲಿ (ಗುಲ್ಮ) ಆಂತರಿಕ ರಕ್ತಸ್ರಾವವಾಗಿತ್ತು. ಸ್ಕ್ಯಾನಿಂಗ್ ರಿಪೋರ್ಟ್‌ನಲ್ಲಿ ಶ್ರೇಯಸ್ ಅಯ್ಯರ್ ಅವರ ಗುಲ್ಮದ ಭಾಗವು ಛಿದ್ರವಾಗಿರುವುದು ಕಂಡು ಬಂದಿದೆ. ಹೀಗಾಗಿ ಅವರನ್ನು ಇಂಟರ್ವೆನ್ಷನಲ್ ಟ್ರಾನ್ಸ್-ಕ್ಯಾತಿಟರ್ ಎಂಬೋಲೈಸೇಶನ್ ಚಿಕಿತ್ಸೆಗೆ ಒಳಪಡಿಸಲಾಗಿತ್ತು.



# ಟೀಂ ಇಂಡಿಯಾಗೆ ಬಿಗ್ ರಿಲೀಫ್

ಭಾರತ-ಆಸ್ಟ್ರೇಲಿಯಾ ಟಿ20 ಸರಣಿಯಲ್ಲಿ ಟೀಂ ಇಂಡಿಯಾಕ್ಕೆ ಶುಭ ಸುದ್ದಿ. 2ನೇ ಪಂದ್ಯದಲ್ಲಿ ಭಾರತದ ಸೋಲಿಗೆ ಪ್ರಮುಖ ಕಾರಣರಾಗಿದ್ದ ಆಸ್ಟ್ರೇಲಿಯಾದ ಅನುಭವಿ ವೇಗಿ ಜೋಶ್ ಹೇಜಲ್‌ವುಡ್ ಉಳಿದ ಪಂದ್ಯಗಳಿಂದ ಹೊರಬಿದ್ದಿದ್ದಾರೆ. ಮುಂಬರು ಆಶಸ್ ಸರಣಿಯನ್ನು ಗಮನದಲ್ಲಿಟ್ಟುಕೊಂಡು ವಿಶ್ರಾಂತಿ ಪಡೆಯುತ್ತಿರುವ ಹೇಜಲ್‌ವುಡ್ ಅನುಪಸ್ಥಿತಿ ಭಾರತಕ್ಕೆ ಸರಣಿ ಗೆಲ್ಲಲು ದೊಡ್ಡ ಅವಕಾಶವಾಗಿದೆ. ಮುಂದಿನ ಮೂರು ಪಂದ್ಯಗಳು ಭಾರತಕ್ಕೆ ನಿರ್ಣಾಯಕ. ಆಸ್ಟ್ರೇಲಿಯಾ ವಿರುದ್ಧದ ಐದು ಪಂದ್ಯಗಳ ಟಿ20 ಸರಣಿಯ ಎರಡನೇ ಪಂದ್ಯವನ್ನು ಸೋತಿರುವ ಟೀಂ ಇಂಡಿಯಾಕ್ಕೆ ಮುಂದಿನ ಮೂರು ಪಂದ್ಯಗಳು ಸರಣಿ ಗೆಲ್ಲಲು ನಿರ್ಣಾಯಕವಾಗಿವೆ. ಈ ಪ್ರವಾಸದಲ್ಲಿ ಟೀಂ ಇಂಡಿಯಾ ಟಿ20 ಸರಣಿಯನ್ನು ಗೆಲ್ಲಬೇಕಾದರೆ, ಉಳಿದ 3 ಪಂದ್ಯಗಳನ್ನು ಯಾವುದೇ ಬೆಲೆ ತೆತ್ತಾದರೂ ಗೆಲ್ಲಲೇಬೇಕು. ಇದಕ್ಕೆ ಪೂರಕವಾಗಿ ಇದೀಗ ಟೀಂ ಇಂಡಿಯಾಕ್ಕೆ ಶುಭ ಸುದ್ದಿಯೊಂದು ಸಿಕ್ಕಿದ್ದು, ಎರಡನೇ ಟಿ20 ಪಂದ್ಯದಲ್ಲಿ ಟೀಂ ಇಂಡಿಯಾದ ಬ್ಯಾಟಿಂಗ್ ಬೆನ್ನೆಲುಬನ್ನು ಮುರಿದಿದ್ದ ಆಸ್ಟ್ರೇಲಿಯಾದ ಅನುಭವಿ ವೇಗದ ಬೌಲರ್ ಜೋಶ್ ಹೇಜಲ್‌ವುಡ್ ಸರಣಿಯ ಉಳಿದ ಮೂರು ಪಂದ್ಯಗಳಿಂದ ಹೊರಗುಳಿಯುತ್ತಿದ್ದಾರೆ. ಅವರ ಅನುಪಸ್ಥಿತಿಯಲ್ಲಿ ಆಸ್ಟ್ರೇಲಿಯಾದ ಬೌಲಿಂಗ್ ಕೊಂಚ ದುರ್ಬಲವಾಗಲಿದ್ದು, ಟೀಂ ಇಂಡಿಯಾ ಇದನ್ನು ಸದುಪಯೋಗಪಡಿಸಿಕೊಳ್ಳಬೇಕಿದೆ. ಸರಣಿಯಿಂದ ಹೊರಬಿದ್ದ ಹೇಜಲ್‌ವುಡ್ ಮೇಲೆ ಹೇಳಿದಂತೆ ಎರಡನೇ ಟಿ20ಪಂದ್ಯದಲ್ಲಿ ಅದ್ಭುತ ಪ್ರದರ್ಶನ ನೀಡಿದ ಆಸ್ಟ್ರೇಲಿಯಾದ ವೇಗಿ ಜೋಶ್ ಹೇಜಲ್‌ವುಡ್ ಐದು ಪಂದ್ಯಗಳ ಟಿ20 ಸರಣಿಯ ಉಳಿದ ಪಂದ್ಯಗಳನ್ನು ಆಡುವುದಿಲ್ಲ. ನವೆಂಬರ್ ಅಂತ್ಯದಲ್ಲಿ ಆಶಸ್ ಟೆಸ್ಟ್ ಸರಣಿ ಆರಂಭವಾಗಲಿದ್ದು, ಐದು ಪಂದ್ಯಗಳ ಟೆಸ್ಟ್ ಸರಣಿಗೆ ಸಂಪೂರ್ಣವಾಗಿ ಫಿಟ್ ಆಗಿರಬೇಕೆಂಬ ಉದ್ದೇಶದಿಂದ ಹ್ಯಾಜಲ್‌ವುಡ್‌ಗೆ ವಿಶ್ರಾಂತಿ ನೀಡಲು ಕ್ರಿಕೆಟ್ ಆಸ್ಟ್ರೇಲಿಯಾ ನಿರ್ಧರಿಸಿದೆ. ಮೆಲ್ಬೋರ್ನ್‌ನಲ್ಲಿ ನಡೆದ ಭಾರತದ ವಿರುದ್ಧದ 2ನೇ ಟಿ20 ಪಂದ್ಯದಲ್ಲಿ ಹೇಜಲ್‌ವುಡ್ ನಾಲ್ಕು ಓವರ್‌ಗಳಲ್ಲಿ ಕೇವಲ 13 ರನ್‌ಗಳನ್ನು ನೀಡಿ ಪ್ರಮುಖ ಮೂವರು ಆಟಗಾರರನ್ನು ಔಟ್ ಮಾಡಿದ್ದರು.

ಹೇಜಲ್‌ವುಡ್ ನೀಡಿದ ಆರಂಭಿಕ ಆಘಾತದಿಂದ ಚೇತರಿಸಿಕೊಳ್ಳದ ಟೀಂ ಇಂಡಿಯಾ, ನಿರಂತರವಾಗಿ ವಿಕೆಟ್ ಕಳೆದುಕೊಂಡಿತು. ಇದರ ಪರಿಣಾಮವಾಗಿ ಪೂರ್ಣ 20 ಓವರ್‌ಗಳನ್ನು ಆಡಲು ಸಾಧ್ಯವಾಗದೆ 18.4 ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು 125 ರನ್‌ಗಳಿಗೆ ಆಲೌಟ್ ಆಯಿತು ಈ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ 4 ವಿಕೆಟ್‌ಗಳ ಸುಲಭ ಜಯ ಸಾಧಿಸಿತು. ಇನ್ನು ಸರಣಿಯ ಉಳಿದ ಪಂದ್ಯಗಳಿಂದ ಹೊರಬಿದ್ದಿರುವ ಹೇಜಲ್‌ವುಡ್ ಅನುಪಸ್ಥಿತಿಯಲ್ಲಿ ಕ್ಸೇವಿಯರ್ ಬಾರ್ಟ್ಲೆಟ್, ನಾಥನ್ ಎಲ್ಲಿಸ್ ಅಥವಾ ಸೀನ್ ಅಬಾಟ್ ಈ ಮೂವರಲ್ಲಿ ಒಬ್ಬರು ಆಡುವ ಸಾಧ್ಯತೆಯಿದೆ.

**ಆಸ್ಟ್ರೇಲಿಯಾದ ಪರಿಷ್ಕೃತ ತಂಡ:** ಮಾರ್ಷ್, ಕ್ಸೇವಿಯರ್ ಬಾರ್ಟ್ಲೆಟ್, ಟಿಮ್ ಡೇವಿಡ್, ನಾಥನ್ ಎಲ್ಲಿಸ್, ಟ್ರಾವಿಸ್ ಹೆಡ್, ಜೋಶ್ ಇಂಗ್ಲಿಸ್, ಕುಹ್ನೆಮನ್, ಮಿಚೆಲ್ ಓವನ್, ಜೋಶ್ ಫಿಲಿಪ್, ಮ್ಯಾಥ್ಯೂ ಶಾರ್ಟ್, ಮಾರ್ಕಸ್ ಸ್ಟೊಯಿನಿಸ್, ಆಡಮ್ ಜಂಪಾ, ಮಹ್ಲಿ ಬಿಯರ್ಡ್‌ಮನ್, ಸೀನ್ ಅಬಾಟ್, ಬೆನ್ ದ್ವಾರಶುಯಿಸ್ (ಕೊನೆಯ 2 ಪಂದ್ಯಗಳಿಗೆ), ಗ್ಲೆನ್ ಮ್ಯಾಕ್ಸ್‌ವೆಲ್.

**ಹೇಜಲ್ ಬದಲು ಯಾರು**



# ಹರ್ಷಿತ್ ರಾಣಾಗೆ ಮತ್ತೊಮ್ಮೆ ಚಾನ್ಸ್

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಐದು ಪಂದ್ಯಗಳ ಸರಣಿಯ ಮೊದಲೆರಡು ಮ್ಯಾಚ್‌ಗಳು ಮುಗಿದಿವೆ. ಈ ಸರಣಿಯ ಮೊದಲ ಪಂದ್ಯವು ಮಳೆಯಿಂದಾಗಿ ರದ್ದಾದರೆ, ದ್ವಿತೀಯ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡ 4 ವಿಕೆಟ್‌ಗಳ ಜಯ ಸಾಧಿಸಿದೆ. ಇದೀಗ ಉಭಯ ತಂಡಗಳು ಮೂರನೇ ಪಂದ್ಯಕ್ಕಾಗಿ ಸಜ್ಜಾಗುತ್ತಿದೆ. ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಮೂರನೇ ಟಿ20 ಪಂದ್ಯ ನಾಳೆ (ನವೆಂಬರ್ 2) ನಡೆಯಲಿದೆ. ಹೋಬರ್ಟ್‌ನ ಬೆಲ್ಲೆರಿವ್ ಓವಲ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಒಂದು ಬದಲಾವಣೆ ಮಾಡಿಕೊಳ್ಳುವುದು ಖಚಿತ. ಏಕೆಂದರೆ ಕಳೆದ ಪಂದ್ಯದಲ್ಲಿ ಕಣಕ್ಕಿಳಿದ ಕುಲ್ದೀಪ್ ಯಾದವ್ ಕಡೆಯಿಂದ ನಿರೀಕ್ಷಿತ ಪ್ರದರ್ಶನ ಮೂಡಿಬಂದಿರಲಿಲ್ಲ. ಎಂಸಿಜಿ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಕುಲ್ದೀಪ್ 2 ವಿಕೆಟ್ ಪಡೆದರೂ 20 ಎಸೆತಗಳಲ್ಲಿ ಬರೋಬ್ಬರಿ 45 ರನ್ ನೀಡಿದ್ದರು. ಹೀಗಾಗಿ ಮೂರನೇ ಪಂದ್ಯದಿಂದ ಹಿರಿಯ ಸ್ಪಿನ್ನರ್‌ನನ್ನು ಕೈ ಬಿಡುವ ಸಾಧ್ಯತೆಯಿದೆ. ಇನ್ನು ಕುಲ್ದೀಪ್ ಯಾದವ್ ಅವರನ್ನು ಹೊರಗಿಟ್ಟು ಎಡಗೈ ವೇಗಿ ಅರ್ಷದೀಪ್ ಸಿಂಗ್ ಅವರನ್ನು ಕಣಕ್ಕಿಳಿಸುವ ಸಾಧ್ಯತೆಯಿದೆ. ಇದಾಗ್ಯೂ ಹರ್ಷಿತ್ ರಾಣಾಗೆ ಮತ್ತೊಂದು ಚಾನ್ಸ್ ನೀಡಬಹುದು. ಏಕೆಂದರೆ ಕಳೆದ ಪಂದ್ಯದಲ್ಲಿ ಹರ್ಷಿತ್ ಬೌಲಿಂಗ್‌ನಲ್ಲಿ ವಿಫಲನಾದರೂ, ಬ್ಯಾಟಿಂಗ್‌ನಲ್ಲಿ 35 ರನ್‌ಗಳ ಕೊಡುಗೆ ನೀಡಿದ್ದರು. ಹೀಗಾಗಿ ಮೂರನೇ ಪಂದ್ಯದಲ್ಲೂ ಹರ್ಷಿತ್ ರಾಣಾ ಅವರನ್ನು ಆಲ್‌ರೌಂಡರ್ ಆಗಿ ಕಣಕ್ಕಿಳಿಸುವ ಸಾಧ್ಯತೆ ಹೆಚ್ಚಿದೆ.

**ಟೀಮ್ ಇಂಡಿಯಾದಲ್ಲಿ ಬದಲಾವಣೆ ಖಚಿತ**



**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**